RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 86 ಪುಟ: 06 ಗುರುವಾರ 27-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಬಾಲಿವುಡ್‌ನಲ್ಲಿ ಪಟ್ಟ, ಇಲ್ಲದಿದ್ರೆ ಚಟ್ಟ

ಎಂಟೇ ನಿಮಿಷದ ಅಭಿನಯ, ಆಸ್ಕರ್‌ಗೆ ಎಂಟ್ರಿ!

ಅವರ ಟಚ್ ನನಗೆ..!

ಪುಟ 6

# ಬಿಎಸ್‌ವೈ ನಾಯಕತ್ವದಲ್ಲೇ ಚುನಾವಣೆ

## ಎಲ್ಲರೂ ಒಂದಾಗಿ ಚುನಾವಣೆ ಎದುರಿಸುತ್ತೇವೆ: ಬಸವರಾಜ ಬೊಮ್ಮಾಯಿ

ಬೆಂಗಳೂರು: ಪಕ್ಷವನ್ನು ತಳಮಟ್ಟದಿಂದ ಸಂಘಟಿಸಿ ದೊಡ್ಡ ಮಟ್ಟಕ್ಕೆ ಬೆಳೆಸಿದ ಕೀರ್ತಿ ರೈತ ನಾಯಕ ಬಿ.ಎಸ್.ಯಡಿಯೂರಪ್ಪ ಅವರಿಗೆ ಸಲ್ಲುತ್ತದೆ. ಮುಂದಿನ ಚುನಾವಣೆಯನ್ನು ಅವರ ನಾಯಕತ್ವದಲ್ಲೇ ಎದುರಿಸುತ್ತೇವೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜಬೊಮ್ಮಾಯಿ ಗುರುವಾರ ಹೇಳಿದ್ದಾರೆ.

ಯಡಿಯೂರಪ್ಪ ಅವರ 83ನೇ ಹುಟ್ಟು ಹಬ್ಬದ ಹಿನ್ನೆಲೆಯಲ್ಲಿ ಬೆಂಗಳೂರಿನ ಅವರ ನಿವಾಸಕ್ಕೆ ತೆರಳಿ ಹುಟ್ಟು ಹಬ್ಬದ ಶುಭಾಶಯ ಕೋರಿ ನಂತರ ಮಾತನಾಡಿದ ಅವರು, ಬಿಎಸ್‌ವೈ ಅವರ ಮುಂದಾಳತ್ವದಲ್ಲಿ ಚುನಾವಣೆ ನಡೆದಾಗಲೆಲ್ಲಾ ಪಕ್ಷ ಅಧಿಕಾರಕ್ಕೆ ಬಂದಿದೆ. ಹಾಗಾಗಿ ಮುಂದಿನ ಚುನಾವಣೆ ಕೂಡ ಅವರ ಮಾರ್ಗದರ್ಶನದಲ್ಲೇ ನಡೆಯಲಿದೆ ಎಂದರು.

ಒಂದು ಪಕ್ಷ ಎಂದ ಮೇಲೆ ಭಿನ್ನಾಭಿಪ್ರಾಯಗಳು ಸಹಜ. ಹಾಗೇ ಭಾರತೀಯ ಜನತಾ ಪಕ್ಷದ ರಾಜ್ಯ ಘಟಕದಲ್ಲೂ ಕೂಡ ಹಲವು ಭಿನ್ನಾಭಿಪ್ರಾಯಗಳೂ ಇವೆ. ಅವು ಮುಂದಿನ ದಿನಗಳಲ್ಲಿ ಸರಿಹೋಗಲಿವೆ. ಅವುಗಳನ್ನು ಬಗೆಹರಿಸಿಕೊಂಡು ನಾವೆಲ್ಲರೂ ಒಟ್ಟಾಗಿ ಚುನಾವಣೆಯನ್ನು ಎದುರಿಸುತ್ತೇವೆ ಎಂದು ಹೇಳಿದರು

ಮುಂದಿನ ಚುನಾವಣೆಯಲ್ಲಿ ಪಕ್ಷ ಅಧಿಕಾರಕ್ಕೆ ಬರವುದು ಶತಸಿದ್ಧ. ಪಕ್ಷವನ್ನು ಅಧಿಕಾರಕ್ಕೆ ತಂದೇ ತರುತ್ತೇವೆ. ನಮ್ಮ ಪಕ್ಷ ಕೈಗೊಂಡಿರುವ ಜನಪರ ಕಾರ್ಯಗಳು ನಮ್ಮ ಕೈ ಹಿಡಿಯಲಿವೆ ಎಂಬ ವಿಶ್ವಾಸವನ್ನು ಬೊಮ್ಮಾಯಿ ವ್ಯಕ್ತಪಡಿಸಿದರು.

ಕೇಂದ್ರದಲ್ಲಿನ ಮೋದಿ ನೇತೃತ್ವದ ಸರ್ಕಾರ ದೇಶದ ಭವಿಷ್ಯಕ್ಕಾಗಿ ಕೈಗೊಂಡಿರುವ ಯೋಜನೆಗಳು ಕೂಡ ಈ ಬಾರಿ ಪಕ್ಷಕ್ಕೆ ವರದಾನವಾಗಲಿವೆ ಎಂದರು.

ಬಿಜೆಪಿಯನ್ನು ಅಧಿಕಾರಕ್ಕೆ ತರುವ ಸಂಕಲ್ಪ ಮಾಡುವ ದಿನ ಇದಾಗಿದ್ದು, ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರ ಮಾರ್ಗದರ್ಶನದಲ್ಲಿ ನಾವೆಲ್ಲ ಒಂದಾಗಿ ರಾಜ್ಯದಲ್ಲಿ ಮತ್ತೆ ಬಿಜೆಪಿಯನ್ನು ಅಧಿಕಾರಕ್ಕೆ



ತರುವ ಕೆಲಸ ಮಾಡುತ್ತೇವೆ ಎಂದು ಹೇಳಿದರು

ರಾಜ್ಯದಲ್ಲಿ ಯಡಿಯೂರಪ್ಪ ಜನಮೆಚ್ಚುಗೆ ಪಡೆದ ನಾಯಕ. ಹಲವು ಹೋರಾಟಗಳ ಮೂಲಕ ಅಧಿಕಾರಕ್ಕೆ ಬಂದಿದ್ದರು. ಅಧಿಕಾರಕ್ಕೆ ಬಂದ ಮೇಲೆ ಎಲ್ಲ ಸಮುದಾಯಗಳಿಗೂ ಕಾರ್ಯಕ್ರಮ ಕೊಟ್ಟರು. ಕೆಳಸ್ತರವರಿಗೆ, ಬಡವರಿಗೆ, ಮಹಿಳೆಯರು, ಮಕ್ಕಳಿಗೆ, ರೈತರಿಗೆ ಕಾರ್ಯಕ್ರಮ ಕೊಟ್ಟರು. ಜನ ಯಡಿಯೂರಪ್ಪ ಅವರ ಕಾರ್ಯಕ್ರಮಗಳನ್ನು ಬಯಸುತ್ತಿದ್ದಾರೆ. ಇವತ್ತು ಕಾಂಗ್ರೆಸ್ ದುರಾಡಳಿತ ದೂರ ಮಾಡಿ ಮತ್ತೆ ಬಿಜೆಪಿಯನ್ನು ಅಧಿಕಾರಕ್ಕೆ ತರುವ ಕೆಲಸ ಮಾಡಿಯೇ ತೀರುತ್ತೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಪ್ರತಿಪಕ್ಷದ ನಾಯಕ ಆರ್. ಅಶೋಕ್ , ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಅನೇಕ ನಾಯಕರು ಹಾಜರಿದ್ದರು.



ಅಮೇರಿಕಾದ ನ್ಯೂ ಜರ್ಸಿಯಲ್ಲಿರುವ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದಲ್ಲಿ ಮಹಾಶಿವರಾತ್ರಿಯ ಪೂಜೆಯಲ್ಲಿ ಶ್ರೀಮಠದ ಸದ್ಭಕ್ತರು ಪೂಜೆಯಲ್ಲಿ ಭಾಗವಹಿಸಿದ್ದರು

## ಸಲಹೆ ಕೊಡಲಿ, ಟೀಕೆ ಬಿಡಲಿ


**ಬೆಂಗಳೂರು:** ಉದ್ಯಮಿ ಮೋಹನದಾಸ್ ಪೈ ಅವರು ಬೆಂಗಳೂರು ನಗರದ ವ್ಯವಸ್ಥೆ ಸುಧಾರಣೆಗೆ ಸಲಹೆ ಕೊಡಲಿ, ಆದರೆ ವಿನಾ ಕಾರಣ ಟೀಕಿಸುವುದನ್ನು ಬಿಡಲಿ. ಪದೇ ಪದೇ ಹೀಗೆ ಮಾತನಾಡುತ್ತಿರುವ ಅವರ ಮನಸ್ಸಿನಲ್ಲಿ ಏನಿದೆಯೋ ಗೊತ್ತಿಲ್ಲ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಕುಟುಕಿದ್ದಾರೆ.



ಗುರುವಾರ ತಮ್ಮ ನಿವಾಸದಲ್ಲಿ ಭೇಟಿಯಾದ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಅವರು, 'ಪೈ ಕೂಡ ಬೆಂಗಳೂರಿನಿಂದಲೇ ಲಾಭ ಮಾಡಿಕೊಂಡಿರುವವರು. ಇಲ್ಲಿಂದಲೇ ಎಲ್ಲವನ್ನೂ ಪಡೆದುಕೊಂಡಿರುವವರು. ಈಗ ಅವರು ಇಲ್ಲಿಂದ ಹುಬ್ಬಳ್ಳಿಗಾಗಲಿ, ಮೈಸೂರಿಗಾಗಲಿ ಹೋಗಲು ತಯಾರಿಲ್ಲ' ಎಂದು ಹರಿಹಾಯ್ದಿದ್ದಾರೆ.ಪುಟ 2

## ಕಾಂಗ್ರೆಸ್‌ಲ್ಲಿ ದಿನೇದಿನೇ ಒಳಜಗಳ ಹೆಚ್ಚಳ

**ಬೆಂಗಳೂರು:** ಯಡಿಯೂರಪ್ಪ ಅವರ ಅಭಿಮಾನಿಗಳು, ಪಕ್ಷದ ಕಾರ್ಯಕರ್ತರು ಬಹಳ ಸಂಭ್ರಮದಿಂದ ಅವರ ಜನ್ಮದಿನವನ್ನು ರಾಜ್ಯದೆಲ್ಲೆಡೆ ಆಚರಣೆ ಮಾಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಅವರು ತಿಳಿಸಿದ್ದಾರೆ.



ಇಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಇವತ್ತು ಅಪ್ರತಿಮ ಹೋರಾಟಗಾರ, ಧೀಮಂತ ನಾಯಕ, ನಾಡಿನ ಮಾಜಿ ಮುಖ್ಯಮಂತ್ರಿಗಳು, ನನ್ನ ಪೂಜ್ಯ ತಂದೆಯವರಾದ ಬಿ.ಎಸ್.ಯಡಿಯೂರಪ್ಪ ಅವರ ಜನ್ಮದಿನ. ತಾಲ್ಲೂಕು ಕೇಂದ್ರಗಳು, ಜಿಲ್ಲಾ ಕೇಂದ್ರಗಳಲ್ಲಿ ಆಸ್ಪತ್ರೆಗಳಿಗೆ ಭೇಟಿ ಕೊಟ್ಟು ಅಲ್ಲಿ ಹಣ್ಣು ಹಂಚುವ ಕಾರ್ಯ ನೆರವೇರಿಸುತ್ತಿದ್ದಾರೆ. ದೇವಸ್ಥಾನಗಳಲ್ಲಿ ಪೂಜೆ ನೆರವೇರಿಸುತ್ತಿದ್ದಾರೆ ಎಂದು ವಿವರಿಸಿದರು.

ಯಡಿಯೂರಪ್ಪ ಅವರು ಮುಖ್ಯಮಂತ್ರಿಗಳಾಗಿದ್ದಾಗ ಭಾಗ್ಯಲಕ್ಷ್ಮೀ ಯೋಜನೆ, ಬೈಸಿಕಲ್ ಯೋಜನೆಗಳನ್ನು ಜಾರಿಗೊಳಿಸಿದ್ದರು. ಆ ಫಲಾನುಭವಿಗಳನ್ನು ನಮ್ಮ ಕಾರ್ಯಕರ್ತರು ಭೇಟಿ ಮಾಡುತ್ತಿದ್ದಾರೆ. ಯಡಿಯೂರಪ್ಪನವರ ಜನ್ಮದಿನವನ್ನು ಸರಳವಾಗಿ ಮತ್ತು ಅಭಿಮಾನದಿಂದ ಕಾರ್ಯಕರ್ತರು ರಾಜ್ಯಾದ್ಯಂತ ಆಚರಿಸುತ್ತಿದ್ದಾರೆ ಎಂದು ವಿವರಿಸಿದರು.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನಡೆಯ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಐತಿಹಾಸಿಕ ಕುಂಭಮೇಳ ಯಾವುದೇ ಪಕ್ಷಕ್ಕೆ ಸೀಮಿತವಾಗಿಲ್ಲ; ಜಗತ್ತಿನ ವಿವಿಧ ದೇಶಗಳಿಂದ ಕುಂಭಮೇಳದಲ್ಲಿ ಭಾಗವಹಿಸಿದ್ದಾರೆ. ಸುಮಾರು 65 ಕೋಟಿಗೂ ಹೆಚ್ಚು ಭಕ್ತಾದಿಗಳು, ಹಿಂದೂಗಳು ಬಂದು ಹೋಗಿದ್ದಾರೆ ಎಂದು ತಿಳಿಸಿದರು.

ಪ್ರಯಾಗ್‌ರಜ್‌ನಲ್ಲಿ ಪ್ರಸಿದ್ಧ ಕುಂಭ ಮೇಳ ಮುಕ್ತಾಯವಾಗಿದ್ದು, ಅದು ಯಾವುದೇ ರಾಜಕೀಯ ಪಕ್ಷಕ್ಕೆ ಸೀಮಿತವಾದ ಕಾರ್ಯಕ್ರಮವಲ್ಲ ಎಂದು ನುಡಿದರು. ಹಿಂದುತ್ವ, ಪ್ರಾಚೀನ ಪರಂಪರೆ, ಸಂಸ್ಕೃತಿ ಬಗ್ಗೆ ವಿಶ್ವಾಸ ಇಟ್ಟುಕೊಂಡವರು ಕುಂಭಮೇಳದಲ್ಲಿ ಭಾಗವಹಿಸಿದ್ದಾರೆ ಎಂದು ವಿವರಿಸಿದರು.ಪುಟ 2

## ಅಸ್ಸಾಂನಲ್ಲಿ 5 ರಷ್ಟು ತೀವ್ರತೆಯ ಭೂಕಂಪ

**ಅಸ್ಸಾಂ:** ಅಸ್ಸಾಂನ ಮೊರಿಗಾಂವ್ ಜಿಲ್ಲೆಯಲ್ಲಿ ಗುರುವಾರ ಮುಂಜಾನೆ 5ರಷ್ಟು ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರ ಓಅಖ ತಿಳಿಸಿದೆ. ಅಷ್ಟೇ ಅಲ್ಲ ರಾಜಧಾನಿ ಗುವಾಹಟಿ ಮತ್ತು ರಾಜ್ಯದ ಇತರ ಭಾಗಗಳಲ್ಲೂ ಕಂಪನದ ಅನುಭವವಾಗಿದೆ. ಭೂಕಂಪವು ಭೂಮಿಯ 16 ಕಿಲೋಮೀಟರ್ ಆಳದಲ್ಲಿ ಆಗಿದ್ದು, ತಡರಾತ್ರಿ ಸುಮಾರು 2:25 ಗಂಟೆಗೆ ಈ ಕಂಪನ ಸಂಭವಿಸಿದೆ ಎಂದು ಭೂಕಂಪ ಮಾನಿಟರಿಂಗ್ ಏಜೆನ್ಸಿ ಮೂಲಗಳು ತಿಳಿಸಿವೆ. ಪುಟ 2

## ಡಿಕ್ಕಿ: ಸವಾರರು ಸ್ಥಳದಲ್ಲೇ ಸಾವು

**ಹಾಸನ:** ದ್ವಿಚಕ್ರವಾಹನಕ್ಕೆ ಲಾರಿ ಡಿಕ್ಕಿ ಹೊಡೆದು ಇಬ್ಬರು ಸವಾರರು ಸ್ಥಳದಲ್ಲೇ ಮೃತಪಟ್ಟ ಘಟನೆ ಸಕಲೇಶಪುರ ಪಟ್ಟಣದಲ್ಲಿ ನಡೆದಿದೆ. ಆಕಾಶ್ (22) ಶಂಕರ್ (45) ಮೃತರಾಗಿದ್ದು, ಇವರು ಸಕಲೇಶಪುರ ತಾಲೂಕಿನ ವಳಲಹಳ್ಳಿ ಗ್ರಾಮದವರು. ಸಕಲೇಶಪುರ ಪಟ್ಟಣದಲ್ಲಿ ನಡೆಯುತ್ತಿರುವ ಸಕಲೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ಮುಗಿಸಿ ವಾಪಸ್ ಸ್ವಗ್ರಾಮಕ್ಕೆ ತೆರಳುವ ವೇಳೆ ಹಿಂಬದಿಂದ ಬಂದ ಲಾರಿ ಡಿಕ್ಕಿ ಹೊಡೆದಿದೆ. ಪರಿಣಾಮ ಸ್ಥಳದಲ್ಲೇ ಇಬ್ಬರು ಪುಟ 2

## ಕಪ್ಪು ಚಿರತೆ ಮರಿ ತ್ಯಾವರೆಕೊಪ್ಪ ಸಿಂಹಧಾಮಕ್ಕೆ

**ಕಾರವಾರ:** ಉತ್ತರ ಕನ್ನಡ ಜಿಲ್ಲೆಯ ಕುಮಟಾದಲ್ಲಿ ತನ್ನ ತಾಯಿಯಿಂದ ಬೇರ್ಪಟ್ಟ ಹೆಣ್ಣು ಕಪ್ಪು ಚಿರತೆ ಮರಿಯನ್ನು ಶಿವಮೊಗ್ಗ ಜಿಲ್ಲೆಯ ತ್ಯಾವರೆಕೊಪ್ಪ ಹುಲಿ ಸಿಂಹಧಾಮಕ್ಕೆ ಕೊಂಡೊಯ್ದು ಚಿಕಿತ್ಸೆ ನೀಡಲಾಗುತ್ತಿದೆ.ಕುಮಟಾ ತಾಲೂಕಿನ ಕತಗಾಲ ಅರಣ್ಯ ವಲಯದಲ್ಲಿ ಎರಡು ವರ್ಷದ ಕಪ್ಪು ಚಿರತೆ ಮರಿ ತನ್ನ ತಾಯಿಯಿಂದ ಬೇರ್ಪಟ್ಟು ಸೇತುವೆಯ ಪುಟ 2

## ಏಕತೆಯ 'ಮಹಾಯಜ್ಞ' ಮುಕ್ತಾಯಗೊಂಡಿದೆ

**ನವದೆಹಲಿ:** ಪ್ರಯಾಗ್‌ರಾಜ್‌ನಲ್ಲಿ 45 ದಿನಗಳ ಕಾಲ ನಡೆದ ಬೃಹತ್ ಮಹಾಕುಂಭಮೇಳವನ್ನು ಪ್ರಧಾನಿ ನರೇಂದ್ರ ಮೋದಿ ಅವರು 'ಏಕತೆಯ ಮಹಾಯಜ್ಞ' ಎಂದು ಬಣ್ಣಿಸಿದ್ದಾರೆ.

ಸಂಪನ್ನಗೊಂಡ ಮಹಾಕುಂಭಮೇಳದ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿರುವ ಪ್ರಧಾನಿ ನರೇಂದ್ರ ಮೋದಿ ಅವರು, "ಕಾರ್ಯಕ್ರಮವನ್ನು ಐತಿಹಾಸಿಕವಾಗಿ ಯಶಸ್ವಿಗೊಳಿಸಲು ಒಟ್ಟಾಗಿ ಬಂದ 140 ಕೋಟಿ ಭಾರತೀಯರ ಭಕ್ತಿ ಮತ್ತು ಭಾಗವಹಿಸುವಿಕೆಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಅಲ್ಲದೇ, 45 ದಿನಗಳ ಕಾಲ ನಡೆದ ಬೃಹತ್ ಮಹಾಕುಂಭವನ್ನು ಭಾರತದ ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಶಕ್ತಿಯ ಪ್ರತಿಬಿಂಬ" ಎಂದೂ ಸಹ ವರ್ಣಿಸಿದ್ದಾರೆ.

"ಐತಿಹಾಸಿಕ ಬೃಹತ್ ಮಹಾಕುಂಭಮೇಳವು ಮುಕ್ತಾಯಗೊಂಡಿದೆ. ಸಂಗಮದಲ್ಲಿ ಊಹಿಸಿದ್ದಕ್ಕಿಂತ ಹೆಚ್ಚಿನ ಭಕ್ತರು ಪವಿತ್ರ ಸ್ನಾನ ಮಾಡುವ ಮೂಲಕ ಗುಲಾಮಗಿರಿಯ ಮನಸ್ಥಿತಿಯ ಸಂಕೋಲೆಗಳನ್ನು ಮುರಿದು ಹೊರಬಂದಿದ್ದಾರೆ. ಭಾರತವು ಈಗ ಹೊಸ ಶಕ್ತಿಯೊಂದಿಗೆ ಮುನ್ನಡೆಯುತ್ತಿದೆ. ಇದು



ಭಾರತಕ್ಕೆ ಹೊಸ ಭವಿಷ್ಯ ಬರೆಯುವ ಯುಗದ ಬದಲಾವಣೆಯನ್ನು ಸೂಚಿಸುತ್ತದೆ" ಎಂದು ಮಹಾಕುಂಭಮೇಳದ ಬಗ್ಗೆ ವಿಸ್ತೃತವಾಗಿ ಬರೆದುಕೊಂಡಿದ್ದಾರೆ.

ಇಷ್ಟೊಂದು ದೊಡ್ಡ ಕಾರ್ಯಕ್ರಮ ಆಯೋಜನೆ ಸುಲಭವಲ್ಲ: "ಇಷ್ಟು ದೊಡ್ಡ ಕಾರ್ಯಕ್ರಮವನ್ನು ಆಯೋಜಿಸುವುದು ಸುಲಭವಲ್ಲ. ಗಂಗಾ, ಯಮುನಾ, ಸರಸ್ವತಿ ತಾಯಿಯ ಸೇವೆ ಸಲ್ಲಿಕೆಯಲ್ಲಿ ದೋಷವಾಗಿದ್ದರೆ ನಾನು ಕ್ಷಮೆ ಕೇಳುತ್ತೇನೆ. ಜನರಿಂದಲೂ ಕ್ಷಮೆ ಕೇಳುವೆ. ಈ ಮಹಾಕುಂಭದಲ್ಲಿ ಸಮಾಜದ ಪ್ರತಿಯೊಂದು ವರ್ಗದ ಜನರು ಒಟ್ಟುಗೂಡಿದ್ದರು. ಪುಟ 2 ಈ ಅವಿಸ್ಮರಣೀಯ ಏಕತೆಯ ದೃಶ್ಯವು ಕೋಟ್ಯಂತರ ಭಾರತೀಯರಿಗೆ ಆತ್ಮ ವಿಶ್ವಾಸ ತುಂಬಿದೆ. ಜನವರಿ 13 ರಂದು ಆರಂಭಗೊಂಡ ಮಹಾಕುಂಭಮೇಳಕ್ಕೆ ಕೊನೆಯ ದಿನದವರೆಗೆ 66 ಕೋಟಿಗೂ ಹೆಚ್ಚು ಜನರು ಭೇಟಿ ನೀಡಿದ್ದಾರೆ. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ನಾಯಕತ್ವದಲ್ಲಿ ಈ ಏಕತೆಯ ಮಹಾಕುಂಭ ಯಶಸ್ವಿಯಾಗಿದೆ. ಈ ಉತ್ಸವದ ಯಶಸ್ವಿಗೆ ಜನರ ಪ್ರಯತ್ನಗಳು, ಸಮರ್ಪಣೆ ಮತ್ತು ದೃಢಸಂಕಲ್ಪ ಕಾರಣ. ಈ ಕಾರ್ಯಕ್ರಮವು 'ಏಕ ಭಾರತ ಶ್ರೇಷ್ಠ ಭಾರತ' ಎನ್ನುವ ಪರಿಕಲ್ಪನೆಯನ್ನು ಹುಟ್ಟುಹಾಕಿದೆ" ಎಂದಿದ್ದಾರೆ.

ಕುಂಭಮೇಳದ ಯಶಸ್ಸಿಗೆ ಕಾರಣರಾದ ಪ್ರತಿಯೊಬ್ಬರಿಗೂ ಮೋದಿ ಅಭಿನಂದನೆ: "ಸ್ವಚ್ಛತಾ ಸಿಬ್ಬಂದಿ, ಪೊಲೀಸ್ ಸಿಬ್ಬಂದಿ, ದೋಣಿ ಚಾಲಕರು, ಅಡುಗೆಯವರು ಸೇರಿದಂತೆ ಎಲ್ಲರೂ ತಮ್ಮ ಭಕ್ತಿ ಮತ್ತು ಸೇವೆಯ ಭಾವನೆಯಿಂದ ಅವಿರತವಾಗಿ ಕೆಲಸ ಮಾಡುವ ಮೂಲಕ ಐತಿಹಾಸಿಕ ಬೃಹತ್ ಮಹಾಕುಂಭಮೇಳವನ್ನು ಯಶಸ್ವಿಗೊಳಿಸಿದರು. ಇದು ಮುಂಬರುವ ಹಲವು ಶತಮಾನಗಳಿಗೆ ಅಡಿಪಾಯ ಹಾಕಿದಂತಾಗಿದೆ. ಪುಟ 2

## ಕರ್ನಾಟಕ –ಮಹಾರಾಷ್ಟ್ರ ಮಧ್ಯೆ ಬಸ್ ಸಂಚಾರ ಆರಂಭ

**ಬೆಳಗಾವಿ:** ಕಂಡಕ್ಟರ್ ಮೇಲೆ ಹಲ್ಲೆ, ಕನ್ನಡ ಮರಾಠಿ ಭಾಷಾ ಗಲಾಟೆಯಿಂದ ಬಂದ್ ಆಗಿದ್ದ ಕರ್ನಾಟಕ – ಮಹಾರಾಷ್ಟ್ರ ಮಧ್ಯೆ ಬಸ್ ಸಂಚಾರ ಇಂದಿನಿಂದ ಪುನಾರಂಭಗೊಂಡಿದೆ.

ನಾಲ್ಕು ದಿನಗಳ ಬಳಿಕ ಇಂದಿನಿಂದ ಅಂತರರಾಜ್ಯಗಳ ಮಧ್ಯೆ ಬಸ್ ಸಂಚಾರ ಆರಂಭವಾಗಿದೆ. ಮಹಾರಾಷ್ಟ್ರದಲ್ಲಿ ಶಿವಸೇನೆ ಕಾರ್ಯಕರ್ತರು ಕರ್ನಾಟಕ ಬಸ್ ಗೆ ಮಸಿ ಬಳಿದು ಗೂಂಡಾಗಿರಿ ಪ್ರದರ್ಶಿಸಿದ್ದರು. ಇಷ್ಟಕ್ಕೆ ಸುಮ್ಮನಾಗದೇ ಕರ್ನಾಟಕ ಬಸ್ ಚಾಲಕನಿಂದ ಜೈ ಮಹಾರಾಷ್ಟ್ರ ಘೋಷಣೆ ಹಾಕಿಸಿದ್ದರು. ಇದಕ್ಕೆ ಬೆಳಗಾವಿ ಚಲೋ ಮೂಲಕ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಶಿವಸೇನೆ ಕಾರ್ಯಕರ್ತರಿಗೆ ತಕ್ಕ ಉತ್ತರ ಕೊಟ್ಟಿದ್ದರು.

ಈ ಮಧ್ಯೆ ಫೆಬ್ರವರಿ 23 ರಿಂದ ಎರಡು ರಾಜ್ಯಗಳ ನಡುವೆ ಬಸ್ ಸಂಚಾರ ಸಂಪೂರ್ಣ ಸ್ಥಗಿತಗೊಂಡಿತ್ತು. ನಾಲ್ಕು ದಿನ ಬಸ್ ಇಲ್ಲದಕ್ಕೆ ಎರಡು ರಾಜ್ಯದಲ್ಲಿ ಪ್ರಯಾಣಿಕರು ಪರದಾಟ ನಡೆಸಿದ್ದರು. ಅಲ್ಲದೆ ನಾಲ್ಕು ದಿನದಲ್ಲಿ ಕರ್ನಾಟಕ ಸರ್ಕಾರ ಕೋಟ್ಯಾಂತರ ರೂಪಾಯಿ ಆರ್ಥಿಕ ನಷ್ಟ ಅನುಭವಿಸಿದೆ.ಪುಟ 2

## ಎಫ್‌ಐಆರ್ ಆಗಿರದಿದ್ದರೂ ನಿರೀಕ್ಷಣಾ ಜಾಮೀನು

**ನವದೆಹಲಿ:** ಜಿಎಸ್‌ಟಿ (ಸರಕು ಮತ್ತು ಸೇವೆಗಳ ಕಾಯ್ದೆ) ಮತ್ತು ಕಸ್ಟಮ್ಸ್ ಕಾಯ್ದೆಗಳಿಗೂ ನಿರೀಕ್ಷಣಾ ಜಾಮೀನು ಕಾನೂನು ಅನ್ವಯವಾಗುತ್ತದೆ ಹಾಗೂ ಎಫ್‌ಐಆರ್ ಆಗಿರದಿದ್ದರೂ ವ್ಯಕ್ತಿಗಳು ನಿರೀಕ್ಷಣಾ ಜಾಮೀನು (ಬಂಧನ ಪೂರ್ವ ಜಾಮೀನು) ಕೋರಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಬಹುದು ಎಂದು ಸುಪ್ರೀಂ ಕೋರ್ಟ್ ಗುರುವಾರ ಮಹತ್ವದ ತೀರ್ಪು ನೀಡಿದೆ.

ಕಸ್ಟಮ್ಸ್ ಕಾಯ್ದೆ, ಜಿಎಸ್‌ಟಿ ಕಾಯ್ದೆಯಲ್ಲಿನ ದಂಡದ ನಿಬಂಧನೆಗಳನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ



ಮೇಲಿನ ತೀರ್ಪನ್ನು ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ, ನ್ಯಾಯಮೂರ್ತಿಗಳಾದ ಪುಟ 2

## ಹೋಟೆಲ್, ಉಪಹಾರ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧ


**ಬೆಂಗಳೂರು:** ಬೆಂಗಳೂರಿನ ಕೆಲವು ಹೋಟೆಲ್ ಹಾಗೂ ಉಪಾಹಾರ ಕೇಂದ್ರಗಳಲ್ಲಿ ಇಡ್ಲಿ ತಯಾರಿಸಲು ಪ್ಲಾಸ್ಟಿಕ್ ಹಾಳೆಗಳನ್ನು ಬಳಸಲಾಗುತ್ತಿದ್ದು, ವಿವಿಧೆಡೆಯಿಂದ ಸಂಗ್ರಹಿಸಲಾದ ಇಡ್ಲಿ ಮಾದರಿಗಳಲ್ಲಿ ಅಸುರಕ್ಷಿತ ಎಂಬುದು ತಿಳಿದು ಬಂದ ಬೆನ್ನಲ್ಲೆ ಇದೀಗ ಕ್ರಮಕ್ಕೆ ಸರ್ಕಾರ ಮುಂದಾಗಿದೆ.



ಈ ಕುರಿತು ಮಾತನಾಡಿರುವ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ರಾಜ್ಯದ ಹೋಟೆಲ್, ಉಪಾಹಾರ ಕೇಂದ್ರಗಳಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧಿಸಲಾಗುತ್ತಿದೆ. ಹೋಟೆಲ್, ರಸ್ತೆಬದಿ ತಿಂಡಿ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಕವರ್ ಬಳಸುವಂತಿಲ್ಲ. ಇನ್ಮುಂದೆ ಆಹಾರ ತಯಾರಿಕೆ, ವಿತರಣೆ ವೇಳೆ ಪ್ಲಾಸ್ಟಿಕ್ ಬಳಸಬಾರದು. ಈ ಬಗ್ಗೆ ಇನ್ನೆರಡು ದಿನಗಳಲ್ಲಿ ಅಧಿಕೃತ ಸುತ್ತೋಲೆ ಹೊರಡಿಸಲಾಗುತ್ತದೆ ಎಂದಿದ್ದಾರೆ. ಬೆಂಗಳೂರಿನ ವಿವಿಧೆಡೆಗಳಿಂದ ಇಡ್ಲಿ ಮಾದರಿಗಳನ್ನು ಪಡೆದಿದ್ದ ಆಹಾರ ಇಲಾಖೆ ಅವುಗಳನ್ನು ಪ್ರಯೋಗಾಲಯದಲ್ಲಿ ಪರೀಕ್ಷೆಗೆ ಒಳಪಡಿಸಿದ್ದು, ಇದೀಗ ಪ್ರಯೋಗಾಲಯ ವರದಿಯಲ್ಲಿ 35 ಕ್ಕೂ ಹೆಚ್ಚು ಇಡ್ಲಿ ಮಾದರಿಗಳು ಅಸುರಕ್ಷಿತ ಎಂಬ ಶಾಕಿಂಗ್ ವಿಚಾರ ಬಹಿರಂಗವಾಗಿತ್ತು. ಬೆಂಗಳೂರಿನ ವಿವಿಧ ಕಡೆಗಳಲ್ಲಿ ಹಲವು ಕಡೆ ಇಡ್ಲಿ ತಯಾರಿಕೆಯಲ್ಲಿ ಹತ್ತಿ ಬಟ್ಟೆಯ ಬದಲು ಪ್ಲಾಸ್ಟಿಕ್ ಕವರ್ ಬಳಸುತ್ತಿದ್ದಾರೆ. ಇಡ್ಲಿ ಮಾಡುವಾಗ ಮಾತ್ರವಲ್ಲದೇ , ಆಹಾರ ಬಡಿಸುವಾಗ ಮತ್ತು ಪ್ಯಾಕ್ ಮಾಡಿಪುಟ 2

## ಮರಾಠಿ ಪುಂಡರ ಶಾಶ್ವತ ಗಡಿಪಾರಿಗೆ ಒತ್ತಾಯ


**ಬೆಂಗಳೂರು:** ಬೆಳಗಾವಿ ಸಾರಿಗೆ ಬಸ್ ನಿರ್ವಾಹಕರು ಕನ್ನಡಿಗರ ಮೇಲೆ ಮರಾಠಿ ಭಾಷಾಂಧ ಪುಂಡರು ನಡೆಸಿದ ಕುಕೃತ್ಯವು ಯಾವುದೇ ನಾಗರೀಕ ಸಮಾಜವು ಸಹಿಸಲು ಸಾಧ್ಯವಿಲ್ಲ. ಇಂತವರನ್ನು ಗುರುತಿಸಿ ರಾಜ್ಯದಿಂದ ಶಾಶ್ವತವಾಗಿ ಗಡಿಪಾರು ಮಾಡಲು ಸಿಎಂ ಸಿದ್ದರಾಮಯ್ಯ ಅಚರ ಕೂಡಲೆ ಆದೇಶ ಹೊರಡಿಸಬೇಕು ಎಂದು ಆಪ್ ಆದ್ಮಿ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಒತ್ತಾಯಿಸಿದ್ದಾರೆ.



ಅನೇಕ ವರ್ಷಗಳಿಂದ ತಮ್ಮ ರಾಜಕೀಯ ಅಭಿಲಾಷೆಗಾಗಿ ಮಹಾರಾಷ್ಟ್ರ ಹಾಗೂ ಕರ್ನಾಟಕ ರಾಜ್ಯದ ಸಾಮರಸ್ಯ ಸಂಬಂಧಕ್ಕೆ ಧಕ್ಕೆ ತರುವ ಕೃತ್ಯಗಳನ್ನು ಎಸಗಿ ರಾಜ್ಯದ ಕಾನೂನು ಸುವ್ಯವಸ್ಥೆಗೆ ಭಂಗ ತರುತ್ತಿರುವ ಈ ಸಮಾಜದ್ರೋಹಿಗಳನ್ನು ಪುಟ 2

## ನಟ ಪೋಸಾನಿ ಕೃಷ್ಣ ಮುರಳಿ ಬಂಧನ

**ಹೈದರಾಬಾದ್:** ಚಲನಚಿತ್ರ ನಟ ಪೋಸಾನಿ ಕೃಷ್ಣ ಮುರಳಿ ಅವರನ್ನು ಆಂಧ್ರ ಪ್ರದೇಶ ಪೊಲೀಸರು ಬಂಧಿಸಿದ್ದಾರೆ.



ರಾಯಚೋಟಿ ಪೊಲೀಸರು ರಾಯದುರ್ಗದ ಮೈಹೋಮ್ ಭುಜಾ ಅಪಾರ್ಟ್‌ಮೆಂಟ್‌ನಲ್ಲಿ ವಾಸಿಸುವ ಪೋಸಾನಿ ಕೃಷ್ಣ ಮುರಳಿಯನ್ನು ವಶಕ್ಕೆ ಪಡೆದಿದ್ದಾರೆ. ಬಂಧನದ ಬಗ್ಗೆ ರಾಯದುರ್ಗ ಪೊಲೀಸರಿಗೆ ಮಾಹಿತಿ ನೀಡಲಾಗಿತ್ತು ಎಂದು ತಿಳಿದುಬಂದಿದೆ. ಟಿಡಿಪಿ ಮುಖ್ಯಸ್ಥ ಚಂದ್ರಬಾಬು ನಾಯ್ಡು ಮತ್ತು ಜನಸೇನಾ ಮುಖ್ಯಸ್ಥ ಪವನ್ ಕಲ್ಯಾಣ್ ಬಗ್ಗೆ ಅನುಚಿತ ಹೇಳಿಕೆ ನೀಡಿದ್ದಕ್ಕಾಗಿ ಪೋಸಾನಿ ವಿರುದ್ಧ ಆಂಧ್ರಪ್ರದೇಶದಾದ್ಯಂತ ಹಲವಾರು ಸ್ಥಳಗಳಲ್ಲಿ ಪ್ರಕರಣಗಳು ದಾಖಲಾಗಿವೆ. ಎಪಿ ಸಿಐಡಿ ಕೂಡ ಪ್ರಕರಣ ದಾಖಲಿಸಿಕೊಂಡಿದೆ . ಈ ಹಿನ್ನೆಲೆಯಲ್ಲಿ ಆಂಧ್ರ ಪ್ರದೇಶ ಪೊಲೀಸರು ಪೋಸಾನಿಯನ್ನು ಬಂಧಿಸಿದ್ದಾರೆ. ಪ್ರಸ್ತುತ ಅವರನ್ನು ರಾಜಂಪೇಟೆಗೆ ಸ್ಥಳಾಂತರಿಸಲಾಗುತ್ತಿದೆ ಎನ್ನಲಾಗಿದೆ. ವೈಎಸ್‌ಆರ್‌ಸಿಪಿ ಅಧಿಕಾರದಲ್ಲಿದ್ದಾಗ ಪೋಸಾನಿ ಕೃಷ್ಣ ಮುರಳಿ ಎಪಿಎಫ್‌ಟಿವಿಡಿಸಿಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು.

ಈ ಸಮಯದಲ್ಲಿ, ಪೋಸಾನಿ ಚಂದ್ರಬಾಬು, ಪವನ್ ಕಲ್ಯಾಣ್ ಮತ್ತು ನಾರಾ ಲೋಕೇಶ್ ಬಗ್ಗೆ ಅನುಚಿತ ಟೀಕೆಗಳನ್ನು ಮಾಡಿದ್ದಾರೆ ಎಂಬ ಆರೋಪಗಳಿವೆ.

ಈ ಸಂಬಂಧ, ಕಳೆದ ವರ್ಷ ನವೆಂಬರ್‌ನಲ್ಲಿ ಆಂಧ್ರಪ್ರದೇಶದಾದ್ಯಂತ ಹಲವಾರು ಸ್ಥಳಗಳಲ್ಲಿ ಪೋಸಾನಿ ವಿರುದ್ಧ ಪ್ರಕರಣಗಳು ದಾಖಲಾಗಿದ್ದವು. ಒಕ್ಕೂಟದ ನಾಯಕರ ದೂರಿನ ಆಧಾರದ ಮೇಲೆ ಎಪಿ ಸಿಐಡಿ ಕೂಡ ಪ್ರಕರಣ ದಾಖಲಿಸಿದೆ.ಪುಟ 2

# ನದಿ ಸ್ನಾನ: ಆರು ಮಂದಿ ಸಾವು!

ಮಹಾರಾಷ್ಟ್ರ: ಮಹಾಶಿವರಾತ್ರಿಯ ಸಂದರ್ಭದಲ್ಲಿ ನದಿಯಲ್ಲಿ ಸ್ನಾನ ಮಾಡಲು ತೆರಳಿದ್ದ ಆರು ಜನರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಹೃದಯವಿದ್ರಾವಕ ಘಟನೆ ಚಂದ್ರಾಪುರ ಜಿಲ್ಲೆಯಲ್ಲಿ ನಡೆದಿದೆ. ಚಂದ್ರಾಪುರ ಜಿಲ್ಲೆಯ ರಾಜುರಾ ಮತ್ತು ಸಾವ್ಲಿ ಎಂಬಲ್ಲಿ ಎರಡು ಪ್ರತ್ಯೇಕ ಸ್ಥಳಗಳಲ್ಲಿ ಈ ಘಟನೆಗಳು ನಡೆದಿವೆ.

ಸಾವ್ಲಿಯಲ್ಲಿ ನಗರದ ಒಂದೇ ಮನೆಯ ಮೂವರು ಸಹೋದರಿಯರು ಸಾವನ್ನಪ್ಪಿದ್ದಾರೆ. ರಾಜುರಾ ತಾಲೂಕಿನಲ್ಲಿಯೂ ಒಂದೇ ಗ್ರಾಮದ ಮೂವರು ಯುವಕರು ದುರಂತ ಅಂತ್ಯ ಕಂಡಿದ್ದಾರೆ.

ಮಹಾಶಿವರಾತ್ರಿಗೆಂದು ಚಂದ್ರಾಪುರ ಜಿಲ್ಲೆಯ ಬಳಿಯ ಮಾರ್ಕಂಡ ದೇವಸ್ಥಾನಕ್ಕೆ ಸಾವ್ಲಿಯ ಮಂಡಲ್ ಕುಟುಂಬ ದರ್ಶನಕ್ಕಾಗಿ ತೆರಳಿತ್ತು. ದೇವಸ್ಥಾನಕ್ಕೆ ತೆರಳುವ ವೇಲೆ ಹರಣಘಾಟ್ ರಸ್ತೆ ಕೆಟ್ಟಿದ್ದರಿಂದ, ಗಡ್ಚಿರೋಲಿ ಮೂಲಕ ಹಾದು ಹೋಗುತ್ತಿದ್ದರು. ಈ ವೇಳೆ, ವ್ಯಾಹದ್ ಭುಜ್‌ನಲ್ಲಿ ವೈನ್‌ಗಂಗಾ ನದಿ ನೋಡಿದ ಈ ಕುಟುಂಬ ಸ್ನಾನ ಮಾಡಲು ನಿರ್ಧರಿಸಿ ನದಿಗೆ ಇಳಿದಿದ್ದಾರೆ.

ಅವರಲ್ಲಿ ಮೂವರು ಸಹೋದರಿಯರಾದ ಪ್ರತಿಮಾ ಪ್ರಕಾಶ್ ಮಂಡಲ್ (23), ಕವಿತಾ ಪ್ರಕಾಶ್ ಮಂಡಲ್ (21), ಲಿಪಿಕಾ ಪ್ರಕಾಶ್ ಮಂಡಲ್ (18), ಅವರ ಚಿಕ್ಕಪ್ಪ, ಚಿಕ್ಕಮ್ಮ ಮತ್ತು ಅವರ ನಾಲ್ಕು ವರ್ಷದ ಮಗ ಇದ್ದರು. ನೀರಿನಲ್ಲಿ ಸ್ನಾನ ಮಾಡುತ್ತಿದ್ದ ವೇಳೆ ಓರ್ವ ತಂಗಿ ನೀರಿನ ಪ್ರವಾಹಕ್ಕೆ ಕೊಚ್ಚಿ ಹೋಗುತ್ತಿದ್ದಳು. ಅವಳು ಮುಳುಗುತ್ತಿರುವುದನ್ನು ನೋಡಿ ಇತರ ಇಬ್ಬರು ಸಹೋದರಿಯರು ಅವಳನ್ನು ರಕ್ಷಿಸಲು ಧಾವಿಸಿದ್ದಾರೆ. ದುರದೃಷ್ಟವಶಾತ್ ಮೂವರು ಕೂಡ ಮುಳುಗಿ ಪ್ರಾಣ ಬಿಟ್ಟಿದ್ದಾರೆ. ಸಾವ್ಲಿಯ ವಿಪತ್ತು ತಂಡ ಶವಗಳಿಗಾಗಿ ಪತ್ತೆ ಕಾರ್ಯಾಚರಣೆ ನಡೆಸುತ್ತಿದೆ. ಸಹೋದರಿಯರನ್ನು ಕಳೆದುಕೊಂಡ ಕುಟುಂಬ ರೋಧಿಸುತ್ತಿದೆ.

ವಾರ್ಧಾ ನದಿಯಲ್ಲಿ ಮೂವರು ಮುಳುಗಿ ಸಾವು: ಮತ್ತೊಂದು ಘಟನೆಯಲ್ಲಿ, ರಾಜೂರ ತಾಲೂಕಿನಲ್ಲಿ ಮಹಾಶಿವರಾತ್ರಿಯ ಹಿನ್ನೆಲೆ ವಾರ್ಧಾ ನದಿಯಲ್ಲಿ ಸ್ನಾನ ಮಾಡಲು ಮೂವರು ಯುವಕರು ತೆರಳಿದ್ದು, ನದಿಯಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ. ತುಷಾರ್ ಶಾಲಿಕ್ ಅತ್ರಮ್ (17), ಮಂಗೇಶ್ ಬಂಡು ಚನಕಪುರೆ (20) ಮತ್ತು ಅನಿಕೇತ್ ಶಂಕರ್ ಕೊಡಪೆ (18) ಮೃತರು.

ಇಲ್ಲಿ ಕೂಡ ಯುವಕರ ಮೃತದೇಹಕ್ಕಾಗಿ ದೋಣಿಯ ಮೂಲಕ ಹುಡುಕಾಟ ನಡೆಯುತ್ತಿದೆ. ಸದ್ಯ ತುಷಾರ್ ಶಾಲಿಕ್ ಅತ್ರಮ್ ಎಂಬ ಬಾಲಕನ ಮೃತ ದೇಹ ದೊರಕಿದೆ. ಇನ್ನುಳಿದವರಿಗಾಗಿ ಹುಡುಕಾಟ ನಡೆದಿದೆ. ಮಕ್ಕಳನ್ನು ಕಳೆದುಕೊಂಡ ಪೋಷಕರ ಆಕ್ರಂದನ ಮುಗಿಲು ಮುಟ್ಟಿದೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.



ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪರವರ ಹುಟ್ಟುಹಬ್ಬದ ಅಂಗವಾಗಿ ಶಾಸಕ ಕೆ. ಗೋಪಾಲಯ್ಯ ಅವರು ಯಡಿಯೂರಪ್ಪ ಅವರ ನಿವಾಸಕ್ಕೆ ತೆರಳಿ ಸನ್ಮಾನಿಸಿ ಹುಟ್ಟುಹಬ್ಬದ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಪಾಲಿಕೆ ಮಾಜಿ ಉಪಮೇಯರ ಹೇಮಲತಾ ಗೋಪಾಲಯ್ಯ ಡಾ, ಮಂಜುನಾಥ್ ಗೋಪಾಲಯ್ಯ ಪಾಲಿಕೆ ಮಾಜಿ ಸದಸ್ಯ ನಾಗರತ್ನ, ಬಿಜೆಪಿ ಮುಖಂಡ ವೆಂಕಟೇಶ್ ಮೂರ್ತಿ ಮುಂತಾದವರು ಹಾಜರಿದ್ದರು.

# ಇಡ್ಲಿ ಪ್ರಿಯರಿಗೆ ಶಾಕಿಂಗ್ ನ್ಯೂಸ್: ಆಹಾರ ಇಲಾಖೆ ಪರೀಕ್ಷೆಯಲ್ಲಿ ಆಘಾತಕಾರಿ ಅಂಶ ಬಹಿರಂಗ

**ಬೆಂಗಳೂರು:** ಬೆಂಗಳೂರಿನ ಇಡ್ಲಿ ಪ್ರಿಯರಿಗೆ ಆಹಾರ ಇಲಾಖೆ ಶಾಕಿಂಗ್ ಸುದ್ದಿಯೊಂದನ್ನ ನೀಡಿದೆ. ಬೆಂಗಳೂರಿನ ಅನೇಕ ಹೋಟೆಲ್‌ಗಳಲ್ಲಿ ತಯಾರಾಗುವ ಇಡ್ಲಿ ಅಸುರಕ್ಷಿತ ಎಂಬುದು ಆಹಾರ ಇಲಾಖೆಯ ಪ್ರಯೋಗದಿಂದ ದೃಢಪಟ್ಟಿದೆ.

ಹೌದು, ಬೆಂಗಳೂರಿನ ವಿವಿಧೆಡೆಗಳಿಂದ ಇಡ್ಲಿ ಮಾದರಿಗಳನ್ನು ಪಡೆದಿದ್ದ ಆಹಾರ ಇಲಾಖೆ ಅವುಗಳನ್ನು ಪ್ರಯೋಗಾಲಯದಲ್ಲಿ ಪರೀಕ್ಷೆಗೆ ಒಳಪಡಿಸಿದ್ದು, ಇದೀಗ ಪ್ರಯೋಗಾಲಯ ವರದಿಯಲ್ಲಿ 35 ಕ್ಕೂ ಹೆಚ್ಚು ಇಡ್ಲಿ ಮಾದರಿಗಳು ಅಸುರಕ್ಷಿತ ಎಂಬ ಶಾಕಿಂಗ್ ವಿಚಾರ ಬಹಿರಂಗವಾಗಿದೆ.

ಬೆಂಗಳೂರಿನ ಹಲವಡೆ ಇತ್ತೀಚೆಗೆ ಇಡ್ಲಿ ತಯಾರಿಸಲು ಬಟ್ಟೆಯ ಬದಲು ಪ್ಲಾಸ್ಟಿಕ್ ಕವರ್ ಬಳಕೆ ಮಾಡಲಾಗುತ್ತಿದೆ. ಇಡ್ಲಿ ಮಾಡುವಾಗ ಮಾತ್ರವಲ್ಲದೆ ಆಹಾರವನ್ನು ಬಡಿಸುವಾಗ ಮತ್ತು ಪ್ಯಾಕ್ ಮಾಡುವಾಗಲೂ ಪ್ಲಾಸ್ಟಿಕ್ ಬಳಕೆ ಮಾಡಲಾಗುತ್ತಿದೆ. ಪ್ಲಾಸ್ಟಿಕ್ ಹಾಳೆಯು ಶಾಖಕ್ಕೆ ಒಡ್ಡಿಕೊಂಡು ಹಾನಿಕಾರಕ ವಸ್ತುವನ್ನು ಹೊರಸೂಸುತ್ತಿದೆ. ಇದು ಕ್ಯಾನ್ಸರ್ ಕಾರಕವಾಗಿದೆ ಎಂದು ತಜ್ಞರು ಎಚ್ಚರಿಕೆ ನೀಡಿದ್ದರು.

ತಜ್ಞರ ಎಚ್ಚರಿಕೆ ಬೆನ್ನಲ್ಲೇ ಆಹಾರ ಇಲಾಖೆ ಬೆಂಗಳೂರಿನ ಹಲವಡೆಯಿಂದ ಇಡ್ಲಿ ಮಾದರಿಗಳನ್ನು ಸಂಗ್ರಹ ಮಾಡಿತ್ತು. ಬೆಂಗಳೂರಿನ ವಿವಿಧ ಭಾಗಗಳಲ್ಲಿ ಹೋಟೆಲ್ ಹಾಗೂ ತಿಂಡಿಗಳ ಅಂಗಡಿಗಳಿಂದ 500ಕ್ಕೂ ಹೆಚ್ಚು ಇಡ್ಲಿ ಸ್ಯಾಂಪಲ್ಸ್ ಸಂಗ್ರಹ ಮಾಡಿದ್ದು, ಇವುಗಳಲ್ಲಿ 35 ಕ್ಕೂ ಹೆಚ್ಚು ಇಡ್ಲಿ ಸ್ಯಾಂಪಲ್ಸ್ ಅಸುರಕ್ಷಿತ ಎಂಬ ವರದಿ ಬಂದಿದೆ. ಇನ್ನೂ ನೂರಾರು ಇಡ್ಲಿ ಸ್ಯಾಂಪಲ್ಸ್ ವರದಿಗೆ ಕಾಯಲಾಗುತ್ತಿದೆ. ಹೀಗಾಗಿ ಇನ್ಮುಂದೆ ಇಡ್ಲಿ ಸೇವಿಸುವ ಗ್ರಾಹಕರು ಎಚ್ಚರ ವಹಿಸಬೇಕಾಗುತ್ತದೆ.

# ಲೋಕಾಯುಕ್ತ ದಾಳಿ

**ಬೆಳಗಾವಿ :** ಗೋಕಾಕ್ ಗ್ರೇಡ್–2 ತಹಶೀಲ್ದಾರ್‌ಗೆ ಲೋಕಾಯುಕ್ತ ಅಧಿಕಾರಿಗಳು ಇಂದು ಬಿಸಿ ಮುಟ್ಟಿಸಿದ್ದಾರೆ. ಐದು ತಂಡಗಳಾಗಿ 50 ಜನ ಅಧಿಕಾರಿಗಳು ಗುರುವಾರ ಬೆಳಗ್ಗೆ ಹಲವು ಅಧಿಕಾರಿಗಳ ಮನೆ ಹಾಗೂ ಕಚೇರಿಗಳ ಮೇಲೆ ದಾಳಿ ನಡೆಸಿದ್ದಾರೆ.

ಗಾಢ ನಿದ್ದೆಯಲ್ಲಿದ್ದ ಅಧಿಕಾರಿಗಳ ಮನೆ ಕಚೇರಿಯ ಮೇಲೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಗೋಕಾಕ್ ಗ್ರೇಡ್–2 ತಹಶೀಲ್ದಾರ್ ಶ್ರೀಕಾಂತ ಬೆಟಗೇರಿ, ಕಂದಾಯ ನಿರೀಕ್ಷಕ ಶಿವಾನಂದ ಹಿರೇಮಠ ಸೇರಿ ಹಲವರ ಮನೆ ಮೇಲೆ ದಾಳಿ ನಡೆಸಲಾಗಿದೆ. ಲೋಕಾಯುಕ್ತ ಡಿವೈಎಸ್ಪಿ ಬಿ.ಎಸ್. ಪಾಟೀಲ್ ನೇತೃತ್ವದಲ್ಲಿ ದಾಳಿ ನಡೆಸಿ ಮನೆ ಹಾಗೂ ಕಚೇರಿಯಲ್ಲಿರುವ ದಾಖಲೆಗಳನ್ನು ಪರಿಶೀಲನೆ ನಡೆಸಿದ್ದಾರೆ.

ಅಕ್ರಮವಾಗಿ ಎಸ್. ಎಸ್. ವೈ ಪಿಂಚಣಿ ಮಂಜೂರಾತಿ ಆರೋಪ ಕೇಳಿ ಬಂದಿತ್ತು. ಸಾರ್ವಜನಿಕರಿಂದ ದೂರು ಬಂದ ಹಿನ್ನೆಲೆ ಈ ಹಿಂದೆಯೂ ದಾಳಿ ಮಾಡಲಾಗಿತ್ತು. ಇಂದು ಮತ್ತೊಮ್ಮೆ ದಾಳಿ ನಡೆಸಲಾಗಿದೆ. ಅಧಿಕಾರಿಗಳು ದಾಖಲಾತಿಗಳನ್ನು ಪರಿಶೀಲನೆ ಮಾಡುತ್ತಿದ್ದಾರೆ. ತಹಶೀಲ್ದಾರ್ ಕಚೇರಿ ಸೇರಿದಂತೆ ಬೇರೆ ಬೇರೆ ಕಡೆಗಳಲ್ಲೂ ಲೋಕಾಯುಕ್ತ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ.

# ಆಕ್ಸ್‌ಫರ್ಡ್ ಕಾಲೇಜ್ ಆಫ್ ಎಂಜಿನಿಯರಿಂಗ್ ಹಾಗೂ ನಮ್ಮ ಪೊಲೀಸ್ ನ್ಯೂಸ್ ಸಹಯೋಗದೊಂದಿಗೆ ಸೈಬರ್ ಜಾಗೃತಿ ಕಾರ್ಯಕ್ರಮ

**ಬೆಂಗಳೂರು:** ಆಧುನಿಕ ಯುಗದಲ್ಲಿ ತಂತ್ರಜ್ಞಾನ ಮತ್ತು ಡಿಜಿಟಲ್ ಸಾಧನಗಳು ನಮ್ಮ ಜೀವನದಲ್ಲಿ ಅಗತ್ಯಭೂತ ಅಂಶವಾಗಿವೆ. ಆದರೆ, ಇವು ಸಾಕಷ್ಟು ಪ್ರಯೋಜನಗಳನ್ನು ನೀಡಿದರೂ, ಅದರೊಂದಿಗೆ ಸೈಬರ್ ಅಪರಾಧಗಳೂ ಹೆಚ್ಚುತ್ತಿವೆ. ಇಂತಹ ಸೈಬರ್ ಅಪರಾಧಗಳು, ಸೈಬರ್ ದಾಳಿಗಳು, ಹ್ಯಾಕಿಂಗ್ ಮತ್ತು ಡೇಟಾ ಹಕ್ಕುಚೂರಿಗಳು ನಾವು ಸೈಬರ್ ಜಗತ್ತಿನಲ್ಲಿ ಎಂದಿಗೂ ಎದುರಿಸಬಹುದಾದ ಅಪಾಯಗಳಾಗಿವೆ.

ಇದರ ಬಗ್ಗೆ ಜಾಗೃತಿ ಮತ್ತು ಎಚ್ಚರಿಕೆಗೆ ಹೆಚ್ಚಿನ ಅಗತ್ಯವಿದೆ. ಈ ಹಿನ್ನೆಲೆ, ಆಕ್ಸ್‌ಫರ್ಡ್ ಕಾಲೇಜ್ ಆಫ್ ಎಂಜಿನಿಯರಿಂಗ್, ಹಾಗೂ ನಮ್ಮ ಪೊಲೀಸ್ ನ್ಯೂಸ್ ಸಹಯೋಗದೊಂದಿಗೆ "ಸೈಬರ್ ಜಾಗೃತಿ" ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಈ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಡಿಜಿಟಲ್ ಸುರಕ್ಷತೆಯ ಕುರಿತು ಹೆಚ್ಚು ಅರಿವು ಮೂಡಿಸಲು ಉದ್ದೇಶಿತವಾಗಿತ್ತು. ಕಾರ್ಯಕ್ರಮವು ಪಾಲ್ಗೊಂಡು, ವಿದ್ಯಾರ್ಥಿಗಳು ತಮ್ಮ ಆನ್‌ಲೈನ್ ಕ್ರಿಯಾಶೀಲತೆಯನ್ನು ಹೇಗೆ ಸುರಕ್ಷಿತವಾಗಿ ನಡೆಸಬಹುದು ಮತ್ತು ಸೈಬರ್ ಅಪರಾಧಗಳಿಂದ ಹೇಗೆ ರಕ್ಷಿಸಬಹುದು ಎಂಬುದನ್ನು ತಿಳಿದುಕೊಂಡರು.

ಈ ಕಾರ್ಯಕ್ರಮದಲ್ಲಿ, ಹಿರಿಯ ವಕೀಲರು ಹಾಗೂ ಸ್ಥಾಪಕ ರೂಟ್ಸ್ ಸೈಬರ್ ಲಾ ಫರ್ಮ್ ಶ್ರೀ. ರಂಗನಾಥ್ ಮೈಸೂರು ಪಾಲ್ಗೊಂಡರು. ಅವರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡು, ಸೆಕ್ಯುರಿಟಿ ಸಲಹೆಗಳೊಂದಿಗೆ ಜೊತೆಗೆ, ಅನೇಕ ಸೈಬರ್ ಅಪರಾಧಗಳ ಬಗ್ಗೆ ಮಾಹಿತಿ ನೀಡಿದರು. ಹಲವಾರು ವರ್ಕ್‌ಶಾಪ್‌ಗಳು ಮತ್ತು ಡೆಮೋ ಸೆಶನ್‌ಗಳು ಆಯೋಜಿಸಲ್ಪಟ್ಟವು, ಅಲ್ಲಿ ವಿದ್ಯಾರ್ಥಿಗಳು ತಮ್ಮ ದೈಹಿಕ ಸೈಬರ್ ಸುರಕ್ಷತೆ ಹಾಗೂ ಪೌರ ಪ್ರಜ್ಞೆಯನ್ನು ಹತ್ತಿರದಿಂದ ಅನುಭವಿಸಿದರು.

ಈ ವಿಶೇಷ ಕಾರ್ಯಕ್ರಮವನ್ನು ನಮ್ಮ ಪೊಲೀಸ್ ನ್ಯೂಸ್ ಪ್ರಧಾನ ಸಂಪಾದಕರಾದ ಶ್ರೀ ಜಾನ್ ಪ್ರೇಮ್ ಜೆ, ಅವರ ಮಾರ್ಗದರ್ಶನದಲ್ಲಿ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ, ಹ್ಯಾಕಿಂಗ್, ಫಿಶಿಂಗ್, ಪಾಸ್‌ವರ್ಡ್ ಸುರಕ್ಷತೆ, ಸಾಮಾಜಿಕ ಮಾಧ್ಯಮದಲ್ಲಿ ಜಾಲು ಹಾಕುವ ಅಪರಾಧಗಳು ಮತ್ತು ಇತರ ಸೆಕ್ಯುರಿಟಿ ವ್ಯಾಖ್ಯಾನಗಳು ಮೊದಲಾದ ವಿಷಯಗಳು ಚರ್ಚೆಗೆ ಬಂದವು. ಇದರ ಮೂಲಕ, ವಿದ್ಯಾರ್ಥಿಗಳು ತಮ್ಮ ಡಿಜಿಟಲ್ ಜಾಗೃತಿ ಮತ್ತು ಭದ್ರತೆಯ ಬಗ್ಗೆ ಮತ್ತಷ್ಟು ತಿಳಿದುಕೊಂಡರು.

ಈ ಕಾರ್ಯಕ್ರಮವು ತಂತ್ರಜ್ಞಾನದಿಂದ ಭದ್ರತೆಯೆಲ್ಲಾ ಕ್ಷೇತ್ರಗಳಲ್ಲಿ ಎಚ್ಚರಿಕೆಯಿಂದ ವರ್ತಿಸಬೇಕೆಂದು ಗುರುತಿಸಿತು. "ಜಾಗೃತಿ ಪ್ರಜ್ಞೆಗೆ, ಸುರಕ್ಷಿತ ಡಿಜಿಟಲ್ ಭವಿಷ್ಯಕ್ಕೆ" ಎಂಬ ಉದ್ದೇಶವಿರುವ ಈ ಕಾರ್ಯಕ್ರಮವು, ವಿದ್ಯಾರ್ಥಿಗಳನ್ನು ತಮ್ಮ ವೈಯಕ್ತಿಕ ಮಾಹಿತಿ ಮತ್ತು ಖಾತೆಗಳ ಸುರಕ್ಷತೆ ಬಗ್ಗೆ ಹೆಚ್ಚು ಜಾಗರೂಕವಾಗಿ ಪೋಷಿಸಲು ಪ್ರೇರೇಪಿಸಿತು.

ಈ ಸೈಬರ್ ಜಾಗೃತಿ ಕಾರ್ಯಕ್ರಮವು ನಮ್ಮ ಸಮಾಜದಲ್ಲಿ ಡಿಜಿಟಲ್ ಸುರಕ್ಷತೆ ಬಗ್ಗೆ ಮಹತ್ವಪೂರ್ಣ ಬೆಳವಣಿಗೆಯನ್ನು ತರುವಂತೆ ನಿರೀಕ್ಷೆ ಮಾಡಲಾಗಿದೆ.

# ಕೂಡಲೇ ಸಂವಿಧಾನದ ಅವಕಾಶಗಳಂತೆ ವಿಶೇಷಾಧಿಕಾರಿ ನೇಮಿಸಿ

**ಬೆಂಗಳೂರು:** ಬೆಳಗಾವಿ ಸೇರಿದಂತೆ ರಾಜ್ಯದ ಯಾವುದೇ ಭಾಗದಲ್ಲಿ ದಾಖಲಾಗುವ ಅಂತಾರಾಜ್ಯ ಗಲಭೆಗಳನ್ನು ಸಮರ್ಥವಾಗಿ ಹತ್ತಿಕ್ಕಲು ಸಂವಿಧಾನವೇ ಅವಕಾಶ ಕಲ್ಪಿಸಿದ್ದು, ಕೇಂದ್ರ ಸರ್ಕಾರ ಈ ಬಗ್ಗೆ ಮನಸ್ಸು ಮಾಡಬೇಕಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತಂತೆ ಗುರುವಾರ ರಾಷ್ಟ್ರಪತಿ ದ್ರೌಪದಿ ಮುರ್ಮು ರವರಿಗೆ ಪತ್ರ ಬರೆದಿರುವ ಅವರು, ಸಂವಿಧಾನದ 350 (ಬಿ) ಅನುಚ್ಛೇದದಲ್ಲಿ ಗಡಿ ಪ್ರದೇಶಗಳಲ್ಲಿ ವಾಸಿಸುವ ಭಾಷಾ ಅಲ್ಪಸಂಖ್ಯಾತರು ಬಹುಸಂಖ್ಯಾತರೊಂದಿಗೆ ಸಾಮರಸ್ಯದ ಜೀವನವನ್ನು ನಡೆಸುವಲ್ಲಿ ಕೇಂದ್ರ ಸರ್ಕಾರದ ಜವಾಬ್ದಾರಿಯನ್ನು ಸ್ಪಷ್ಟವಾಗಿ ನಿಗದಿಪಡಿಸಲಾಗಿದ್ದು, ಅದರಂತೆ ಕೇಂದ್ರ ಸರ್ಕಾರವು ವಿಶೇಷಾಧಿಕಾರಿಯನ್ನು ನೇಮಿಸಬೇಕಿದೆ ಎಂದಿದ್ದಾರೆ.

ಹೀಗೆ ನೇಮಿಸಲಾಗುವ ವಿಶೇಷಾಧಿಕಾರಿ, ಗಡಿ ಭಾಗಗಳ ಭಾಷಾ ಅಲ್ಪಸಂಖ್ಯಾತರು ಎದುರಿಸುತ್ತಿರುವ ಸಮಸ್ಯೆಗಳ ಕುರಿತಂತೆ ಕೂಲಂಕಷವಾಗಿ ಅಧ್ಯಯನ ನಡೆಸಬೇಕು. ಸಮಸ್ಯೆವಾರು ವಿವರಗಳನ್ನು ಸಿದ್ಧಪಡಿಸಿ, ರಾಷ್ಟ್ರಪತಿಗಳಿಗೆ ಸಲ್ಲಿಸಬೇಕು. ರಾಷ್ಟ್ರಪತಿಗಳು ಅದನ್ನು ಸಂಸತ್ತಿನ ಉಭಯ ಸದನಗಳ ಮುಂದೆ ಮಂಡಿಸಲು ನಿರ್ದೇಶಿಸಬಹುದಾಗಿದ್ದು, ಕೇಂದ್ರ ಸರ್ಕಾರವು ವರದಿಯ ಆಧಾರದಲ್ಲಿ ಉಭಯ ರಾಜ್ಯಗಳ ಗಡಿ ಹಿಂಸಾಚಾರಗಳನ್ನು ಹತ್ತಿಕ್ಕುವಲ್ಲಿ ಕ್ರಮ ವಹಿಸಬೇಕಾಗುತ್ತದೆ ಎಂದು ಡಾ.ಬಿಳಿಮಲೆ ಹೇಳಿದ್ದಾರೆ.

ಕರ್ನಾಟಕ–ಮಹಾರಾಷ್ಟ್ರ ಗಡಿ ಭಾಗದ ಗಲಭೆ ಈ ಪತ್ರ ಬರೆಯಲು ಪ್ರೇರೇಪಿಸಿದೆ ಎಂದು ಹೇಳಿರುವ ಡಾ.ಬಿಳಿಮಲೆ, ಈ ಸಮಸ್ಯೆ ಮೇಲ್ನೋಟಕ್ಕೆ ಕಾಣುವುದಕ್ಕಿಂತಲೂ ತೀವ್ರವಾಗಿದ್ದು, ಎರಡೂ ರಾಜ್ಯಗಳ ಆಡಳಿತ ವ್ಯವಸ್ಥೆಯ ಮೇಲೆ ಪ್ರತಿಕೂಲ ಪರಿಣಾಮವನ್ನು ಬೀರಿರುವುದಷ್ಟೇ ಅಲ್ಲ, ಸಾರ್ವಜನಿಕ ಆಸ್ತಿಪಾಸ್ತಿಗಳಿಗೆ ಹಾನಿ, ಅಗಾಧ ಹಿಂಸಾಚಾರ ವೇದನೆ ತರುವ ವಿಷಯವಾಗಿದೆ. ಈ ಅರ್ಥಹೀನ ಗಲಭೆಗಳಿಗೆ ಇತಿಶ್ರೀ ಹಾಡಲು ಕೇಂದ್ರ ಸರ್ಕಾರವು ಕೂಡಲೇ ಮುಂದಾಗಬೇಕೆಂದು ಆಗ್ರಹಿಸಿದ್ದಾರೆ.

# ಪತ್ರಕರ್ತರು ಪ್ರಶ್ನಿಸುವ ಪ್ರವೃತ್ತಿ ಬೆಳೆಸಿಕೊಳ್ಳಬೇಕು

**ಮೈಸೂರು:** ಪತ್ರಕರ್ತರು ಪ್ರಶ್ನಿಸುವ ಪ್ರವೃತ್ತಿ ಬೆಳೆಸಿಕೊಳ್ಳದಿದ್ದರೆ ಪತ್ರಕರ್ತರಾಗಲು ಯೋಗ್ಯರಲ್ಲ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷೆ ಆಯೇಷಾ ಖಾನಂ ಯುವ ಪತ್ರಕರ್ತರಿಗೆ ಕಿವಿಮಾತು ಹೇಳಿದರು. ವಾರ್ತಾ ಇಲಾಖೆ, ಮಾಧ್ಯಮ ಅಕಾಡೆಮಿ ಹಾಗೂ ಮೈಸೂರು ವಿವಿ ಪತ್ರಿಕೋದ್ಯಮ ವಿಭಾಗದ ಸಹಯೋಗದಲ್ಲಿ ಮಾನಸ ಗಂಗೋತ್ರಿಯ ಮಾನವಿಕ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ " ಏನ್ ಸಮಾಚಾರ..! " ಮಾಧ್ಯಮ ಹಬ್ಬ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ತರಗತಿಯಲ್ಲೇ ಆಗಲಿ ಅಥವಾ ವೃತ್ತಿ ಜೀವನದಲ್ಲೇ ಆಗಲಿ ಪ್ರಶ್ನಿಸುವ ಪ್ರವೃತ್ತಿಯನ್ನು ಯುವ ಪತ್ರಕರ್ತರು ಬೆಳೆಸಿಕೊಳ್ಳಬೇಕು. ಅದರಲ್ಲೂ ಪತ್ರಕರ್ತರಾಗುವ ಉದ್ದೇಶ ಹೊಂದಿರುವ ನೀವು ಸಮಾಜದ ಹಿತಕ್ಕೆ ಪೂರಕವಾಗುವ ಸಂಗತಿಗಳ ಬಗೆಗೆ ಹೆಚ್ಚು ಗಮನಹರಿಸಬೇಕು ಎಂದರು. ಜಿಲ್ಲಾ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುವ ವರದಿಗಾರರೇ ಸುದ್ದಿ ಮನೆಯ ಬೆನ್ನೆಲುಬು. ನೀವು ನೀಡುವ ವರದಿ ಆಧರಿಸಿ ಕೇಂದ್ರ ಕಚೇರಿ ಕಾರ್ಯ ನಿರ್ವಹಿಸುತ್ತದೆ. ಆದ್ದರಿಂದ ದೆಹಲಿ ಹಾಗೂ ಬೆಂಗಳೂರಿನಂತಹ ಕೇಂದ್ರ ಸ್ಥಳಗಳಲ್ಲಿ ಕಾರ್ಯನಿರ್ವಹಿಸುವ ವರದಿಗಾರರಷ್ಟೆ ನಿಮ್ಮ ಜವಾಬ್ದಾರಿಯೂ ಹೆಚ್ಚಿರುತ್ತದೆ ಎಂದರು. ಮುದ್ರಣ ಮಾಧ್ಯಮ ಆಯ್ತು, ಎಲೆಕ್ಟ್ರಾನಿಕ್ ಮೀಡಿಯಾಗಳು ಆಯ್ತು ಈಗ ಡಿಜಿಟಲ್ ಮಾಧ್ಯಮಗಳ ಕಾಲ. ಇಡೀ ವಿಶ್ವವೇ ಒಂದು ಗ್ಲೋಬಲ್ ವಿಲೇಜ್ ಎಂಬಂತಾಗಿದೆ. ಕೈ ಬೆರಳಿನ ತುದಿಯಲ್ಲೇ ಸಮಗ್ರ ಮಾಹಿತಿಯೂ ಲಭ್ಯ. ಆದ್ದರಿಂದ ಹೊಸಹೊಸ ತಂತ್ರಜ್ಞಾನಗಳ ಬಗ್ಗೆ ಕುತೂಹಲ ಬೆಳೆಸಿಕೊಂಡು ಅದನ್ನು ಕಲಿಯುವ ಅನಿವಾರ್ಯತೆ ಇದೆ. ಈ ನಿಟ್ಟಿನಲ್ಲಿ ಮಾಧ್ಯಮ ಅಕಾಡೆಮಿ ರಾಜ್ಯ ಸರಕಾರದ ಸಹಯೋಗದಲ್ಲ ತಾಂತ್ರಿಕಾ ತರಬೇತಿ ನೀಡಲು ಯೋಜನೆ ರೂಪಿಸುತ್ತದೆ. ಇದನ್ನ ಯುವ ಪತ್ರಕರ್ತರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಆಯೇಷಾ ಖಾನಂ ಸಲಹೆ ನೀಡಿದರು.

## ಮೊದಲ ಪುಟದಿಂದ

### ಬಸ್ ಸಂಚಾರ ಆರಂಭ

ಈ ನಡುವೆ ಬೆಳಗಾವಿ ಡಿಸಿ ಮತ್ತು ಕೊಲ್ಲಾಪುರ ಡಿಸಿ ವಿಡಿಯೋ ಕಾನ್ಫರೆನ್ಸ್ ಮೂಲಕ ಬಸ್ ಆರಂಭಿಸಲು ಮಾತುಕತೆ ನಡೆಸಿ ಕರ್ನಾಟಕ ಮಹಾರಾಷ್ಟ್ರ ಎರಡು ರಾಜ್ಯದಲ್ಲಿ ಬಸ್ ಚಾಲಕರ, ನಿರ್ವಾಹಕರ ಮತ್ತು ಪ್ರಯಾಣಿಕರ ಸುರಕ್ಷತೆಗೆ ಒತ್ತು ಕೊಡುವುದಾಗಿ ಪರಸ್ಪರ ಒಪ್ಪಂದ ಮಾಡಿಕೊಂಡಿದ್ದರು.

ಇದೀಗ ಎರಡು ರಾಜ್ಯದ ಮಧ್ಯೆ ಹಂತ ಹಂತವಾಗಿ ಬಸ್ ಸಂಚಾರ ಆರಂಭವಾಗಿದೆ. ಬೆಳಗಾವಿಯಿಂದ ಕೊಲ್ಲಾಪುರ, ಪುಣೆ, ಮುಂಬೈ, ಶಿರಡಿ, ನಾಸಿಕ್ ಗೆ ಬಸ್ ಸೇವೆ ಆರಂಭವಾಗಿದ್ದು, ಮಹಾರಾಷ್ಟ್ರದಿಂದಲೂ ರಾಜ್ಯಕ್ಕೆ ಬಸ್ ಸಂಚರಿಸುತ್ತಿವೆ. ಸದ್ಯ ಕೊಲ್ಲಾಪುರದಿಂದ ಸಂಕೇಶ್ವರವರೆಗೂ ಮಹಾರಾಷ್ಟ್ರ ಬಸ್ ಗಳು ಬರುತ್ತಿದ್ದು, ಇಂದು ಪೂರ್ಣಪ್ರಮಾಣದ ಬಸ್ ಸಂಚಾರ ಆರಂಭಗೊಂಡಿದೆ.

### ನಿರೀಕ್ಷಣಾ ಜಾಮೀನು

ಎಂ.ಎಂ. ಸುಂದರೇಶ್ ಮತ್ತು ಬೇಲಾ ಎಂ. ತ್ರಿವೇದಿ ಅವರನ್ನೊಳಗೊಂಡ ನ್ಯಾಯಪೀಠವು ಕಾಯ್ದಿರಿಸಿತ್ತು.
ನಿರೀಕ್ಷಣಾ ಜಾಮೀನಿನ ವಿಚಾರದಲ್ಲಿ ಸಿಆರ್‌ಪಿಸಿ ಮತ್ತು ನಂತರ ಜಾರಿಯಾಗಿರುವ ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ (ಬಿಎನ್‌ಎಸ್‌ಎಸ್) ನಿಬಂಧನೆಗಳು ಕಸ್ಟಮ್ಸ್ ಮತ್ತು ಜಿಎಸ್‌ಟಿ ಕಾಯ್ದೆಗಳ ಅಡಿ ವ್ಯಕ್ತಿಗಳಿಗೆ ಅನ್ವಯವಾಗುತ್ತವೆ ಎಂದು ತೀರ್ಪು ಪ್ರಕಟಿಸಿದ ಸಿಜೆಐ ಹೇಳಿದರು.
ಜಿಎಸ್‌ಟಿ ಮತ್ತು ಕಸ್ಟಮ್ಸ್ ಕಾಯ್ದೆಗಳ ಅಡಿ ಸಂಭಾವ್ಯ ಬಂಧನವನ್ನು ಎದುರಿಸುತ್ತಿರುವ ವ್ಯಕ್ತಿಗಳು ಎಫ್‌ಐಆರ್ ದಾಖಲಿಸುವ ಮೊದಲೇ ನಿರೀಕ್ಷಣಾ ಜಾಮೀನು ಪಡೆಯಲು ಅರ್ಹರಾಗಿದ್ದಾರೆ ಎಂದು ಕೋರ್ಟ್ ಹೇಳಿತು. ಈ ಕುರಿತು ರಾಧಿಕಾ ಅಗರ್ವಾಲ್ ಎಂಬುವವರು 2018ರಲ್ಲಿ ಅರ್ಜಿ ಸಲ್ಲಿಸಿದ್ದರು. ತೀರ್ಪಿನ ಮತ್ತಷ್ಟು ವಿವರಗಳಿಗಾಗಿ ಕಾಯಲಾಗುತ್ತಿದೆ.

### ಸವಾರರು ಸ್ಥಳದಲ್ಲೇ ಸಾವು

ಸಾವಿಗೀಡಾಗಿದ್ದಾರೆ. ಅಪಘಾತಕ್ಕೆ ಲಾರಿ ಚಾಲಕನ ನಿರ್ಲಕ್ಷ್ಯ ಮತ್ತು ಅತೀ ವೇಗವೇ ಕಾರಣ ಎನ್ನಲಾಗಿದೆ. ಸ್ಥಳಕ್ಕೆ ಸಕಲೇಶಪುರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಮೃತ ದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಸಕಲೇಶಪುರದ ಕ್ರಫರ್ಡ್ ಸರ್ಕಾರಿ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಈ ಸಂಬಂಧ ಸಕಲೇಶಪುರ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ತೀವ್ರತೆಯ ಭೂಕಂಪ

ಭೂಕಂಪನ ಚಟುವಟಿಕೆಯ ಕೇಂದ್ರಬಿಂದು ಮತ್ತು ಪ್ರಭಾವದ ಬಗ್ಗೆ ವಿವರಗಳು ತಕ್ಷಣವೇ ಸ್ಪಷ್ಟವಾಗಿಲ್ಲ.
ರಿಕ್ಟರ್ ಮಾಪಕದಲ್ಲಿ 5 ರ ತೀವ್ರತೆ ದಾಖಲಾಗಿದ್ದು, ಈ ಭೂಕಂಪವನ್ನು ಮಧ್ಯಮ ತೀವ್ರತೆಯ ಕಂಪನ ಎಂದು ಪರಿಗಣಿಸಲಾಗುತ್ತದೆ. ಭೂಮಿ ಕಂಪಿಸಿದ್ದರಿಂದ ಮನೆಯ ಒಳಾಂಗಣ ವಸ್ತುಗಳು ಅಲುಗಾಡಿರುವುದು ಕಂಡು ಬಂದಿದೆ. ಈ ಭೂಕಂಪ ದೊಡ್ಡ ಶಬ್ದ ಮತ್ತು ಸಣ್ಣ ಹಾನಿ ಉಂಟುಮಾಡುವ ಸಾಮರ್ಥ್ಯವನ್ನು ಹೊಂದಿದೆ.
ಇದು ಭೂಕಂಪ ವಲಯ– ಹಿಂದೆಯೂ ಆಗಿದ್ದವು ಪ್ರಬಲ ಭೂಕಂಪನಗಳು: ಅಸ್ಸಾಂನಲ್ಲಿ ಭೂಕಂಪಗಳು ಸಾಮಾನ್ಯವಾಗಿವೆ. ಏಕೆಂದರೆ ರಾಜ್ಯವು ಭಾರತದ ಅತ್ಯಂತ ಭೂಕಂಪ ಪೀಡಿತ ವಲಯಗಳಲ್ಲಿ ಒಂದಾಗಿದೆ. ಇದು ಭೂಕಂಪನ ವಲಯ ೫ ರ ಅಡಿ ಬರುತ್ತದೆ. ಈ ಪ್ರದೇಶವು 1950 ರ ಅಸ್ಸಾಂ–ಟಿಬೆಟ್ ಭೂಕಂಪ (8.6 ತೀವ್ರತೆ) ಮತ್ತು 1897 ರ ಶಿಲ್ಲಾಂಗ್ ಭೂಕಂಪ (8.1 ತೀವ್ರತೆ) ನಂತಹ ಕೆಲವು ಬೃಹತ್ ಭೂಕಂಪಗಳನ್ನು ಕಂಡಿದೆ. ಇತಿಹಾಸದಲ್ಲಿಈ ಎರಡೂ ಕಂಪನಗಳು ದಾಖಲಾಗಿವೆ.

### ಒಳಜಗಳ ಹೆಚ್ಚಳ

ಇಶಾ ಫೌಂಡೇಶನ್ ಧಾರ್ಮಿಕ ಕಾರ್ಯಕ್ರಮ ನಡೆಸಿದೆ. ಶಿವರಾತ್ರಿ ಸಂದರ್ಭದಲ್ಲಿ ಡಿ.ಕೆ.ಶಿವಕುಮಾರ್ ಅವರು ಅಲ್ಲಿ ಹೋಗಿದ್ದಾರೆ. ಕಾಂಗ್ರೆಸ್ ಪಕ್ಷದಲ್ಲಿ ದಿನೇದಿನೇ ಒಳಜಗಳ ಜಾಸ್ತಿ ಆಗುತ್ತಿದೆ. ಮುಂದಿನ ದಿನಗಳಲ್ಲಿ ಕ್ಷಿಪ್ರ ರಾಜಕೀಯ ಬೆಳವಣಿಗೆ ಆಗಲಿದೆ ಎಂದು ನಾನು ಈ ಹಿಂದೆಯೇ ಹೇಳಿದ್ದೆ ಎಂದರು.

ನಾಳೆ ಸಿಎಂ ಭೇಟಿ ಕುರಿತಂತೆ ಪ್ರಶ್ನೆಗೆ ಉತ್ತರ ನೀಡಿದ ಅವರು, ಮೊನ್ನೆ ಬೆಂಗಳೂರು ನಗರದ ನಮ್ಮ ಶಾಸಕರು, ಸಂಸದರು ಚರ್ಚೆ ಮಾಡಿದ್ದೇವೆ. ಹಿಂದೆ ಯಡಿಯೂರಪ್ಪನವರು ಮುಖ್ಯಮಂತ್ರಿ ಆಗಿದ್ದಾಗ ಬೆಂಗಳೂರು ಅಭಿವೃದ್ಧಿಗೆ ಕಾರ್ಯಕ್ರಮಗಳನ್ನು ನೀಡಿದ್ದರು. ಅವೆಲ್ಲವುಗಳಿಗೆ ತಡೆ ಆಗುತ್ತಿದೆ. ಕ್ಷೇತ್ರದ ಅಭಿವೃದ್ಧಿಗೆ ಅನುದಾನ ಕೊಡಿ ಎಂಬ ಕೂಗು ಬೆಂಗಳೂರು ಮಾತ್ರವಲ್ಲದೆ ರಾಜ್ಯದ ಎಲ್ಲ ಶಾಸಕರದ್ದಾಗಿದೆ. ಗ್ರೇಟರ್ ಬೆಂಗಳೂರು ಯೋಜನೆ ಕೈಬಿಟ್ಟು ಬಿಬಿಎಂಪಿ ಚುನಾವಣೆ ನಡೆಸಬೇಕೆಂಬ ಆಗ್ರಹ ಎಲ್ಲರದು. ಬೆಂಗಳೂರು ಒಳಗೊಂಡು ಅಭಿವೃದ್ಧಿ ಕಾರ್ಯ ಎಲ್ಲ ಕಡೆ ನಡೆಯಬೇಕು ಎಂಬ ನಿಟ್ಟಿನಲ್ಲಿ ನಮ್ಮ ಶಾಸಕರು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಮನವಿ ನೀಡಲಿದ್ದೇವೆ ಎಂದು ತಿಳಿಸಿದರು.

### ಮುರಳಿ ಬಂಧನ

ರಾಜ್ಯ ತೆಲುಗು ಯುವ ಪ್ರತಿನಿಧಿ ಬಂಡಾರು ವಂಶಿ ಕೃಷ್ಣ ಅವರ ದೂರಿನ ಆಧಾರದ ಮೇಲೆ, ಸಿಐಡಿ ಅಧಿಕಾರಿಗಳು ಪೊಸಾನಿ ವಿರುದ್ಧವೂ ಪ್ರಕರಣ ದಾಖಲಿಸಿದ್ದಾರೆ. ಸೆಪ್ಟೆಂಬರ್ 2024 ರಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಪೊಸಾನಿ ಅವರು ಚಂದ್ರಬಾಬು ನಾಯ್ಡು ಬಗ್ಗೆ ಅನುಚಿತ ಹೇಳಿಕೆಗಳನ್ನು ನೀಡಿದ್ದಾರೆ ಎಂದು ವಂಶಿ ಕೃಷ್ಣ ದೂರಿದ್ದಾರೆ. ಈ ದೂರಿನ ಆಧಾರದ ಮೇಲೆ ಸಿಐಡಿ ಅಧಿಕಾರಿಗಳು ಪೊಸಾನಿ ಕೃಷ್ಣ ಮುರಳಿ ವಿರುದ್ಧ ಪ್ರಕರಣ ದಾಖಲಿಸಿದರು.

ಇದಲ್ಲದೆ, ಟಿಟಿಡಿ ಅಧ್ಯಕ್ಷ ಬಿ.ಆರ್. ನಾಯ್ಡು ಬಗ್ಗೆ ಅನುಚಿತ ಕಾಮೆಂಟ್‌ಗಳನ್ನು ಮಾಡಿದ್ದಕ್ಕಾಗಿ ಪೊಸಾನಿ ವಿರುದ್ಧ ಹಲವಾರು ಸ್ಥಳಗಳಲ್ಲಿ ಪೊಲೀಸರಿಗೆ ದೂರುಗಳು ಬಂದಿವೆ.

ಮತ್ತೊಂದೆಡೆ, ಓಬುಲವರಿಪಲ್ಲಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಸಾನಿ ಕೃಷ್ಣ ಮುರಳಿಯನ್ನು ಬಂಧಿಸಲಾಗಿದೆ ಎಂದು ತಿಳಿದುಬಂದಿದೆ. ಜಾತಿಯ ಹೆಸರಿನಲ್ಲಿ ಜನರನ್ನು ಅವಮಾನಿಸಿ ಜನರಲ್ಲಿ ವರ್ಗ ಭೇದ ಸೃಷ್ಟಿಸಿದ್ದಕ್ಕಾಗಿ ಪ್ರಕರಣ ದಾಖಲಿಸಲಾಗಿದೆ ಎಂದು ವರದಿಯಾಗಿದೆ. ಮತ್ತೊಂದೆಡೆ, ಕಳೆದ ವರ್ಷ ನವೆಂಬರ್‌ನಲ್ಲಿ, ಟಿಡಿಪಿ ಮೈತ್ರಿಕೂಟದ ಸದಸ್ಯರಿಂದ ಅವರ ವಿರುದ್ಧ ಸರಣಿ ದೂರುಗಳು ಬಂದ ಹಿನ್ನೆಲೆಯಲ್ಲಿ, ಪೊಸಾನಿ ಕೃಷ್ಣ ಮುರಳಿ ಅವರು ಇನ್ನು ಮುಂದೆ ರಾಜಕೀಯದ ಬಗ್ಗೆ ಮಾತನಾಡುವುದಿಲ್ಲ ಎಂದು ಸಂವೇದನಾಶೀಲ ಹೇಳಿಕೆ ನೀಡಿದ್ದಾರೆ. ಆ ಸಮಯದಲ್ಲಿ, ಅವರು ತಮ್ಮ ಜೀವನದಲ್ಲಿ ರಾಜಕೀಯದ ಬಗ್ಗೆ ಮಾತನಾಡುವುದಿಲ್ಲ ಮತ್ತು ಅದರಿಂದ ದೂರವಿರುವುದಾಗಿ ಘೋಷಿಸಿದ್ದಾರೆ.

### ಗಡಿಪಾರಿಗೆ ಒತ್ತಾಯ

ಕೂಡಲೇ ಕಠಿಣ ಕಾನೂನು ಕ್ರಮ ತೆಗೆದುಕೊಳ್ಳದಿದ್ದಲ್ಲಿ ಎರಡೂ ರಾಜ್ಯಗಳಲ್ಲಿ ಶಾಂತಿಭಂಗ ವಾಗುವ ಅಪಾಯ ಇದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಈ ಕೃತ್ಯಕ್ಕೆ ಸಂಬಂಧಿಸಿದಂತೆ ತಾವು ಕೂಡಲೇ ಮಹಾರಾಷ್ಟ್ರ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಬೇಕು. ಅಲ್ಲದೆ ಭಾಷಾ ಸಾಮರಸ್ಯವನ್ನು ತಮ್ಮ ರಾಜಕೀಯ ಲಾಭಕ್ಕಾಗಿ ಹಾಳು ಮಾಡುತ್ತಿರುವ ತಮ್ಮ ಪಕ್ಷವು ಸೇರಿದಂತೆ ಎಲ್ಲಾ ಪಕ್ಷಗಳ ನಾಯಕರುಗಳಿಗೆ ಕಠಿಣ ಎಚ್ಚರಿಕೆ ನೀಡುವ ಮೂಲಕ ಕನ್ನಡಿಗರೊಂದಿಗೆ ಸರಕಾರ ಇದೆ ಎಂಬ ಎಚ್ಚರಿಕೆಯನ್ನು ರವಾನಿಸಬೇಕೆಂದು ಒತ್ತಾಯಿಸುತ್ತಿದ್ದೇನೆ ಎಂದು ಸಿಎಂಗೆ ಪತ್ರ ಬರೆದು ಚಂದ್ರ ಹೇಳಿದ್ದಾರೆ.

### ಕಪ್ಪು ಚಿರತೆ ಮರಿ

ಬಳಿ ಅಸಹಾಯಕ ಸ್ಥಿತಿಯಲ್ಲಿ ಬಿದ್ದಿತ್ತು. ಚಿರತೆಯ ಸ್ಥಿತಿ ಬಗ್ಗೆ ಸಾರ್ವಜನಿಕರು ಅರಣ್ಯ ಇಲಾಖೆಯ ಸಿಬ್ಬಂದಿಗೆ ಮಾಹಿತಿ ನೀಡಲಾಗಿತ್ತು. ಸ್ಥಳಕ್ಕೆ ಆಗಮಿಸಿದ ಅರಣ್ಯ ಇಲಾಖೆಯ ಸಿಬ್ಬಂದಿ ತ್ಯಾವರೆಕೊಪ್ಪ ಹುಲಿ ಅಭಯಾರಣ್ಯಕ್ಕೆ ಮಾಹಿತಿ ನೀಡಿದ್ದರು.
ಡಿಸಿಎಫ್ ಯೋಗೀಶ್ ಮತ್ತು ಅವರ ತಂಡವು ಕತಗಾಲ ಅರಣ್ಯ ವಲಯಕ್ಕೆ ಹೋಗಿ ಕಪ್ಪು ಚಿರತೆ ಮರಿಗಳನ್ನು ರಕ್ಷಿಸಿತ್ತು. ಸದ್ಯ ತ್ಯಾವರೆಕೊಪ್ಪ ಹುಲಿ ಅಭಯಾರಣ್ಯದಲ್ಲಿ ಈ ಚಿರತೆ ಮರಿ ಬಿಡಲಾಗಿದೆ. ಈಗಾಗಲೇ ಮಿಂಚು ಎಂಬ ಕಪ್ಪು ಚಿರತೆ ಇದ್ದು, ಇದೀಗ ಮತ್ತೊಂದು ಕರಿ ಚಿರತೆ ಜೊತೆ ಸೇರಿಸಿದಂತಾಗಿದೆ. ದೇಶದಲ್ಲಿ ಕಪ್ಪು ಚಿರತೆ ಅಪರೂಪವಾಗಿದ್ದು, ಅವನತಿಯ ಅಂಚಿನಲ್ಲಿದೆ. ರಾಜ್ಯದಲ್ಲೇ ಉತ್ತರಕನ್ನಡ ಜಿಲ್ಲೆಯಲ್ಲಿ ಅತೀ ಹೆಚ್ಚು ಕಪ್ಪು ಚಿರತೆಗಳಿವೆ.

### ಪ್ಲಾಸ್ಟಿಕ್ ಬಳಕೆ ನಿಷೇಧ

ಕೊಡಲು ಕೂಡ ಪ್ಲಾಸ್ಟಿಕ್ ಬಳಕೆ ಮಾಡಲಾಗುತ್ತಿದೆ. ಪ್ಲಾಸ್ಟಿಕ್ ಹೆಚ್ಚಾಗಿ ಬಳಸುವುದರಿಂ ಅವುಗಳು ಬಿಸಿಲಿನ ಶಾಖಕ್ಕೆ ಒಡ್ಡಿಕೊಂಡಾಗ ಕ್ಯಾನ್ಸರ್ ಕಾರಕ ಅಂಶಗಳನ್ನು ಹೊರಸೂಸುತ್ತದೆ ಎಂದು ವರದಿಯಲ್ಲಿ ತಿಳಿದು ಬಂದಿದೆ. ಹೀಗಾಗಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಈ ಕ್ರಮಕ್ಕೆ ಮುಂದಾಗಿದ್ದಾರೆ.

### ಟೀಕೆ ಬಿಡಲಿ

ಸಂಚಾರ ದಟ್ಟಣೆ ಬರೀ ಬೆಂಗಳೂರಿನ ಸಮಸ್ಯೆಯಲ್ಲ. ಲಂಡನ್, ಸ್ಯಾನ್ ಫ್ರಾನ್ಸಿಸ್ಕೊ, ಚೆನ್ನೈ ಎಲ್ಲ ಕಡೆಗಳಲ್ಲೂ ಇದೆ. ಈ ಬಗ್ಗೆ ಪೈ ಯಾಕೆ ಮಾತನಾಡುವುದಿಲ್ಲ? ಲಂಡನ್ನಿನಲ್ಲಿ ನಾನೇ ಒಂದೂವರೆ ಮೈಲುದ್ದದ ಟ್ರಾಫಿಕ್ ಜಾಮ್ ನಲ್ಲಿ ಸಿಲುಕಿದ್ದೆ. ಸ್ಯಾನ್ ಫ್ರಾನ್ಸಿಸ್ಕೋದಲ್ಲಿ ಹದಿನೈದಿಪ್ಪತ್ತು ಮೈಲಿ ಸಂಚಾರ ದಟ್ಟಣೆ ಸೃಷ್ಟಿಯಾಗಿದ್ದಿದೆ ಎಂದು ಅವರು ಉತ್ತರಿಸಿದ್ದಾರೆ.
ಬೆಂಗಳೂರು 'ಗ್ರೋಯಿಂಗ್ ಸಿಟಿ'ಯ ಜತೆಗೆ 'ಗ್ಲೋಬಲ್ ಸಿಟಿ' ಕೂಡ ಆಗಿದೆ. ಹೀಗಾಗಿಯೇ ಕರ್ನಾಟಕದ ಸಮಗ್ರ ಅಭಿವೃದ್ಧಿ ನಮ್ಮ ಆದ್ಯತೆಯಾಗಿದೆ. ಮೋದಿ ಸರಕಾರ ಏನು ಮಾಡಿದರೂ ಸರಿ, ಸಿದ್ದರಾಮಯ್ಯ ಸರಕಾರ ಮಾಡಿದ್ದೆಲ್ಲವೂ ತಪ್ಪು ಎನ್ನುವುದಲ್ಲ. ಇಂತಹ ಟೀಕೆಗಳಿಂದ ಪೈ ದೊಡ್ಡ ಮನುಷ್ಯರಾಗುವುದಿಲ್ಲ ಎಂದು ಅವರು ಹೇಳಿದ್ದಾರೆ.

ಯಾರೇ ಆಗಲಿ, ಸರಕಾರಕ್ಕೆ ರಚನಾತ್ಮಕ ಸಲಹೆ ಕೊಡಬಹುದು. ಪೈ ಅವರು ನನ್ನನ್ನಾಗಲಿ, ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಗಳನ್ನಾಗಲಿ ಅಥವಾ ಐಟಿ ಸಚಿವರನ್ನೇ ಆಗಲಿ ಕಾಣಬಹುದು. ಇದೇ ಪೈ ಮಳೆಗಾಲದಲ್ಲಿ ಬೆಂಗಳೂರಿನ ಒಂದು ಕಡೆ ಪ್ರವಾಹ ಉಂಟಾದಾಗ ವಾಗ್ದಾಳಿ ಮಾಡಿದ್ದರು. ಆದರೆ ಆಗ ಇಡೀ ಚೆನ್ನೈ ನಗರವೇ ಜಲಾವೃತವಾದರೂ ಜಾಣಮೌನ ವಹಿಸಿದ್ದರು. ಬಿಜೆಪಿ ನಮ್ಮ ಕಾರ್ಯಕ್ರಮಗಳನ್ನೇ ನಕಲು ಮಾಡುತ್ತಿದೆ. ಇದನ್ನು ಕಂಡರೂ ಇವರೇಕೆ ಸುಮ್ಮನಿದ್ದಾರೆ ಎಂದು ಪಾಟೀಲ ನೆನಪಿಸಿದ್ದಾರೆ.
ಕುಡಿಯುವ ನೀರಿನ ಉದ್ದೇಶಕ್ಕಾಗಿ ಆಲಮಟ್ಟಿ ಆಣೆಕಟ್ಟೆಯಿಂದ ತೆಲಂಗಾಣಕ್ಕೆ 1.24 ಟಿಎಂಸಿ ಅಡಿ ನೀರನ್ನು ಬಿಟ್ಟಿರುವುದರಲ್ಲಿ ತಪ್ಪೇನೂ ಇಲ್ಲ. ಕೆಲವೊಂದು ವಿಚಾರಗಳನ್ನು ನಾವು ಮಾನವೀಯವಾಗಿ ನೋಡಬೇಕಾಗುತ್ತದೆ ಎಂದು ಸಚಿವರು ಇನ್ನೊಂದು ಪ್ರಶ್ನೆಗೆ ಉತ್ತರಿಸಿದ್ದಾರೆ.

### ಮುಕ್ತಾಯಗೊಂಡಿದೆ

ಮಹಾಕುಂಭಕ್ಕೆ ಆಗಮಿಸಿದ ಭಕ್ತರ ಸಂಖ್ಯೆ ದಾಖಲೆ ಬರೆದಿದೆ. ಅಮೆರಿಕದ ಜನಸಂಖ್ಯೆಗಿಂತ ಎರಡು ಪಟ್ಟು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಪವಿತ್ರ ಸ್ನಾನ ಮಾಡಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ಭೇಟಿ ನೀಡಿದ್ದು, ತಮಗೆ ತುಂಬಾ ಖುಷಿ ನೀಡಿದೆ" ಎಂದು ಪ್ರಧಾನಿ ಮೋದಿ ಹಲವು ವಿಚಾರಗಳನ್ನು ಹಂಚಿಕೊಂಡಿದ್ದಾರೆ.
ಪ್ರಧಾನಿ ಮೋದಿಗೆ ಧನ್ಯವಾದ ಹೇಳಿದ ಸಿಎಂ ಯೋಗಿ: 2025ರ ಮಹಾಕುಂಭಮೇಳವು ಯಶಸ್ವಿಯಾಗಿದ್ದಕ್ಕೆ ಪ್ರಧಾನಿ ಮೋದಿ ಅವರ ನಾಯಕತ್ವವೇ ಕಾರಣ ಎಂದು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಪ್ರತಿ ಧನ್ಯವಾದ ಸಲ್ಲಿಸಿದ್ದಾರೆ.
ಮಹಾಕುಂಭಮೇಳ ಕುರಿತು ಪ್ರಧಾನಿಗಳ ಪೋಸ್ಟ್ ಅನ್ನು ಉಲ್ಲೇಖಿಸಿ ಕೃತಜ್ಞತೆ ಸಲ್ಲಿಸುತ್ತಾ, "ಗೌರವಾನ್ವಿತ ಪ್ರಧಾನ ಮಂತ್ರಿಗಳೇ, ನಿಮ್ಮ ಯಶಸ್ವಿ ಮಾರ್ಗದರ್ಶನದ ಪರಿಣಾಮವಾಗಿ 'ಏಕತೆ, ಸಮಾನತೆ, ಸಾಮರಸ್ಯದ ಮಹಾಯಜ್ಞ' – ಮಹಾಕುಂಭವು ಮುಕ್ತಾಯಗೊಂಡಿದೆ. ಭವ್ಯತೆ ಮತ್ತು ದೈವತ್ವದ ಜೊತೆಗೆ ಭದ್ರತೆ, ಸ್ವಚ್ಛತೆ ಮತ್ತು ನಿರ್ವಹಣೆಯಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ.
ಕಳೆದ 45 ಪವಿತ್ರ ದಿನಗಳಲ್ಲಿ, ಪೂಜ್ಯ ಸಂತರು ಮತ್ತು ಋಷಿಗಳು ಸೇರಿದಂತೆ 66 ಕೋಟಿಗೂ ಹೆಚ್ಚು ಭಕ್ತರು ಪವಿತ್ರ ತ್ರಿವೇಣಿಯಲ್ಲಿ ನಂಬಿಕೆಯ ಸ್ನಾನ ಮಾಡುವ ಮೂಲಕ ಆಶೀರ್ವದಿಸಲ್ಪಟ್ಟಿದ್ದಾರೆ. 'ವಸುಧೈವ ಕುಟುಂಬಕಂ' ಎಂಬ ಪವಿತ್ರ ಭಾವನೆಯ ಅಡಿ 'ಎಲ್ಲ ಜನರು ಒಂದೇ' ಎಂಬ ಸಂದೇಶವನ್ನು ಸಾರಿದ್ದಾರೆ. ನಿಮ್ಮ ಮಾರ್ಗದರ್ಶನ ಮತ್ತು ಶುಭ ಹಾರೈಕೆಗಳು ನಮಗೆಲ್ಲರಿಗೂ ಹೊಸ ಶಕ್ತಿ ತುಂಬಿವೆ. ತುಂಬಾ ಧನ್ಯವಾದಗಳು, ಪ್ರಧಾನ ಮಂತ್ರಿಗಳೇ ಎಂದಿದ್ದಾರೆ.

# ಮೇ 10ರವರೆಗೆ ಖಾತೆಗಳ ಅಭಿಯಾನ ಸ್ವಾಗತಾರ್ಹ

**ಮಾಲೂರು:** ಪಟ್ಟಣದ ಪುರಸಭಾ ವ್ಯಾಪ್ತಿಯ ನಾಗರೀಕರ ಬಹುದಿನಗಳ ಬೇಡಿಕೆಯಾದ ಅನಧಿಕೃತ ಬಡಾವಣೆಗಳ ನಿವೇಶನಗಳ ಖಾತೆ ಸಮಸ್ಯೆ ಪರಿಹರಿಸಲು ಸರ್ಕಾರ ಒಂದೇ ಬಾರಿ ಮೇ 10 ರವರೆಗೆ ಅಧಿಕೃತ ಬಡಾವಣೆಗಳ ಈ ಖಾತಾ, ಅನಧಿಕೃತ ಬಡಾವಣೆಗಳ ಬಿ ಖಾತಾ ಅಭಿಯಾನ ಹಮ್ಮಿಕೊಂಡಿರುವುದು ಸ್ವಾಗತ ಬೆಳವಣಿಗೆಯಾಗಿದೆ ಪಟ್ಟಣದ ನಾಗರಿಕರು ಯೋಜನೆಯ ಸದುಪಯೋಗ ಪಡಿಸಿಕೊಳ್ಳುವಂತೆ ಎಂದು ಶಾಸಕ ಕೆ ವೈ ನಂಜೇಗೌಡ ತಿಳಿಸಿದ್ದಾರೆ.

ಪಟ್ಟಣದ ಮಾರುತಿ ಬಡಾವಣೆಯ ತಿರುಮಲ ಕಲ್ಯಾಣ ಮಂಟಪದಲ್ಲಿ ಪಟ್ಟಣದ ಪುರಸಭೆಯು ಹಮ್ಮಿಕೊಂಡಿದ್ದ ಈ ಖಾತಾ ಹಾಗೂ ಬಿ ಖಾತಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು

ಅನಧಿಕೃತ ಬಡಾವಣೆಗಳಲ್ಲಿ ನಿವೇಶನಗಳನ್ನು ಖಾತೆ ಮಾಡಿಕೊಡುವ ಬಗ್ಗೆ ನಾಗರಿಕರ ಬಹುದಿನಗಳ ಬೇಡಿಕೆಯಾಗಿದ್ದು, ಈ ಬೇಡಿಕೆಯನ್ನು ಈಡೇರಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಇದೇ ಮೊದಲ ಬಾರಿಗೆ ಮೇ ಹತ್ತರವರೆಗೆ ಪುರಸಭಾ ವ್ಯಾಪ್ತಿಯ ವಾರ್ಡುಗಳ ಬಡಾವಣೆಗಳಲ್ಲಿ ಅಧಿಕೃತ ಬಡಾವಣೆಗಳಲ್ಲಿ ಈ ಖಾತೆ ಅನಧಿಕೃತ ಬಡಾವಣೆಗಳಲ್ಲಿ ಬಿ ಖಾತೆ ಮಾಡಲು ಆದೇಶಿಸಿದ್ದು ಅದರಂತೆ ಇಲ್ಲಿನ ಪುರಸಭೆಯು ಈ ಖಾತೆ ಹಾಗೂ ಬಿ ಖಾತೆ ಅಭಿಯಾನ ಹಮ್ಮಿಕೊಂಡಿದ್ದು ನಿವೇಶನ ಹೊಂದಿರುವ ಫಲಾನುಭವಿಗಳು ಈ ಖಾತೆ ಅಥವಾ ಬಿ ಖಾತೆಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿ ಅರ್ಜಿ ಸಲ್ಲಿಸಿದ ಏಳು ದಿನಗಳಲ್ಲಿ ಪುರಸಭೆಯ ಅಧಿಕಾರಿಗಳು ಪರಿಶೀಲನೆ ನಡೆಸಿ ಆದೇಶದ ಪ್ರತಿಯನ್ನು ನೀಡಲಿದೆ.

ಪಟ್ಟಣದ ಪುರಸಭಾ ವ್ಯಾಪ್ತಿಯಲ್ಲಿ 20232 ಗ್ರಾಮ ಠಾಣಾ ಖಾತೆಗಳು 6344 ಅಧಿಕೃತ ಖಾತೆಗಳು 8396 ಅನಧಿಕೃತ ಖಾತೆಗಳು ರೂ.167 ಆಶ್ರಯ ಬಡಾವಣೆ ಖಾತೆಗಳು ಸೇರಿದಂತೆ ಒಟ್ಟು 16,339 ಖಾತೆಗಳಿವೆ ಅನಧಿಕೃತ ಬಡಾವಣೆಗಳಲ್ಲಿ ಶೇ.50ರಷ್ಟು ಬಿ ಖಾತೆಗಳಿದ್ದು, ಈ ನಿವೇಶನಗಳ ಖಾತೆಗಳನ್ನು ಫಲಾನುಭವಿಗಳು ಅಭಿಯಾನದಡಿ ಅರ್ಜಿ ಸಲ್ಲಿಸಿ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿಕೊಟ್ಟಲ್ಲಿ ಬಿ ಕಾತೆ ಮಾಡಿಕೊಡಲಾಗುವುದು ಈ ಅವಕಾಶವನ್ನು ಬಳಸಿಕೊಳ್ಳದಿದ್ದಲ್ಲಿ ನಿಮ್ಮ ನಿವೇಶನಕ್ಕೆ ಸಂಬಂಧಿಸಿದಂತೆ ವ್ಯವಹಾರಗಳನ್ನು ಮಾಡಲು ಸಾಧ್ಯವಾಗುವುದಿಲ್ಲ ಅನಧಿಕೃತ ಬಡಾವಣೆಗಳಲ್ಲಿ ಬಿ ಖಾತೆ ನೀಡಿದ ಮೇಲೆ ಪುರಸಭೆಯು ನೀರು ಒಳಚರಂಡಿ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಲತ್ತುಗಳನ್ನು ಒದಗಿಸುವ ಜವಾಬ್ದಾರಿ ಹೆಚ್ಚಾಗುತ್ತದೆ ಕೆಲವರು ಅನಧಿಕೃತ ಬಡಾವಣೆಗಳನ್ನು ನಿರ್ಮಿಸಿ ಆ ಬಡಾವಣೆಗಳಲ್ಲಿ ಯಾವುದೇ ರೀತಿಯ ಸವಲತ್ತುಗಳನ್ನು ಒದಗಿಸದೆ ನಿವೇಶನಗಳನ್ನು ಮಾರಿಕೊಂಡು ಹೋಗಿದ್ದಾರೆ.

ಕಾತ ಆಂದೋಲನವನ್ನು ಸರ್ಕಾರ ಕೈಗೊಂಡಿರುವುದರಿಂದ ನಾಗರಿಕರಿಗೆ ಪ್ರಯೋಜನವಾಗಲಿದೆ ಪುರಸಭೆ ಅಧಿಕಾರಿಗಳು ಈ ಬಿ ಖಾತ ಅಭಿಯಾನ ಕಾರ್ಯಕ್ರಮದ ಮಾಹಿತಿಯನ್ನು ನಾಗರಿಕರಿಗೆ ನೀಡುವ ಕೆಲಸ ಮಾಡಬೇಕು ಹೆಚ್ಚಿನ ರೀತಿಯಲ್ಲಿ ಪ್ರಚಾರಪಡಿಸಿ ಆಟೋ ಪ್ರಚಾರ ಮನೆ ಮನೆಗೆ ಕರಪತ್ರ ಹಂಚಿ ಈ ಅಭಿಯಾನವನ್ನು ಶೇ. ನೂರರಷ್ಟು ಅನುಷ್ಠಾನಕ್ಕೆ ತರಬೇಕು. ಪುರಸಭಾ ಸದಸ್ಯರು ಸಹ ಅಧಿಕಾರಿಗಳು ಹಾಗೂ ಪುರಸಭಾ ಸಿಬ್ಬಂದಿಯೊಂದಿಗೆ ಕೈಜೋಡಿಸಿ ಕಾತ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಸರ್ಕಾರಿ ಕಾರ್ಯಕ್ರಮ ಯಶಸ್ವಿಗೊಳಿಸಿದ ಪುರಸಭೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ವೈಯುಕ್ತಿಕವಾಗಿ ಅಭಿನಂದಿಸಲಾಗುವುದು.



ಪಟ್ಟಣದ ಸ್ವಚ್ಛತೆಗಾಗಿ ಈಗಾಗಲೇ ಕಸ ವಿಲೇವಾರಿ ಘಟಕವನ್ನು ಪ್ರಾರಂಭಿಸಿದ್ದು ಮಾರಿಕಾಂಬ ಟ್ರಸ್ಟಿನವರು ಆಟೋ ಟಿಪ್ಪರ್ ಗಳನ್ನು ಪುರಸಭೆಗೆ ಕೊಡುಗೆಯಾಗಿ ನೀಡುತ್ತಿದ್ದಾರೆ ಆಟೋ ಟಿಪ್ಪರ್ಗಳು ಬಂದ ನಂತರ ಪಟ್ಟಣದಲ್ಲಿ ಸಂಗ್ರಹವಾಗುವ ಕಸವನ್ನು ಕಸ ವಿಲೇವಾರಿ ಘಟಕಕ್ಕೆ ರವಾನಿಸುವ ಮೂಲಕ ಪಟ್ಟಣದ ಸ್ವಚ್ಛತೆಯನ್ನು ಕಾಪಾಡಲಾಗುವುದು ಪಟ್ಟಣದಲ್ಲಿ 21 ಕೋಟಿ ರೂಗಳ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಬಸ್ ನಿಲ್ದಾಣ ಅಭಿವೃದ್ಧಿ ಕಾಮಗಾರಿಯನ್ನ ಕೈಕೊಳ್ಳಲು ಸಂಪುಟ ಸಭೆಯು ಅನುಮೋದಿಸಿದ್ದು ಶೀಘ್ರದಲ್ಲಿಯೇ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲಾಗುವುದು ಅಲ್ಲದೆ 30 ಕೋಟಿ ರೂಗಳ ವೆಚ್ಚದಲ್ಲಿ ಯನ್ನು ಮಾಡಲಾಗುತ್ತಿದೆ.

ವಿರೋಧಪಕ್ಷದವರು ಕೆಲವರು ಮಾಡುವ ಟಿಕೆ ಟಿಪ್ಪಣಿಗಳಿಗೆ ಅಭಿವೃದ್ಧಿಯ ಮೂಲಕ ಉತ್ತರ ನೀಡುತ್ತೇನೆ. ಇತಿಹಾಸದಲ್ಲಿಯೇ ಪಟ್ಟಣಕ್ಕೆ ಹೆಚ್ಚಿನ ಅನುದಾನಗಳನ್ನು ತರುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗಿದೆ. ಪಟ್ಟಣದ ನಾಗರಿಕರು ಈ ಖಾತಾ ಮತ್ತು ಬಿ ಖಾತ ಆಂದೋಲನವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಅದೇ ರೀತಿ ಅಧಿಕಾರಿಗಳು ಸಿಬ್ಬಂದಿ ಜಿಲ್ಲೆಯಲ್ಲಿ ಮಾದರಿಯಾಗಿ ಕಾರ್ಯನಿರ್ವಹಿಸಿ ಈ ಯೋಜನೆಯನ್ನು ಯಶಸ್ವಿಗೊಳಿಸುವಂತೆ ಹೇಳಿದರು

ಇದೇ ಸಂದರ್ಭದಲ್ಲಿ ಈ ಖಾತೆ ಹಾಗೂ ಬಿ ಖಾತೆ ಪ್ರಮಾಣ ಪತ್ರಗಳನ್ನು ಫಲಾನುಭವಿಗಳಿಗೆ ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷ ಕೋಮಲ, ತಹಶೀಲ್ದಾರ್ ಎಂ.ವಿ ರೂಪ, ಯೋಜನಾ ಪ್ರಾಧಿಕಾರ ಅಧ್ಯಕ್ಷ ಮಹಮ್ಮದ್ ನಯೀಮ್ ಉಲ್ಲಾ ಪುರಸಭಾ ಸದಸ್ಯರಾದ ಇಮ್ತಿಯಾಜ್ ಖಾನ್, ಆರ್ ವೆಂಕಟೇಶ್, ಎಂ.ರಾಮಮೂರ್ತಿ ವಿಜಯಲಕ್ಷ್ಮಿ, ಭಾರತಮ್ಮ, ಪುರಸಭಾ ಮುಖ್ಯಾಧಿಕಾರಿ ಎ.ಬಿ ಪ್ರದೀಪ್, ಕಂದಾಯ ಅಧಿಕಾರಿ ರೇಣುಕಾ, ಕಂದಾಯ ನಿರೀಕ್ಷಕ ನಾಗರಾಜ್, ಹಿರಿಯ ಆರೋಗ್ಯ ನಿರೀಕ್ಷಕ ಶ್ರೀನಿವಾಸ್, ಯುವ ಕಾಂಗ್ರೆಸ್ ಅಧ್ಯಕ್ಷ ಎಂ.ಎಂ.ತನ್ವೀರ್, ಎಂ.ಎಂ.ಶಬ್ಬೀರ್, ಹನುಮಂತಪ್ಪ, ಜೆ.ಎಂ.ಸುರೇಶ್, ರಾಮಣ್ಣ ಇನ್ನಿತರರು ಹಾಜರಿದ್ದರು

# ಗುತ್ತಿಗೆದಾರರಿಗೆ ಹಣ ಬಿಡುಗಡೆಯಾಗಿಲ್ಲ, ಕುಟುಂಬ ಸಮೇತ ಆತ್ಮಹತ್ಯೆ ಮುಂದಾಗಬೇಕಾಗುತ್ತದೆ:ಎಚ್ಚರಿಕೆ

**ಕುಣಿಗಲ್:** ತಾಲ್ಲೂಕು ಗುತ್ತಿಗೆದಾರರಿಗೆ ವಿವಿಧ ಇಲಾಖೆಗಳಿಂದ 450 ಕೋಟಿ ಬಾಕಿ ಹಣ ಬಿಡುಗಡೆ ಆಗದೇ ಸಂಕಷ್ಟದಲ್ಲಿರುವ ಗುತ್ತಿಗೆದಾರರು ಕುಟುಂಬ ಸಮೇತರಾಗಿ ಆತ್ಮಹತ್ಯೆ ಮಾಡಿಕೊಳ್ಳುವ ಸ್ಥಿತಿಗೆ ಬಂದಿದ್ದಾರೆ ಎಂದು ತಾಲ್ಲೂಕು ಗುತ್ತಿಗೆದಾರರ ಸಂಘದ ಅಧ್ಯಕ್ಷ ಆಲ್ಕೆರೆ ನಾರಾಯಣ್ ರಾಜ್ಯ ಸರ್ಕಾರ ಹಾಗೂ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕಳೆದ ಎರಡು ವರ್ಷಗಳಿಂದ ತಾಲೂಕಿನಲ್ಲಿ ಇರುವ ವಿವಿಧ ಇಲಾಖೆಗಳಿಂದ ಸುಮಾರು 450 ಕೋಟಿ ರೂಗಳು ಬರಬೇಕಾಗಿದ್ದು ಸಾಲ ಶುಲ ಮಾಡಿ ಗುತ್ತಿಗೆದಾರರು ಕಾಮಗಾರಿ ಮುಗಿಸಿ ತಿಂಗಳುಗಳೆ ಕಳೆದರೂ ಹಣ ಬಿಡುಗಡೆ ಆಗದೆ ಸಂಕಷ್ಟದಲ್ಲಿ ಸಿಲುಕಿದ್ದಾರೆ ವಿವಿಧ ಬ್ಯಾಂಕುಗಳಿಂದ ಬಡ್ಡಿ ಸಮೇತ ಹಣಕ್ಕಾಗಿ ಪೀಡಿಸಲಾಗುತ್ತಿದೆ ನಾವು ಗುತ್ತಿಗೆದಾರರು ಹಣ ಕಟ್ಟಲಾಗದೆ ಬ್ಯಾಂಕುಗಳ ಹಾಗೂ ಇತರೆ ಕೈ ಸಾಲ ಮಾಡಿದ್ದು ಕಿರುಕುಳಕ್ಕೆ ಬೇಸತ್ತು ಕುಟುಂಬ ಸಮೇತರಾಗಿ ಆತ್ಮಹತ್ಯೆ ಮಾಡಿಕೊಳ್ಳುವ ಸ್ಥಿತಿ ಮೂಡಿದೆ ಸರ್ಕಾರ ದಯಮರಣವನ್ನಾದರೂ ಕಲ್ಪಿಸಲಿ ಎಂದು ಕಿಡಿ ಕಾರಿದ ಅವರು ಇತ್ತೀಚಿಗೆ ಪ್ಯಾಕೇಜ್ ಟೆಂಡರ್ ಕರಿಲಾಗುತ್ತಿದ್ದು ಇದರಿಂದ ಸಣ್ಣ ಗುತ್ತಿಗೆದಾರರಿಗೆ ತೊಂದರೆ ಆಗುತ್ತದೆ ಸಣ್ಣ ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಸರ್ಕಾರದಲ್ಲಿ ಎಷ್ಟು ಹಣ ಇರುತ್ತದೆ ಅಷ್ಟಕ್ಕೆ ಮಾತ್ರ ಟೆಂಡರ್ ಕರೆಯಬೇಕು ಅದನ್ನು ಬಿಟ್ಟು ಅತಿಯಾಗಿ ಮಾಡುತ್ತಿರುವುದರಿಂದ ಇಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ನಾವು ಪಡೆದಿರುವ ಸಾಲಗಳಿಗೆ ಬ್ಯಾಂಕುಗಳು ಬಡ್ಡಿ ಹಾಕದಂತೆ ಹಾಗೂ ಸಮಯ ನೀಡುವಂತಾದರೂ ಸರ್ಕಾರ ಮಾಡಲಿ ಇಲ್ಲ ಶೀಘ್ರವಾಗಿ ಬಾಕಿ ಇರುವ ಬಿಲ್ಲುಗಳನ್ನು ಪಾವತಿಸಲಿ ಎಂದು ಎಚ್ಚರಿಕೆ ನೀಡಿದ ಅವರು ಮುಂದಿನ ದಿನಗಳಲ್ಲಿ ರಾಜ್ಯದಾದ್ಯಂತ ಪ್ರತಿಭಟನೆ ಹಮ್ಮಿಕೊಳ್ಳುವುದಾಗಿ ಎಚ್ಚರಿಕೆ ನೀಡಿದರು. ತಾಲೂಕಿನ ವಿವಿಧ ಇಲಾಖೆಗಳಿಂದ ಗುತ್ತಿಗೆದಾರರಿಗೆ ಬರಬೇಕಾದ ಬಾಕಿ ಹಣ ಇಂತಿದ್ದು ಕಾವೇರಿ ನೀರಾವರಿ ನಿಗಮದಿಂದ 150 ಕೋಟಿ ಬಾಕಿ, ಸಣ್ಣ ನೀರಾವರಿ ನಿಗಮದಿಂದ 6ಕೋಟಿ, ಲೋಕೋಪಯೋಗಿ ಇಲಾಖೆಯಿಂದ 200 ಕೋಟಿ ಬಾಕಿ, ಜಿಲ್ಲಾ ಪಂಚಾಯತ್ ಇಂದ 6 ಕೋಟಿ, ಜೆ.ಜೆ.ಎಂ. ನಿಂದ 50ಕೋಟಿ, ಹೀಗೆ ಸುಮಾರು 450 ಕೋಟಿ ರೂಗಳು ಈ ತಾಲೂಕಿನ ಗುತ್ತಿಗೆದಾರರಿಗೆ ಬರಬೇಕಾಗಿದೆ ಇದಕ್ಕಾಗಿ ಅಧಿಕಾರಿಗಳು ರಾಜ್ಯ ಸರ್ಕಾರ ಕೂಡಲೇ ಮನಸ್ಸು ಮಾಡಬೇಕು ಇಲ್ಲದಿದ್ದರೆ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು .



# ಅಂಬೇಡ್ಕರ್ ತತ್ವ ಸಿದ್ಧಾಂತಗಳ ಪ್ರಚುರಗೊಳಿಸಿ

ಶಿಡ್ಲಘಟ್ಟ : ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ತತ್ವ ಸಿದ್ಧಾಂತಗಳನ್ನು ಹಾಗೂ ಸೈನಿಕ ದಳದ ಗುರಿ ಉದ್ದೇಶಗಳನ್ನು ಪ್ರತಿ ಊರು, ವಾರ್ಡ್, ಗಲ್ಲಿಯಲ್ಲೂ ಪ್ರಚಾರ ಮಾಡಬೇಕು ಆ ಮೂಲಕ ಸಮಾನತೆಯ ಸಮಾಜ ನಿರ್ಮಿಸಬೇಕೆಂದು ಸಮತಾ ಸೈನಿಕ ದಳದ ರಾಷ್ಟ್ರೀಯ ಅಧ್ಯಕ್ಷ ಡಾ.ಎಂ. ವೆಂಕಟಸ್ವಾಮಿ ತಿಳಿಸಿದರು.




ನಗರದ ಕೋಟೆ ವೃತ್ತದಲ್ಲಿ ಹಮ್ಮಿಕೊಂಡಿದ್ದ ಸಮತಾ ಸೈನಿಕ ದಳದ ಶತಮಾನೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ ಪ್ರತಿ ಹಳ್ಳಿ, ನಗರದಲ್ಲೂ ಸಮತಾ ಸೈನಿಕ ದಳದ ಘಟಕಗಳನ್ನು ಆರಂಭಿಸಬೇಕು,ಮೂಲಕ ಸಮಾನತೆಯ ನವ ಸಮಾಜ ನಿರ್ಮಾಣ ಮಾಡಬೇಕು ಎಂದು ಹೇಳಿದರು.

ಡಾ.ಬಿ.ಆರ್.ಅಂಬೇಡ್ಕರ್ ತಮಗೆ ಎದುರಾದ ಜಾತೀಯತೆ ಸಮಸ್ಯೆ ದೇಶದ ಯಾರೊಬ್ಬರಿಗೂ ಎದುರಾಗಬಾರದು ಎಂಬ ಉದ್ದೇಶದಿಂದ ಸಮತಾ ಸೈನಿಕ ದಳವನ್ನು ಕೇವಲ 5 ರಕ್ಷಣಾ ಕಾರ್ಯಕರ್ತರಿಂದ ಆರಂಭಿಸಿದ್ದರು,ಕೆಲವೇ ದಿನಗಳಲ್ಲಿ ಅದು 2,500ಕ್ಕೆ ಮುಟ್ಟಿತು ಇದೀಗ ದೇಶದ ಉದ್ದಗಲಕ್ಕೂ ಹರಡಿದೆ ಅದು ಅಂಬೇಡ್ಕರ್ ಶಕ್ತಿ ಸಾಮರ್ಥ್ಯ ತೋರುತ್ತದೆ ಆದರೆ ಅದನ್ನು ಗುರುತಿಸುವಲ್ಲಿ ನಮ್ಮ ದೇಶದ ಮಾಧ್ಯಮಗಳು, ಸಂಘ ಸಂಸ್ಥೆಗಳು, ಜನಪ್ರತಿನಿಧಿಗಳು ವಿಫಲರಾಗಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಈ ಬಗ್ಗೆ ವಿದೇಶಿಗರಿಗೆ ಸಂಪೂರ್ಣ ಅರಿವಿದೆ, ವಿಶ್ವಸಂಸ್ಥೆಯಲ್ಲೂ ಅಂಬೇಡ್ಕರ್‌ಗೆ ಗೌರವ ಸಲ್ಲಿಕೆಯಾಗಿದೆ ಜಗತ್ತಿನ 190 ಕ್ಕೂ ಹೆಚ್ಚು ದೇಶಗಳಲ್ಲಿ ಅಂಬೇಡ್ಕರ್ ಅವರಿಗೆ ನಮನ ಸಲ್ಲಿಸಿದ್ದಾರೆ ಎಂದರು.

ಈ ವೇಳೆ ಅಂಬೇಡ್ಕರ್ ಪುತ್ಥಳಿಗೆ ಪುಷ್ಪ ನಮನ ಸಲ್ಲಿಸಲಾಯಿತು,ಸಂವಿಧಾನದ ಪೀಠಿಕೆ ಓದಿ, ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು, ಸಮತಾ ಸೈನಿಕ ದಳದ ಹಿರಿಯ ಸಂಘಟಕರನ್ನು, ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಮತಾ ಸೈನಿಕ ದಳದ ರಾಜ್ಯ ಪ್ರಧಾನ ಕಾರ್ಯದರ್ಶಿ ವೆಂಕಟರೋಣಪ್ಪ, ಖಜಾಂಚಿ ಚಂದ್ರಶೇಖರ್, ರಾಜ್ಯ ಯುವ ಘಟಕದ ಅಧ್ಯಕ್ಷ ಪ್ರಶಾಂತ್, ರೈತ ಘಟಕದ ರಾಜ್ಯಾಧ್ಯಕ್ಷ ಬಾಬು, ಜಿಲ್ಲಾಧ್ಯಕ್ಷ ಈಶ್ವರಪ್ಪ, ತಾಲ್ಲೂಕು ಮುಖಂಡರಾದ ವಿಜಯ್ ಕುಮಾರ್,ಮೇಲೂರು ಮುನಿಶಾಮಯ್ಯ, ಪ್ರಕಾಶ್, ಮುನಿಶಾಮಪ್ಪ, ಸೀನಪ್ಪ ಮುಂತಾದವರು ಹಾಜರಿದ್ದರು.

# ಕುರಟ್ಟಿ ಹೊಸೂರು ಸ.ಶಾಲೆಯಲ್ಲಿ ಕಲಿಕಾ ಹಬ್ಬ

**ಹನೂರು:** ತಾಲ್ಲೂಕಿನ ಕೌದಳ್ಳಿ ಕ್ಲಸ್ಟರ್ ಕಲಿಕಾ ಹಬ್ಬ ಕಾರ್ಯಕ್ರಮವನ್ನು ಕುರಟ್ಟಿ ಹೊಸೂರು ಸರ್ಕಾರಿ ಶಾಲೆಯಲ್ಲಿ ಆಚರಣೆ ಮಾಡಲಾಯಿತು. ಕಲಿಕಾ ಹಬ್ಬದಲ್ಲಿ 1 ರಿಂದ 5ನೇ ತರಗತಿ ಮಕ್ಕಳಿಗೆ ಕನ್ನಡ, ಗಣಿತ, ಪರಿಸರ, ಸಾಮಾನ್ಯ ಜ್ಞಾನ, ಇಂಗ್ಲಿಷ್ ವಿಷಯಗಳ ಬಗ್ಗೆ ಹಬ್ಬದಂತೆ ಮಕ್ಕಳು ಸಂತೋಷದಾಯಕವಾಗಿ ಭಾಗವಹಿಸಿದ್ದರು.

ಕಲಿಕಾ ಹಬ್ಬ ಕಾರ್ಯಕ್ರಮದ ಕುರಿತು ಸಿ.ಆರ್.ಪಿ ದೇವರಾಜ್ ಮಾತನಾಡಿ ಮಕ್ಕಳ ಪ್ರತಿಭೆಯನ್ನು ಗುರುತಿಸಿ ಮಕ್ಕಳನ್ನು ಪ್ರೋತ್ಸಾಹಿಸಲು ಕಲಿಕಾ ಹಬ್ಬದ ವಿಶೇಷ ವಿನೂತನ ಕಾರ್ಯಕ್ರಮ ಆಚರಣೆ ಮಾಡಲಾಗುತ್ತದೆ. ಇಂದು ನಮ್ಮ ಶಾಲೆಯಲ್ಲಿ ಕಲಿಕಾ ಹಬ್ಬ ಆಚರಿಸಲಾಗುತ್ತದೆ. ಕಲಿಕಾ ಹಬ್ಬದಲ್ಲಿ ಏಳು ಚಟುವಟಿಕೆಗಳನ್ನು ಮಕ್ಕಳಿಗೆ ಆಯೋಜಿಸಲಾಗಿರುತ್ತದೆ.

ಎಲ್ಲಾ ಶಿಕ್ಷಕರು ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಬೇಕು. ಪ್ರತಿಭೆಗೆ ಅನುಗುಣವಾಗಿ ಉತ್ತಮವಾದ ತೀರ್ಪನ್ನು ನೀಡಬೇಕು. ಕಲಿಕಾ ಹಬ್ಬದಲ್ಲಿ ಭಾಗವಹಿಸುವ ಮಕ್ಕಳು ತಮ್ಮ ಪ್ರತಿಭೆಯನ್ನು ತುಂಬಾ ಬಿಚ್ಚು ಮನಸ್ಸಿನಿಂದ ಪಾಲ್ಗೊಂಡು ಉತ್ತಮವಾದ ರೀತಿಯಲ್ಲಿ ತಮ್ಮ ಪ್ರತಿಭೆಯನ್ನು ಹೊರ ಹಾಕುವ ವೇದಿಕೆಯಾಗಲಿ ಎಂದು ತಿಳಿಸಿದರು.




ಕಲಿಕಾ ಹಬ್ಬ ಕಾರ್ಯಕ್ರಮದಲ್ಲಿ ಜಯಗಳಿಸಿದ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮವನ್ನು ಕೌದಳ್ಳಿ ಕ್ಲಸ್ಟರ್ ಸಿಆರ್ಪಿ ಅನಿಲ್ ಕುಮಾರ್ ಹಾಗೂ ಕುರಟ್ಟಿ ಹೊಸೂರು ಸರ್ಕಾರಿ ಪ್ರಾಥಮಿಕ ಶಾಲೆ ಮುಖ್ಯೋಪಾಧ್ಯಾಯ ಶಿವಮೂರ್ತಿ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಿದ್ದರು.

ಬಿ.ಆರ್.ಸಿ ವೆಂಕಟೇಶ್, ಇಸಿಓ ಮಹೇಶ್, ನಟೇಶ್, ಪ್ರೌಢಶಾಲೆ ಮುಖ್ಯ ಶಿಕ್ಷಕ ಶಿವಶಂಕರ್ ನಾಯಕ್, ಮುಖ್ಯ ಶಿಕ್ಷಕ ಮುತ್ತುಸ್ವಾಮಿ, ಮುತ್ತುರಾಜು, ಕೃಷ್ಣ ನಾಯಕ್, ಮಹಾದೇವಮ್ಮ, ಶಿಕ್ಷಕ ಸಿದ್ದರಾಜು, ರಮೇಶ್, ಅಸಂತ, ರಾಕೇಶ್, ತಾವೇಂದ್ರ, ಕೃಷ್ಣಪ್ಪ, ಮಹದೇವಮ್ಮ, ಜಬಿವುಲ್ಲಾ, ಪುಟ್ಟಸಿದ್ದಮ್ಮ ಜಯಶೀಲ ರಾಜ್, ನಾಗರತ್ನ ಸೇರಿದಂತೆ ಇನ್ನಿತರರು ಶಿಕ್ಷಕ ಶಾಲೆಯ ಮಕ್ಕಳು ಹಾಜರಿದ್ದರು.

# ಗ್ರಾ.ಪಂ.ಅಧ್ಯಕ್ಷ-ಸದಸ್ಯರಿಗೆ ಸನ್ಮಾನ

**ಚಿಕ್ಕಬಳ್ಳಾಪುರ:** ನಗರ ಹೊರವಲಯದಲ್ಲಿರುವ ಶಾಸಕ ಪ್ರದೀಪ್ ಈಶ್ವರ್ ನಿವಾಸದಲ್ಲಿ ಮಂಚನಬೆಲೆ ಗ್ರಾಮಪಂಚಾಯಿತಿ ನೂತನ ಅಧ್ಯಕ್ಷ ಮಧು ಹಾಗೂ ಸದಸ್ಯರನ್ನು ಶಾಸಕರು ಸನ್ಮಾನಿಸಿ ಗೌರವಿಸಿದರು.

ಈ ವೇಳೆ ಮಂಚನಬಲೆ ಗ್ರಾ.ಪಂ ಅಧ್ಯಕ್ಷ ಮಧು ಮಾತನಾಡಿ, ತಮ್ಮ ನಿವಾಸದಲ್ಲಿ ಗ್ರಾಮ ವಚಾಯಿತಿ ಸದಸ್ಯರನ್ನು ಸನ್ಮಾನಿಸಿ ಗೌರವಿಸಿದ್ದು ಬಹಳಷ್ಟು ಖುಷಿ ತಂದಿದೆ. ಗೌರವ ಸಿಕ್ಕ ತಕ್ಷಣ ನಮ್ಮ ಜವಾಬ್ದಾರಿ ಮುಗಿಯಿತು ಎಂದರ್ಥಲ್ಲ. ನಮಗೆ ಇನ್ನಷ್ಟು ಜವಾಬ್ದಾರಿ ಹೆಚ್ಚಾಗಿದೆ. ಪಚಾಯಿತಿ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಸದಸ್ಯರು ಪರಸ್ಪರ ಸಹಕಾರದೊಂದಿಗೆ ಕಾರ್ಯಗಳನ್ನು ಕೈಗೊಳ್ಳುವ ಮೂಲಕ ಪಂಚಾಯಿತಿಯನ್ನು ಅಭಿವೃದ್ಧಿಯತ್ತ ಸಾಗಿಸಲಾಗುವುದು. ಶಾಸಕ ಪ್ರದೀಪ್ ಈಶ್ವರ್ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತಿದ್ದು ಅವರ ಅವಧಿಯಲ್ಲಿ ಚಿಕ್ಕಬಳ್ಳಾಪುರಇನ್ನಷ್ಟು ಪ್ರಗತಿಯತ್ತ ಸಾಗಲಿದೆ ಎಂದು ಹೇಳಿದರು.






ಮಂಚನಬೆಲೆ ಪಂಚಾಯಿತಿಯಲ್ಲಿ ಆಗಬೇಕಾದ ಕೆಲಸ ಕಾರ್ಯಗಳ ಬಗ್ಗೆ ಅನುದಾನ ಬಿಡುಗಡೆ ಬಗ್ಗೆಶಾಸಕರ ಜತೆ ಗ್ರಾಮದ ಮುಖಂಡರೂಡನೆ ಚರ್ಚಿಸಿದ್ದು ಅವರು ಕೂಡ ಎಲ್ಲ ರೀತಿಯ ಸಹಕಾರ ನೀಡುವುದಾಗಿ ಭರವಸೆ ವ್ಯಕ್ತಪಡಿಸಿದ್ದಾರೆ. ಇನ್ನು ಮುಚನಬಲೆ ಯಲ್ಲಿ ಸ್ಮಶಾನಕ್ಕೆ ಜಾಗದ ಬೇಡಿಕೆ ಇಟ್ಟಿದ್ದು ಅದನ್ನ ಕೂಡ ಆದಷ್ಟೂ ಬೇಗ ನೀಡುವುದಾಗಿ ಶಾಸಕರು ಭರವಸೆ ನೀಡಿದ್ದಾರೆ. ಮಂಚನಬೆಲೆ ಗ್ರಾಮ ಪಂಚಾಯಿತಿ ವತಿಯಿಂದ ಶಾಸಕರಿಗೆ ಧನ್ಯವಾದ ತಿಳಿಸುತ್ತೇನೆ ಎಂದರು.

# ಎಂಇಎಸ್ ದೌರ್ಜನ್ಯಕ್ಕೆ ಸರಕಾರ ಕಡಿವಾಣ ಹಾಕಬೇಕು

**ಮಾಗಡಿ:** ಎಂಇಎಸ್ ಪುಂಡರ ದೌರ್ಜನ್ಯಕ್ಕೆ ಸರಕಾರ ಕಡಿವಾಣ ಹಾಕಬೇಕು ಎಂದು ಕರ್ನಾಟಕ ರಾಜ್ಯ ಕಟ್ಟಡ ಮತ್ತು ಅಸಂಘಟಿತ ಕಾರ್ಮಿಕರ ಒಕ್ಕೂಟದ ರಾಜ್ಯಾಧ್ಯಕ್ಷ ಡಾ.ಪ್ರಸನ್ನಗೌಡ ಒತ್ತಾಯಿಸಿದರು.

ಪಟ್ಟಣದ ಕರ್ನಾಟಕ ರಾಜ್ಯ ಕಟ್ಟಡ ಮತ್ತು ಅಸಂಘಟಿತ ಕಾರ್ಮಿಕರ ಒಕ್ಕೂಟದ ಕಚೇರಿಯಲ್ಲಿ ಮಂಗಳವಾರ ಏರ್ಪಡಿಸಿದ್ದ ಪತ್ರಿಕಾಘೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಗಾವಿಯಲ್ಲಿ ಕೆಎಸ್‌ಆರ್‌ಟಿಸಿ ಬಸ್ ಟಿಕೇಟು ಪಡೆಯಲು ಕನ್ನಡದಲ್ಲಿ ಮಾತನಾಡಿ ಎಂದ ನಿರ್ವಾಹಕನ ಮೇಲೆ ಎಂಇಎಸ್ ಪುಂಡರು ಹಲ್ಲೆ ಮಾಡುವ ಜೊತೆಗೆ ನಿರ್ವಾಹಕನ ವಿರುದ್ಧ ಲೈಂಗಕ ದೌರ್ಜನ್ಯ ಕೇಸ್ ದಾಖಲಿಸಿರುವುದು ಖಂಡನೀಯ ಇಂಥಹ ಘಟನೆಗಳು ನಡೆಯದಂತೆ ಸರಕಾರ ಸೂಕ್ತ ಕ್ರಮಕೈಗೊಳ್ಳಬೇಕು. ಎಂಇಎಸ್ ಪುಂಡರ ಎಡೆಮುರಿ ಕಟ್ಟದಿದ್ದರೆ ಇನ್ನೆಷ್ಟು ಮಂದಿ ದೌರ್ಜನ್ಯ, ದಬ್ಬಾಳಿಕೆಗೆ ಬಲಿಯಾಗುತ್ತಾರೆ ಗೊತ್ತಿಲ್ಲ ಅಂಥಹ ಘಟನೆಗಳು ನಡೆಯುವ ಮುನ್ನಾ ಕಠಿಣ ಕ್ರಮಕೈಗೊಳ್ಳಬೇಕು. ಇಂಥಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸದಿದ್ದರೆ ಮುಂದೆ ಕನ್ನಡ ನಾಡಿನಲ್ಲಿ ಕನ್ನಡಿಗರಿಗೆ ಜಾಗ ಇಲ್ಲದಂತಾಗುತ್ತದೆ. ಕನ್ನಡಿಗರ ಮೇಲೆ ದೌರ್ಜನ್ಯ ಮಾಡುತ್ತಿರುವ ಮರಾಠಿಗರ ಮೇಲೆ ಕಠಿಣ ಕಾನೂನು ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿದರು.




ಬೆಳಗಾವಿಯಲ್ಲಿ ಕನ್ನಡಿಗರಿಗೆ ರಕ್ಷಣೆ ಇಲ್ಲ ಎಂದರೆ ಏಗೆ, ಬೆಳಗಾವಿಯ ಪರಿಸ್ಥಿತಿ ಆಯೋಮಯವಾಗಿದೆ, ಸುಖಾ ಸುಮ್ಮನೆ ಎಂಇಎಸ್ ಪುಂಡರು ಕನ್ನಡಿಗರ ತಾಳ್ಮೆ ಕೆಡಿಸಿದರೆ ತಕ್ಕ ಬುದ್ಧಿಕಲಿಸುವ ಸಮಯ ಸನ್ನಿಹವೆ ಬರಲಿದೆ. ಕಾರ್ಮಿಕ ಸಂಘಟನೆಗಳ ಮುಖಂಡರು, ಕನ್ನಡ ಸಂಘಟನೆಗಳ ಮುಖಂಡರು ಒಂದಾಗಿ ಮುಂದಿನ ದಿನಗಳಲ್ಲಿ ಎಂಇಎಸ್ ಪುಂಡರ ದೌರ್ಜನ್ಯಕ್ಕೆ ಕಡಿವಾಣ ಹಾಕಿ ತಕ್ಕ ಬುದ್ಧಿಕಲಿಸುವ ಕೆಲಸ ಮಾಡುವುದಾಗಿ ಎಚ್ಚರಿಕೆ ನೀಡಿದರು.

# ಕೊಟ್ಟಿಗೆ ಹಣ ಬಂದಿಲ್ಲ ಎಂದು ಜಾನುವಾರು ಜತೆ ಗ್ರಾಪಂ.ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ

ಯಳಂದೂರು: ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೊಟ್ಟಿಗೆ ನಿರ್ಮಿಸಿಕೊಂಡು ಅನೇಕ ವರ್ಷಗಳು ಕಳೆದರೂ ಇನ್ನೂ ಕೂಡ ಹಣ ಬಂದಿಲ್ಲ ಎಂದು ಗ್ರಾಮಸ್ಥರು ಜಾನುವಾರುಗಳೊಂದಿಗೆ ಗ್ರಾಮ ಪಂಚಾಯಿತಿ ಕಚೇರಿಗೆ ಬಂದು ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ನರೇಗಾದಡಿಯಲ್ಲಿ 2017 ರಿಂದ 2020 ರವರೆಗೆ ಕೊಟ್ಟಿಗೆ ನಿರ್ಮಾಣ ಮಾಡಿಕೊಂಡಿರುವರಿಗೂ ಇನ್ನೂ ಬಿಲ್ ಪಾವತಿ ಮಾಡಿಲ್ಲ. ಈ ಬಗ್ಗೆ ಪಂಚಾಯಿತಿಗೆ ಅಲೆದು ಸಾಕಾಗಿದೆ. ಬಿಲ್ ಪಾವತಿ ಮಾಡಿಕೊಡುವಂತೆ ಹಲವು ಬಾರಿ ಮನವಿ ಮಾಡಿದರೂ ಇಲ್ಲಿನ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಾರೆ. ಅಲ್ಲದೆ ಪಂಚಾಯಿತಿಯಲ್ಲಿ ನಮ್ಮ ಹಣ ನಮಗೆ ಕೊಡಬೇಕೆಂದರೂ ಕೂಡ ಲಂಚವನ್ನು ಕೊಡಬೇಕು. ಒಂದು ಫೈಲ್ ಪಾಸಾಗಬೇಕಾದರೆ ಕನಿಷ್ಟ 1 ಸಾವಿರ ರೂಪಾಯಿಯಾದರೂ ಕೊಡಬೇಕು. ನಾವು ಸರ್ಕಾರ ನಿಗಧಿ ಪಡಿಸಿರುವ ಎಲ್ಲಾ ಮಾನದಂಡಗಳನ್ನೂ ಅಳವಡಿಸಕೊಂಡು ಕೊಟ್ಟಿಗೆ ನಿರ್ಮಾಣ ಮಾಡಿದ್ದರೂ ಇವರು ನಿರ್ಲಕ್ಷ್ಯ ವಹಿಸಿದ್ದಾರೆ. ಕೆಲವರು ಕೊಟ್ಟಿಗೆ ನಿರ್ಮಾಣ ಮಾಡದೆ ಬಿಲ್ ಮಾಡಿಕೊಂಡಿದ್ದಾರೆ. ಹಾಗಾಗಿ ಇಲ್ಲಿ ವ್ಯಾಪಾಕ ಭ್ರಷ್ಟಾಚಾರ ನಡೆಯುತ್ತಿದೆ. ಈ ಬಗ್ಗೆ ಪ್ರಶ್ನಿಸಿದರೆ ನಮಗೆ ಸೂಕ್ತ ಸ್ಪಂದನೆ ಸಿಗುತ್ತಿಲ್ಲ. ಕೂಲಿ ಮೊತ್ತವನ್ನು ಪಾವತಿಸಿ ಸಾಮಾಗ್ರಿ ಮೊತ್ತವನ್ನು ಇನ್ನೂ ಬಾಕಿ ಉಳಿಸಿಕೊಳ್ಳಲಾಗಿದೆ 48 ಸಾವಿರ ರೂ. ಹಣದಲ್ಲಿ ಕೇವಲ ನನಗೆ 18 ಸಾವಿರ ರೂ. ಮಾತ್ರ ಪಾವತಿ ಮಾಡಲಾಗಿದೆ. ಉಳಿಕೆ ಹಣ ಬಂದಿಲ್ಲ ಎಂದು ಸುಂದರ್ ತಮ್ಮ ಅಳಲನ್ನು ತೋಡಿಕೊಂಡರು. ಸಂಬಂಧಪಟ್ಟ ಎಂಜಿನಿಯರ್ ಕೂಡ ಈ ಬಗ್ಗೆ ನಿರ್ಲಕ್ಷ್ಯ ವಹಿಸಿರುವುದೂ ಕೂಡ ಇದಕ್ಕೆ ಪ್ರಮುಖ ಕಾರಣವಾಗಿದೆ ಎಂಬುದು ಸಾರ್ವಜನಿಕರ ಆರೋಪವಾಗಿದೆ. ಈ ಬಗ್ಗೆ ಸಂಬಂಧಪಟ್ಟ ಮೇಲಾಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕು ಎಂದು ದಿಕ್ಕಾರ ಕೂಗಿ ಪ್ರತಿಭಟನೆ ನಡೆಸಿದರು.



2 ತಿಂಗಳೊಳಗೆ ಪಾವತಿಸಲು ಕ್ರಮ: ಈ ಸಂದರ್ಭದಲ್ಲಿ ಗ್ರಾಪಂ ಪಿಡಿಒ ಮಂಜುನಾಥ್ ಮಾತನಾಡಿ, ನಾನು ಇಲ್ಲಿಗೆ ಹೊಸದಾಗಿ ಬಂದಿದ್ದೇನೆ. ಬಂದು 2 ತಿಂಗಳು ಕಳೆದಿದೆ. ಪಂಚಾಯಿತಿ ವ್ಯಾಪ್ತಿಯಲ್ಲಿ ಒಟ್ಟು 41 ಕೊಟ್ಟಿಗೆ ನಿರ್ಮಾಣ ಮಾಡಲಾಗಿದೆ ಎಂಬ ಮಾಹಿತಿ ಇದೆ. ಸಾಮಾಗ್ರಿ ಮೊತ್ತವನ್ನು ಪಾವತಿಸದಿರುವ ಕುರಿತು ಸಮಗ್ರವಾಗಿ ನಾನು ಪರಶೀಲಿಸಿ. ಇದನ್ನು ಸರಿಪಡಿಸಿ 2 ತಿಂಗಳೊಳಗೆ ಬಿಲ್ ಪಾವತಿಸಲು ಕ್ರಮ ವಹಿಸುತ್ತೇನೆ ಎಂದು ಭರವಸೆ ನೀಡಿದರು.

ನಂತರ ಪ್ರತಿಭಟನಾಕಾರರು ತಮ್ಮ ಪ್ರತಿಭಟನೆಯನ್ನು ಹಿಂಪಡೆದರು. ಜಾನುವಾರಗಳನ್ನು ಪಂಚಾಯಿತಿಯ ಮುಖ್ಯ ಗೇಟ್‌ಗೆ ಕಟ್ಟಿದ್ದರಿಂದ ಕೆಲ ಕಾಲ ಸಾರ್ವಜನಿಕರು ಪಂಚಾಯಿತಿಗೆ ಹೋಗಿ ಬರಲು ತೊಂದರೆಯಾಯಿತು.ಗ್ರಾಮದ ಸುಂದರ್, ಸಂತೋಷ್, ಮಹೇಶ್, ಚಂದ್ರು ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಜಾತಿ ರಾಜಕಾರಣ ನಡೆದಿಲ್ಲ: ಶಾಸಕ ಕೆ.ವೈ.ನಂಜೇಗೌಡ





**ಮಾಲೂರು:** ಜಾತಿ ಹೆಸರಿನಲ್ಲಿ ರಾಜಕಾರಣ ಮಾಡಿದವರು ಯಶಸ್ಸು ಗಳಿಸಲಿಲ್ಲ ಯಾವುದೇ ಜಾತಿಯವರಾಗಲಿ ಸ್ಥಳೀಯರು ಶಾಸಕರಾಗಲಿ ಹೊರಗಿನಿಂದ ಬಂದವರಿಗೆ ಮಣೆ ಹಾಕಿ ಸ್ವಾರ್ಥಕ್ಕೆ ಹಿಂದೆ ಹೋಗುವ ಪ್ರಭಾಕರ್ ನನ್ನ ಮೇಲೆ ಮಾತನಾಡಲು ಅರ್ಹತೆ ಇಲ್ಲ ಶಾಸಕ ಕೆ ವೈ ನಂಜೇಗೌಡ ಗುಡಿಗಿದರು.

ಪಟ್ಟಣದ ಆರ್.ಎಫ್ ರಸ್ತೆಯಲ್ಲಿ ಸವಿತಾ ಸಮಾಜದ ಭವನವನ್ನು ಉದ್ಘಾಟಿಸಿ ಮಾತನಾಡಿದರು. ತಾಲ್ಲೂಕಿನಲ್ಲಿ ಇದುವರೆಗೂ ಜಾತಿ ರಾಜಕಾರಣ ನಡೆದಿಲ್ಲ ಸ್ಥಳೀಯರು ಯಾರೇ ಆಗಲಿ ಶಾಸಕರಾಗಲಿ ಜಾತಿ ಹೆಸರಿನಲ್ಲಿ ರಾಜಕಾರಣ ಮಾಡಿದವರು ಯಶಸ್ಸು ಗಳಿಸಲಿಲ್ಲ, ತುಂಬಾ ಕೆಳಹಂತದಿಂದ ರಾಜಕೀಯಕ್ಕೆ ತಂದವರು ಮಾಲೂರು ತಾಲ್ಲೂಕಿನವರೆ. ಸಣ್ಣ ಸಣ್ಣ ಸಮುದಾಯಗಳು ಮತ್ತು ಸವಿತಾ ಸಮಾಜವು ಸಹ ನನ್ನ ಪರವಾಗಿ ಇದ್ದು ಸವಿತಾ ಸಮಾಜದ ಭವನದ ಮೇಲೆ ನನ್ನ ಸ್ವಂತ ಹಣದಿಂದ ಕಟ್ಟಡ ನಿರ್ಮಿಸಿಕೊಡುತ್ತೇನೆ ಎಂದರು.

ನಾನು ಮೂಲತಃ ಕಾಂಗ್ರೆಸ್ ಪಕ್ಷ ಪಕ್ಷವನ್ನು ಬಿಟ್ಟು ಜೆಡಿಎಸ್ ಅಭ್ಯರ್ಥಿ ಗೆ ಚುನಾವಣೆ ಮಾಡಿದೆ ಅರ್ಹತೆ ಇದ್ದಿದ್ರೆ ಅವಕಾಶ ಸಿಗುತ್ತಿತ್ತು ಹೊರಗಿನಿಂದ ಬಂದವರನ್ನ ಶಾಸಕರನ್ನ ಮಾಡೋದು ಬೇಡ ಸ್ಥಳೀಯರೆ ಶಾಸಕರಾಗಲಿ ಎಂದು ಹೇಳಿ ಈಗ ಮಾನ ಮರ್ಯಾದೆ ಬಿಟ್ಟು ಹೊರಗಿನವರಿಗೆ ಮಣೆ ಹಾಕುತ್ತಿದ್ದಿಯ ಯಾವುದೇ ಜಾತಿಯವರಾಗಲಿ ಮಾಲೂರಿನವರು ಶಾಸಕರಾಗಲಿ ನೀವು ಯಾರ ಪರವಾಗಿ ಇದ್ದಿರಾ ನಾಚಿಕೆ ಆಗಲ್ವ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇನ್ನೂ ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲಿ ಯಾವ ರೀತಿಯಲ್ಲಿ ಗೆದ್ದೆ ಎಂಬುದು ತಾಲ್ಲೂಕಿನ ಜನತೆಗೆ ಗೊತ್ತಿದೆ ನೀನು ನನ್ನ ಬಗ್ಗೆ ಮಾತನಾಡಲು ಅರ್ಹತೆ ಇಲ್ಲ ನಿನ್ನಿಂದ ನಮಗೆ ಯಾವುದೇ ಉಪಯೋಗವಾಗಿಲ್ಲ ನಮ್ಮ ಋಣದಲ್ಲಿ ನೀನು ಇದ್ದಿಯ ಕೋಲಾರ ಹಾಲು ಒಕ್ಕೂಟ ಕರ್ನಾಟಕ ರಾಜ್ಯದಲ್ಲಿ ಮೊದಲನೇ ಸ್ಥಾನದಲ್ಲಿದ್ದು ಲಾಭದಾಯಕವಾಗಿ ಬೆಳೆದಿದೆ ಕೆಲವರು ವೈಯಕ್ತಿಕವಾಗಿ ಮಾತನಾಡುತ್ತಿದ್ದಾರೆ ಇವರ ಸ್ವಾರ್ಥಕ್ಕೆ ಯಾರ ಹಿಂದೆ ಬೇಕಾದರೂ ಹೋಗುತ್ತಾರೆ ಎಂದು ಪ್ರಭಾಕರ್ ವಿರುದ್ಧ ಗುಡಿಗಿದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷ ಕೋಮಲ, ಸ್ಥಾಯಿ ಸಮಿತಿ ಅಧ್ಯಕ್ಷ ಎ ರಾಜಪ್ಪ, ಸದಸ್ಯರಾದ ಇಂತಿಯಾಜ್ ಖಾನ್, ಭಾಗ್ಯಲಕ್ಷ್ಮಿ ಮಂಜುನಾಥ್, ಮುಖ್ಯಾ ಧಿಕಾರಿ ಎಬಿ ಪ್ರದೀಪ್ ಕುಮಾರ್, ಕರ್ನಾಟಕ ರಾಜ್ಯ ಸವಿತಾ ಸಮಾಜದ ಕಾರ್ಯಾಧ್ಯಕ್ಷ ಯು ಕೃಷ್ಣಮೂರ್ತಿ ಕಿರಣ್ ಕುಮಾರ್ ರಾಘವೇಂದ್ರ ಇಟಗಿ, ವಕೀಲ ಕೃಷ್ಣಪ್ಪ, ಮುನಿಸ್ವಾಮಪ್ಪ, ರಾಜಣ್ಣ ತಿಪ್ಪಣ್ಣ, ಕೆಪಿಸಿಸಿ ಹಿಂದುಳಿದ ವರ್ಗಗಳ ಉಪಾಧ್ಯಕ್ಷ ಎಸ್ ಮಂಜುನಾಥ್ ಕೋಲಾರ ಜಿಲ್ಲಾ ಸವಿತಾ ಸಮಾಜದ ಗೌರವಾಧ್ಯಕ್ಷ ಎಸ್ ಮಂಜುನಾಥ್ ಕರ್ನಾಟಕ ರಾಜ್ಯ ಕಲಾವಿದರ ಸಂಘದ ಅಧ್ಯಕ್ಷ ಚಂದ್ರಶೇಖರ್ ಕ್ಷೌರಿಕ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ಗೌರವಾಧ್ಯಕ್ಷ ರಾಜು , ಅಧ್ಯಕ್ಷ ಶಂಕರ್, ಕಾರ್ಯಾಧ್ಯಕ್ಷ ಎಂ.ವಿ ಚಲಪತಿ, ಉಪಾಧ್ಯಕ್ಷರಾದ ಹರೀಶ್, ಮಹೇಶ್, ಪ್ರಧಾನ ಕಾರ್ಯದರ್ಶಿ ಎಂ.ಎನ್ ಶ್ರೀನಿವಾಸ್ ಬಾಬು,ಕಾರ್ಯದರ್ಶಿ ಎನ್ ಪ್ರಭು, ಖಜಾಂಚಿ ಎಂ.ವಿ ಮಂಜುನಾಥ್, ಸಂಘಟನಾ ಕಾರ್ಯದರ್ಶಿಗಳಾದ ವಿ ಮಂಜುನಾಥ್, ಎಂ ಎನ್ ಮಂಜುನಾಥ್, ಜಂಟಿ ಕಾರ್ಯದರ್ಶಿಗಳಾದ ಎಂ ರಾಮು, ಎನ್ ಮಧುಸೂದನ್, ಪ್ರಧಾನ ಸಂಚಾಲಕರಾದ ಡಿ ಎಂ ರಾಜು, ಎಂ ಕೆ ಲಿಂಗರಾಜು, ನಿರ್ದೇಶಕ ಎನ್ ಶ್ರೀನಿವಾಸ್, ಎಂವಿ ಮಿಥುನ್, ಲಕ್ಷ್ಮೀನಾರಾಯಣ್, ಕೆ ಮನೋಜ್ ಕುಮಾರ್, ಎಂ ಎನ್ ಪ್ರವೀಣ್, ಎಚ್ ಬಿ ಸುರೇಶ್, ಕೆವಿ ಮಂಜುನಾಥ್, ಎ ವಿ ರಾಮಚಂದ್ರಪ್ಪ, ಸವಿತಾ ಸಮಾಜದ ಪದಾಧಿಕಾರಿಗಳಾದ ಗೌರವಾಧ್ಯಕ್ಷ ವೇಣುಗೋಪಾಲ್, ಅಧ್ಯಕ್ಷ ನಟರಾಜ್, ಪ್ರಧಾನ ಕಾರ್ಯದರ್ಶಿ ಚಲಪತಿ, ಉಪಾಧ್ಯಕ್ಷರಾದ ರಾಮಾಂಜಿ ವೆಂಕಟೇಶ್ ಕಾರ್ಯದರ್ಶಿ ಆರ್ ವೆಂಕಟ ರಾಜ್ , ಕಾರ್ಯಾಧ್ಯಕ್ಷ ಎನ್ ರಮೇಶ್, ಸಹಕಾರದ ರಾಜೇಂದ್ರ ಖಜಾಂಚಿ ವೆಂಕಟಾಚಲಪತಿ, ಜಂಟಿ ಕಾರ್ಯದರ್ಶಿ ಅಂಜನ್ ಇನ್ನಿತರರು ಹಾಜರಿದ್ದರು.

# ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಲು ಸೂಚನೆ

**ಮುಳಬಾಗಿಲು:** ನರಸಿಂಹತೀರ್ಥ, ಎನ್.ವಡ್ಡಹಳ್ಳಿ, ನಂಗಲಿಯಲ್ಲಿ ರಾಷ್ಟ್ರೀಯ ಹೆದ್ದಾರಿ ವತಿಯಿಂದ ನಡೆಯುತ್ತಿರುವ ರಸ್ತೆ ಕಾಮಗಾರಿಗಳು ಆದಷ್ಟು ಬೇಗ ಮುಗಿಸುವಂತೆ ಈಗಾಗಲೇ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಆದೇಶ ಮಾಡಲಾಗಿದೆ ಎಂದು ಶಾಸಕ ಸಮೃದ್ಧಿ ಮಂಜುನಾಥ್ ತಿಳಿಸಿದರು.

ಅವರು ನಗರದ ಹೊರವಲಯದಲ್ಲಿರುವ ರಾಷ್ಟ್ರೀಯ ಹೆದ್ದಾರಿ 75ರ ರಸ್ತೆಯಲ್ಲಿ ಮುಳಬಾಗಿಲು ನಗರಕ್ಕೆ ಹಾದು ಹೋಗುವ ರಸ್ತೆಯಲ್ಲಿ ಅವೈಜ್ಞಾನಿಕ ರೀತಿಯಲ್ಲಿ ನಿರ್ಮಾಣಗೊಂಡಿರುವ ರಸ್ತೆಯನ್ನು ವೀಕ್ಷಣೆ ಮಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಈ ಹಿಂದೆ ಈ ಮಾರ್ಗದ ರಸ್ತೆ ವಾಹನಗಳ ಸಂಚಾರಕ್ಕೆ ಅನುಕೂಲವಾಗಿತ್ತು ಆದರೆ ಕಳೆದ ಎರಡು ವರ್ಷಗಳ ಹಿಂದೆ ಗೊಂದಲಮಯ ರಸ್ತೆ ತಿರುವು ನಿರ್ಮಾಣ ಮಾಡಿದ್ದರಿಂದ ವಾಹನಗಳ ಸಂಚಾರಕ್ಕೆ ಅಡ್ಡಿಯಾಗುವುದರ ಜೊತೆಗೆ ಅಪಘಾತಗಳಿಗೆ ಕಾರಣವಾಗಿತ್ತು ಇದನ್ನು ನಾನು ಗಂಭೀರವಾಗಿ ಪರಿಗಣಿಸಿ ಹಿಂದೆ ಇದ್ದ ರಸ್ತೆಯ ಮಾರ್ಗವನ್ನೇ ನಿರ್ಮಿಸುವಂತೆ ಈಗಾಗಲೇ ಗುತ್ತಿಗೆದಾರರಿಗೆ ಸೂಚಿಸಲಾಗಿದ್ದು ಕಾಮಗಾರಿ ಮೂರು ದಿನದಲ್ಲಿ ಪ್ರಾರಂಭವಾಗಲಿದೆ ಎಂದು ತಿಳಿಸಿದರು.

ಇಲ್ಲಿನ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಫ್ಲೈ ಓವರ್ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಅನುದಾನ ಬಿಡುಗಡೆ ಮಾಡಿತ್ತು ಆದರೆ ಕೆಲವು ಬಲಾಢ್ಯರು ವ್ಯಾಪಾರಕ್ಕೆ ಅಡ್ಡಿಯಾಗುತ್ತದೆ ಎಂಬ ನೆಪವೊಡ್ಡಿ ಫ್ಲೈ ಓವರ್ ರದ್ದು ಮಾಡಿದ್ರು ಆದರೆ ಇತ್ತೀಚೆಗೆ ನಾನು ಮತ್ತು ಸಂಸದರಾದ ಮಲ್ಲೇಶ್ ಬಾಬು ದೆಹಲಿಗೆ ಭೇಟಿ ನೀಡಿ ಸಚಿವರ ಜೊತೆ ಚರ್ಚಿಸಿ ಫ್ಲೈ ಓವರ್ ನಿರ್ಮಾಣಕ್ಕೆ ಅನುಮತಿ ಪಡೆದಿದ್ದೇವೆ ಎಂದು ತಿಳಿಸಿದರು ಜೆಡಿಎಸ್ ಪ್ರಧಾನ ಕಾರ್ಯದರ್ಶಿ ರಘುಪತಿ ರೆಡ್ಡಿ, ಜಿ ಪಂ ಮಾಜಿ ಸದಸ್ಯ ಬಿವಿ ಶಾಮೇಗೌಡ, ನಗವಾರ ಸತ್ಯಣ್ಣ, ರಾಜ್ಯ ರೈತ ಸಂಘದ ರಾಜ್ಯ ಮುಖಂಡ ನಾರಾಯಣಗೌಡ, ಗುತ್ತಿಗೆದಾರ ಶಿವಕುಮಾರ್, ನಗರಸಭಾ ಸದಸ್ಯರು ಸೇರಿದಂತೆ ಇತರೆ ಮುಖಂಡರು ಹಾಜರಿದ್ದರು



## ಅಗ್ನಿ ಅವಘಡ: ಗ್ರಾಮಸ್ಥರಲ್ಲಿ ಆತಂಕ

**ಮೈಸೂರು:** ಮೈಸೂರು ಜಿಲ್ಲೆ ನಂಜನಗೂಡು ತಾಲೂಕಿನ ಕತ್ವಾಡಿಪುರ ಗ್ರಾಮದಲ್ಲಿ ಕೆಮಿಕಲ್ ಪದಾರ್ಥಗಳ ಗೋಡೌನ್ ನಲ್ಲಿ ಭಾರೀ ಅಗ್ನಿಅವಘಡ ಸಂಭವಿಸಿದ್ದು ಆತಂಕ ಸೃಷ್ಟಿಸಿದೆ.


ನಂಜನಗೂಡು ನಗರದ ಕೈಗಾರಿಕಾ ಪ್ರದೇಶದಲ್ಲಿರುವ ಕತ್ವಾಡಿಪುರ ಗ್ರಾಮದ ಗ್ಯಾಸ್ ಗೋಡೌನ್ ಬಳಿ ಇರುವ ಕೆಮಿಕಲ್ ಮಿಶ್ರಿತ ಹಳೆ ಪದಾರ್ಥಗಳ ಗೋಡನ್ ನಲ್ಲಿ ಏಕಾಏಕಿ ಭಾರೀ ಪ್ರಮಾಣದ ಬೆಂಕಿ ಕಾಣಿಸಿಕೊಂಡಿದೆ. ಈ ವೇಳೆ ಕತ್ವಾಡಿಪುರ ಗ್ರಾಮಸ್ಥರು ಮನೆ ಬಿಟ್ಟು ರಸ್ತೆಗೆ ಬಂದಿದ್ದಾರೆ.

ಮೈಸೂರು ಮೂಲದ ವ್ಯಕ್ತಿ ಜುಬಲಿಯಂಟ್ ಕಾರ್ಖಾನೆಯಿಂದ ಕೆಮಿಕಲ್ ಮಿಶ್ರಿತ ಹಳೆ ಟ್ಯಾಂಕರ್ ಮತ್ತು ಇತರೆ ಪದಾರ್ಥಗಳನ್ನು ತಂದು ಸಂಗ್ರಹಿಸಿಟ್ಟಿದ್ದು, ಇದಕ್ಕಿದ್ದಂತೆ ಈ ಕೆಮಿಕಲ್ ಮಿಶ್ರಿತ ಗೋಡೌನ್ ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಬೆಂಕಿಯ ಕಾವು ಹೆಚ್ಚಾಗುತ್ತಿದ್ದಂತೆ ಕೆಮಿಕಲ್ ಮಿಶ್ರಿತ ಹಳೆ ಟ್ಯಾಂಕ್ ಬ್ಲಾಸ್ಟ್ ಆಗಿದೆ.

ಹಳೆ ಟ್ಯಾಂಕ್ ಬ್ಲಾಸ್ಟ್ ಆದ ಶಬ್ದಕ್ಕೆ ಹೆದರಿ ಕತ್ವಾಡಿಪುರ ಗ್ರಾಮಸ್ಥರು ಮನೆಯಿಂದ ಹೊರ ಬಂದಿದ್ದಾರೆ. ಇನ್ನು ಸ್ಥಳಕ್ಕೆ ಅಗ್ನಿಶಾಮಕ ಠಾಣೆ ಸಿಬ್ಬಂದಿಗಳು ಬಂದು ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಗ್ರಾಮದ ಒಳಭಾಗದಲ್ಲಿರುವ ಗ್ಯಾಸ್ ಗೋಡನ್ ಕೆಮಿಕಲ್ ಮಿಶ್ರಿತ ಗೋಡೌನ್ ಗಳನ್ನು ಸ್ಥಳಾಂತರ ಮಾಡಲು ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ಮಂಜುನಾಥ್ ಅವಿರೋಧ ಆಯ್ಕೆ

**ಶಿಡ್ಲಘಟ್ಟ:** ತಾಲ್ಲೂಕಿನ ಸಾದಲಿ ಹೋಬಳಿ ಎಸ್. ದೇವಗಾನಹಳ್ಳಿ ಗ್ರಾಮ ಪಂಚಾಯತಿ ಉಪಾಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಎನ್. ಮಂಜುನಾಥ್ ಅವಿರೋಧವಾಗಿ ಆಯ್ಕೆಯಾದರು.



ಗ್ರಾಮ ಪಂಚಾಯತಿ ಸಭಾಂಗಣದಲ್ಲಿ ನಡೆದ ಚುನಾವಣೆ ಯಲ್ಲಿ ಎನ್.ಮಂಜುನಾಥ್ ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧ ಆಯ್ಕೆಯಾಯಿತು.

ಈ ಹಿಂದಿನ ಉಪಾಧ್ಯಕ್ಷ ಗಂಗಾಧರ್ ರಾಜೀನಾಮೆ ನೀಡಿದ್ದರಿಂದ ತೆರವಾದ ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಿತು. ಈ ಸಂದರ್ಭದಲ್ಲಿ ಚುನಾವಣಾಧಿಕಾರಿ ನರೇಂದ್ರ, ಪಿಡಿಒ ಮಹೇಶ್,ಗ್ರಾಮ ಪಂಚಾಯತಿ ಅಧ್ಯಕ್ಷೆ ಅನಸೂಯಮ್ಮ, ಸದಸ್ಯರು ಹಾಗು ಸಿಬ್ಬಂದಿ ಹಾಜರಿದ್ದರು.

## ಪ್ರಕಾಶ್‌ಗೆ ಮೆಡಲ್ ಆಫ್ ಮೆರಿಟ್

**ಶಿಡ್ಲಘಟ್ಟ:** ಭಾರತ್ ಸೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಕಾರ್ಯದರ್ಶಿ ಹಾಗೂ ತಾಲ್ಲೂಕು ಜಂಗಮಕೋಟೆ ಸರ್ಕಾರಿ ಪ್ರೌಢ ಶಾಲೆ ಶಿಕ್ಷಕ ಸಿ.ಬಿ.ಪ್ರಕಾಶ್ ಅವರಿಗೆ ರಾಜ್ಯಮಟ್ಟದ " ಮೆಡಲ್ ಆಫ್ ಮೆರಿಟ್ " ಪ್ರಶಸ್ತಿ ಲಭಿಸಿದೆ.



ಅಂತರರಾಷ್ಟ್ರೀಯ ಸೇವಾ ಸಂಸ್ಥೆಯಾದ ಸ್ಕೌಟ್ಸ್ ಸಂಸ್ಥೆ ಸಂಸ್ಥಾಪಕ ಲಾರ್ಡ್ ಬೆಡನ್ ಪೊವೆಲ್ ಅವರ ಜನ್ಮದಿನಾಚರಣೆ ಅಂಗವಾಗಿ ಬೆಂಗಳೂರಿನಲ್ಲಿ ಈಚೆಗೆ ನಡೆದ ಕಾರ್ಯಕ್ರಮದಲ್ಲಿ ಸೌಟಿಂಗ್‌ನಲ್ಲಿ 20 ವರ್ಷಗಳಿಗೂ ಹೆಚ್ಚಿನ ಅವಧಿಯಲ್ಲಿ ನಿರಂತರ ಸೇವೆ ಸಲ್ಲಿಸುತ್ತಾ ಬಂದಿರುವ ಶಿಕ್ಷಕರಿಗಾಗಿ ರಾಜ್ಯ ಮಟ್ಟದ ಮೆಡಲ್ ಆಫ್ ಮೆರಿಟ್ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮಾಜಿ ಗೃಹ ಸಚಿವರಾದ ಪಿ.ಜಿ.ಆರ್ ಸಿಂಧ್ಯ ಅವರು ಪ್ರಶಸ್ತಿ ಪ್ರದಾನ ಮಾಡಿದರು.ರಾಜ್ಯದಾದ್ಯಂತ ಒಟ್ಟು 17 ಜನರಿಗೆ ಈ ಪ್ರಶಸ್ತಿಯನ್ನು ನೀಡಿದ್ದು ಅವರಲ್ಲಿ ಸಿ.ಬಿ ಪ್ರಕಾಶ್ ಅವರು ಕೂಡ ಒಬ್ಬರಾಗಿದ್ದಾರೆ.

## ತಾಯಿ ಮಹತ್ವದ ಹಾಡು ಬಿಡುಗಡೆ




ಕೆ.ಆರ್.ಪುರ: ಜಗತ್ ಜನನಿ ಅಮ್ಮ ಎಂಬ ಶೀರ್ಷಿಕೆಯ ತಾಯಿ ಮಹತ್ವ ಸಾರುವ ಹಾಡು ಶಿವರಾತ್ರಿ ಹಬ್ಬದ ಪ್ರಯುಕ್ತ ಬಿಡುಗಡೆಗೊಂಡಿತು.

ಮಹದೇವಪುರ ಕ್ಷೇತ್ರದ ಕಟ್ಟಂನಲ್ಲೂರು ಗೇಟ್ ನಲ್ಲಿ ಗಾಯಕ ಗಾನತೇಜ ಹಾಗೂ ಸಮಾಜಿಕ ಹೋರಾಟಗಾರ ಸುಭಾಷ್ ಅವರು ಬಿಡುಗಡೆ ಮಾಡಿ ಅವರು ಮಾತನಾಡಿದರು.

ಮಕ್ಕಳಿಗಾಗಿ ತಾಯಿ ಮಾಡುವ ನಿಸ್ವಾರ್ಥ ಸೇವೆ ತ್ಯಾಗ ಬಹುದೊಡ್ಡದು, ಅಂತಹಾ ತಾಯಿಯರನ್ನು ಬಹಳಷ್ಟು ಮಕ್ಕಳು ಅನಾಥಾಶ್ರಮಗಳಲ್ಲಿ ಬಿಟ್ಟು ಹೋಗುವುದು ನಿಲ್ಲಬೇಕು ಎಂದು ಹಾಡು ಮಾಡಲಾಗಿದೆ ಎಂದರು. ತಾಯಿ ಎಷ್ಟು ನಿಸ್ವಾರ್ಥಿಳು ಎಂಬುದು ಇಂದಿನ ಜಗತ್ತಿಗೆ ಜಾಗೃತಿ ಮೂಡಿಸುವ ಅವಶ್ಯಕತೆ ಇದೆ, ತಾಯಿಯನ್ನು ಪೂಜಿಸಿ ಗೌರವಿಸಿ ಎಂದು ಸುಭಾಷ್ ತಿಳಿಸಿದರು.

# ವಿದ್ಯುತ್ ಚಾಲಿತ ಕಸ ವಿಲೇವಾರಿ ವಾಹನಗಳಿಗೆ ಶಾಸಕರ ಚಾಲನೆ



**ಮುಳಬಾಗಿಲು:** ನಗರಸಭೆ ಅವರಣದಲ್ಲಿ ಸೋಮವಾರ ಮುಖ್ಯಮಂತ್ರಿಗಳ ಸುಮಾರು 58.91 ಲಕ್ಷಗಳ ಅಮೃತ ನಗರೋತ್ಥಾನ ಯೋಜನೆ ಹಂತ–4 ರಲ್ಲಿ ನಿರ್ಮಿಸಲಾಗಿದ್ದ ಪೌರ ಕಾರ್ಮಿಕರಿಗೆ ನೂತನ ಉಪಹಾರ ಗೃಹ, ವಿಶ್ರಾಂತಿ ಕೊಠಡಿ ಹಾಗೂ ವಿದ್ಯುತ್ ಚಾಲಿತ ಕಸ ವಿಲೇವಾರಿ ವಾಹನಗಳಿಗೆ ಶಾಸಕ ಸಮೃದ್ಧಿ ಮಂಜುನಾಥ್ ಚಾಲನೆ ನೀಡಿ

ಮಾತನಾಡಿದ .ಶಾಸಕ ಸಮೃದ್ಧಿ ಮಂಜುನಾಥ್ ನಗರವನ್ನು ಸ್ವಚ್ಛವಾಗಿಡಲು ಹಗಲು ಇರುಳು ಶ್ರಮಿಸುವ ಪೌರಕಾರ್ಮಿಕರಿಗೆ ವಿಶ್ರಾಂತಿ ಪಡೆಯಲು ಸಮಯವೇ ಇರುವುದಿಲ್ಲ ಇದನ್ನು ಮನಗೊಂಡು ಸರ್ಕಾರ ವಿಶ್ರಾಂತಿ ಕೊಟ್ಟಡಿ, ಉಪ ಹಾರ ಗೃಹ ಕಲ್ಪಿಸಲು ಅನುಕೂಲ ಮಾಡಿಕೊಟ್ಟಿರುವುದು ಹೆಮ್ಮೆ ಪಡುವ ವಿಚಾರವಾಗಿದೆ ಎಂದರು.

ಈಗಾಗಲೇ ನಗರದ ಅಭಿವೃದ್ಧಿಯಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ, ನಗರದ ಪ್ರಮುಖ ರಸ್ತೆಗಳು ಅಂದವಾಗಿ ಕಾಣುತ್ತಿವೆ, ಬೇಸಿಗೆಕಾಲ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ 10 ಕೊಳವೆ ಬಾವಿಗಳನ್ನು ಕೊರಸಲಾಗಿದ್ದು. ಎಂಟು ಕೊಳವೆ ಭಾವಿಗಳಲ್ಲಿ ನೀರು ಬರುತ್ತಿದ್ದು ಮುಂದಿನ ದಿನಗಳಲ್ಲಿ ನಗರದ ಎಲ್ಲಾ ವಾರ್ಡುಗಳಿಗೆ ನೀರಿನ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಬೇಕು ಮುಂದಿನ ಏಳು ತಿಂಗಳಲ್ಲಿ ನಗರಸಭೆ ಚುನಾವಣೆ ನಡೆಯಲಿದ್ದು. ಚುನಾವಣೆಗೂ ಮುನ್ನ ಎಲ್ಲಾ ವಾರ್ಡಗಳಲ್ಲಿ ಮತದಾರರ ಪ್ರೀತಿ ವಿಶ್ವಾಸ ಗಳಿಸಿ..ಯಾವುದೇ ಸಮಸ್ಯೆ ಇಲ್ಲದಂತೆ ನೋಡಿಕೊಳ್ಳಬೇಕು. ಪಕ್ಷಬೇಧ ಮರೆತು ನಗರಸಭೆಯ ಅಭಿವೃದ್ಧಿಗಾಗಿ ಎಲ್ಲರೂ ಒಗ್ಗಟ್ಟಾಗಿ ಶ್ರಮಿಸೋಣ ಎಂದರು

ನಗರಸಭೆ ಪೌರಯುಕ್ತ ವಿ. ಶ್ರೀಧರ್, ಅಧ್ಯಕ್ಷೆ ಶಭಾನ ಬೇಗಂ, ಉಪಾಧ್ಯಕ್ಷೆ ಸರಳ, ಮಾಜಿ ಅಧ್ಯಕ್ಷರಾದ ರಿಯಾಜ್ ಅಹಮದ್. ಜೆಡಿಎಸ್ ನ ಕಾರ್ಯದರ್ಶಿ ರಘುಪತಿ ರೆಡ್ಡಿ. ಸದಸ್ಯರಾದ ಸೋಮಣ್ಣ, ನಿರುಪಮ ಜಗನ್ ಮೋಹನ್ ರೆಡ್ಡಿ, ಮುನಿರಾಜು, ಜಬಿವುಲ್ಲಾ, ಗರಡಿ ಶಂಕರ್, ಶಾಹಿದ್ ಭಾಷಾ. ಅಪ್ಪಿ, ಗ್ಯಾಸ್ ರಘು, ಚಂದಾ ಪಾಷ, ವಹೀದ್, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಮಾನುಲ್ಲಾ, ಕಂದಾಯಾಧಿಕಾರಿ ತ್ಯಾಗರಾಜ್, ನಗರಸಭೆಯ ನೋಡಲ್ ಇಂಜಿನಿಯರ್ ಡಾಕ್ಟರ್ ಸುನಿಲ್ ರಾಜ್. ಹಿರಿಯ ಆರೋಗ್ಯ ನಿರೀಕ್ಷಿಕಿ ವಿ.ಪ್ರತಿಭಾ, ವ್ಯವಸ್ಥಾಪಕಿ ಶೈಲಜಾ ಹಾಗೂ ಸಿಬ್ಬಂದಿ . ಸುಬ್ರಮಣಿ. ವಿಜಯಕುಮಾರ್ ಕೆಜಿಎಫ್. ನಾಗರಾಜ್ ಇದ್ದರು.

# ಎಂ.ಇ.ಎಸ್. ದೌರ್ಜನ್ಯ ಖಂಡಿಸಿ ತಹಶೀಲ್ದಾರ್‌ಗೆ ಮನವಿ

**ಮಾಲೂರು:** ಕ.ರಾ.ರ.ಸಾರಿಗೆ ನಿರ್ವಾಹಕ ಮತ್ತು ಕನ್ನಡಿಗರ ಮೇಲೆ ಎಂ.ಇ.ಎಸ್. ಶಿವಸೇನೆಯ ಗೂಂಡಾಗಳ ದೌರ್ಜನ್ಯವನ್ನು ಖಂಡಿಸಿ ಕರವೇ ಪ್ರವೀಣ್ ಕುಮಾರ್ ಶೆಟ್ಟಿ ಬಣ ತಾಲ್ಲೂಕು ಅಧ್ಯಕ್ಷ ಶಿವಾರ ನಾರಾಯಣಸ್ವಾಮಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಎಂ. ವಿ.ರೂಪ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ಬಸ್ ನಿಲ್ದಾಣದ ಡಾ.ಬಿ.ಆರ್. ಅಂಬೇಡ್ಕರ್ ಉದ್ಯಾನವನದಲ್ಲಿ ಅಂಬೇಡ್ಕರ್ ಪ್ರತಿಮೆ ಮುಂಭಾಗದಲ್ಲಿ ಜಮಾಯಿಸಿದ ಕಾರ್ಯಕರ್ತರು ಮಾರಿಕಾಂಬಾ ವೃತ್ತದಲ್ಲಿ ಮಹಾರಾಷ್ಟ್ರದ ಶಿವಸೇನೆ, ಎಂ.ಇ.ಎಸ್. ಪುಂಡಾ ಗುಂಡಾಗಳ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಬಸ್ ನಿರ್ವಾಹಕ ಮಹಾದೇವಪ್ಪ ಹುಕೇರಿ ಎಂಬ ನಿರ್ವಾಹಕನಿಗೆ ಕರ್ತವ್ಯದಲ್ಲಿದ್ದಾಗ ಕ.ರಾ. ರ.ಸಾ ಸಂಸ್ಥೆ ಬಸ್‌ನಲ್ಲಿ ಕನ್ನಡದಲ್ಲಿ ಮಾತನಾಡಿ, ಆಧಾರ್ ಕಾರ್ಡ್‌ನ್ನು ಮಹಿಳೆಯ ಬಳಿ ಕೇಳಿದಾಗ ಪಕ್ಕದಲ್ಲೆ ಕುಳಿತಿದ್ದ ಎಂ.ಇ.ಎಸ್.ನ ಗೂಂಡ ಕನ್ನಡದಲ್ಲಿ ಮಾತನಾಡದೇ ಮರಾಠಿಭಾಷೆಯಲ್ಲಿ ಮಾತನಾಡಲು ತಾಕೀತು ಮಾಡಿದ್ದು, ಅದನ್ನು ನಿರ್ವಾಹಕನು ವಿರೋಧಿಸಿದಾಗ ಈ ನಿರ್ವಾಹಕನ ಮೇಲೆ ಹಿಗ್ಗಾ–ಮುಗ್ಗಾ ಥಳಿಸಿ ಅವಾಚ್ಯ ಶಬ್ದಗಳಿಂದ ನಿಂದಿಸಲಾಗಿದೆ. ತನ್ನ ಗ್ರಾಮ ಹತ್ತಿರ ಬಂದಾಗ ನಿರ್ವಾಹಕನನು ಬಸ್‌ನಿಂದ ಕೆಳಗೆ ಎಳೆದು ಎಂ.ಇ.ಎಸ್ ಪುಂಡರು ಪುಂಡಾಟಿಕೆಯನ್ನು ನಡೆಸಿರುತ್ತಾರೆ.ತಕ್ಷಣ ನಿರ್ವಾಹಕ ಮತ್ತು ಚಾಲಕರು ಸ್ಥಳೀಯ ಪೊಲೀಸ್ ಠಾಣೆಗೆ ದೂರು ನೀಡಿರುತ್ತಾರೆ. ಇದಕ್ಕೆ ಪ್ರತಿ ದೂರಾಗಿ ಕಂಡಕ್ಟರ್ ಮಹದೇವಪ್ಪ ಮೇಲೆ ಸುಳ್ಳು ದೂರನ್ನು ದಾಖಲಿಸಿದ್ದು. ಶಿವಸೇನೆ ಮತ್ತು ಎಂ.ಇ.ಎಸ್. ಗೂಂಡಾಗಳು ಕನ್ನಡಿಗರ ಮೇಲೆ ದೌರ್ಜನ್ಯವನ್ನು ಪದೇ ಪದೇ ಇದೇ ರೀತಿ ನಡೆಸಿದರೆ ಅವರ ಸಂಘಟನೆಯನ್ನು ನಿಷೇದಿಸಿ ರಾಜ್ಯದಿಂದ ಗಡಿಪಾರು ಮಾಡಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಕುಮಾರ್ ಶೆಟ್ಟಿ ಬಣದ ಕಾರ್ಯಕರ್ತರು ಕರ್ನಾಟಕ ಸರ್ಕಾರವನ್ನು ಒತ್ತಾಯಿಸಿ ಮನವಿ ಸಲ್ಲಿಸಿದರು

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಚಂಬೆರಾಜೇಶ್, ಎ.ಎನ್.ದಯಾನಂದ್, ಮಹಿಳಾ ಅಧ್ಯಕ್ಷೆ ದ್ರಾಕ್ಷಾಹಿಣಿ, ಮಷಿಗಂಡನ್, ಬೈರತ್ನಹಳ್ಳಿ ನಾರಾಯಣಸ್ವಾಮಿ, ಮಿಥುನ್,ಪೂಜಾರಿ, ಗೌರೀಶ್, ಸಿ.ಡಿ.ನಾಗರಾಜ್, ಸಿ.ವಿ.ಚಲಪತಿ, ಮಂಜುನಾಥ್, ಶಿವಸರ ನಾಗರಾಜ್, ಅಶ್ವಥ್, ಕೃಷ್ಣಪ್ಪ, ರಾಮಕೃಷ್ಣಪ್ಪ, ಕಿರಣ್, ಸುಧಾಕರ್, ರಮೇಶ್, ಶಿವು ಸೇರಿದಂತೆ ಕಾರ್ಯಕರ್ತರು ಹಾಜರಿದ್ದರು.




# ಮಾರ್ಚ್ ಮೊದಲ ವಾರದಲ್ಲಿ ನವಲಿ ಅಣೆಕಟ್ಟು ನಿರ್ಮಾಣದ ಬಗ್ಗೆ ಚರ್ಚೆ

**ಬೆಂಗಳೂರು:** “ಕೇಂದ್ರ ಜಲಶಕ್ತಿ ಸಚಿವರನ್ನು ಭೇಟಿ ಮಾಡಿ 11 ಸಾವಿರ ಕೋಟಿ ಮೊತ್ತದ ರಾಜ್ಯದ ವಿವಿಧ ನೀರಾವರಿ ಯೋಜನೆಗಳ ಜತೆಗೆ ಮೇಕೆದಾಟು ಯೋಜನೆ ವಿಚಾರದಲ್ಲಿ ಕೇಂದ್ರ ಸರ್ಕಾರದ ನಿಲುವು ಸ್ಪಷ್ಟಪಡಿಸುವಂತೆ ಕೇಂದ್ರ ಜಲಶಕ್ತಿ ಸಚಿವರಿಗೆ ಪ್ರಸ್ತಾವನೆ ಸಲ್ಲಿಸಿದ್ದೇವೆ” ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸದಾಶಿವನಗರ ನಿವಾಸದಲ್ಲಿ ಮಾಧ್ಯಮಗೋಷ್ಠಿ ಉದ್ದೇಶಿಸಿ ಶಿವಕುಮಾರ್ ಅವರು ಮಾತನಾಡಿದ ಅವರು, ಈ ಸಂದರ್ಭದಲ್ಲಿ ಜಲಸಂಪನ್ಮೂಲ ಇಲಾಖೆ ಅಪರ ಮುಖ್ಯಕಾರ್ಯದರ್ಶಿ ಗೌರವ್ ಗುಪ್ತಾ, ಬಿಎಂಆರ್ ಡಿಎ ಆಯುಕ್ತರಾದ ರಾಜೇಂದ್ರ ಚೋಳನ್ ಅವರು ಉಪಸ್ಥಿತರಿದ್ದರು.

“ರಾಜಸ್ಥಾನದ ಉದಯಪುರದಲ್ಲಿ ಕೇಂದ್ರ ಜಲಶಕ್ತಿ ಸಚಿವಾಲಯದಿಂದ ಆಯೋಜಿಸಲಾಗಿದ್ದ ಸಮ್ಮೇಳನದಲ್ಲಿ ವಿವಿಧ ರಾಜ್ಯಗಳ 34 ಜಲಸಂಪನ್ಮೂಲ ಸಚಿವರು, 4–5 ಮುಖ್ಯಮಂತ್ರಿಗಳು, ಕೆಲವು ರಾಜ್ಯಗಳ ಉಪಮುಖ್ಯಮಂತ್ರಿಗಳು ಭಾಗವಹಿಸಿದ್ದರು. ನಮ್ಮ ರಾಜ್ಯದಿಂದ ನಾನು ಹಾಗೂ ನಮ್ಮ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಭಾಗವಹಿಸಿದ್ದೆವು. ನಮ್ಮ ರಾಜ್ಯದ ನೀರಾವರಿ ಯೋಜನೆಗಳ ವಿಚಾರವನ್ನು ನಾನು ಪ್ರಸ್ತಾಪ ಮಾಡಿದ್ದೆ. ಈ ವಿಚಾರವಾಗಿ ಜಲಶಕ್ತಿ ಸಚಿವರ ಬಳಿಯೂ ವೈಯಕ್ತಿಕವಾಗಿ ಈ ವಿಚಾರ ಪ್ರಸ್ತಾಪಿಸಿದ್ದೆವು. ನಂತರ ಕೇಂದ್ರ ಜಲಶಕ್ತಿ ಸಚಿವರು ನಿನ್ನೆ ಸಭೆ ಮಾಡಲು ಸಮಯ ನೀಡಿದ್ದರು. ಕೇಂದ್ರ ಜಲಶಕ್ತಿ ಸಚಿವಾಲಯ ಹಾಗೂ ರಾಜ್ಯದ ಎಲ್ಲಾ ಅಧಿಕಾರಿಗಳ ಸಭೆ ಮಾಡಿದೆವು” ಎಂದು ತಿಳಿಸಿದರು.

“ಈ ಯೋಜನೆ ವಿಚಾರವಾಗಿ ಕೇಂದ್ರ ಸರ್ಕಾರದ ನಿಲುವೇನು ಎಂದು ತಿಳಿಸುವಂತೆ ಕೇಳಿದ್ದೇವೆ. ಈ ವಿಚಾರದಲ್ಲಿ ಸಮಯವ್ಯರ್ಥ ಮಾಡುವುದು ಬೇಡ. ಈ ಯೋಜನೆ ಮಾಡಲು ನೀವು ಬದ್ಧರಾಗಿದ್ದೀರಾ ಅಥವಾ ಇಲ್ಲವೇ? ಕೇಂದ್ರ ಜಲಶಕ್ತಿ ಸಚಿವಾಲಯ ನ್ಯಾಯದ ಸ್ಥಾನದಲ್ಲಿ ಕೂತಿದ್ದು, ಈ ಯೋಜನೆ ಬಗ್ಗೆ ನಿಲುವೇನು ಎಂಬುದನ್ನು ಸ್ಪಷ್ಟಪಡಿಸುವಂತೆ ಕೇಳಿದ್ದೇವೆ. ಈ ಯೋಜನೆಯಿಂದ ಎರಡೂ ರಾಜ್ಯಗಳಿಗೆ ಉಪಯೋಗವಾಗಬೇಕು. ಇನ್ನು ಪೆನ್ನಾರ್ ನದಿ ವಿಚಾರವಾಗಿ ಕರ್ನಾಟಕ ಹಾಗೂ ತಮಿಳುನಾಡು ನಡುವೆ ತಿಕ್ಕಾಟವಿದ್ದು, ಸಂಧಾನದ ಮೂಲಕ ಈ ಸಮಸ್ಯೆ ಬಗೆಹರಿಸಿಕೊಳ್ಳಬಹುದೇ ಎಂದು ಕೇಳಿದ್ದೇವೆ. ಕಳೆದ ವರ್ಷ 300 ಟಿಎಂಸಿ, ಅದಕ್ಕೂ ಹಿಂದಿನ ವರ್ಷ 400 ಟಿಎಂಸಿ ನೀರು ಸಮುದ್ರಕ್ಕೆ ಸೇರಿದೆ. ಇದನ್ನು ನಾವು ಬಳಸಿಕೊಳ್ಳಬೇಕು” ಎಂದು ತಿಳಿಸಿದರು.

“ಈ ಮಧ್ಯೆ ತುಂಗಭದ್ರಾ ಅಣೆಕಟ್ಟಿನಲ್ಲಿ ಹೂಳು ತುಂಬಿಕೊಂಡಿರುವ ಹಿನ್ನೆಲೆಯಲ್ಲಿ ಸುಮಾರು 30 ಟಿಎಂಸಿ ನೀರು ನಷ್ಟವಾಗುತ್ತಿದೆ. ಹೀಗಾಗಿ ನವಲಿ ಬಳಿ ಸಮಾನಾಂತರ ಅಣೆಕಟ್ಟು ನಿರ್ಮಾಣ ಮಾಡುವ ಯೋಜನೆ ಇದೆ. ಈ ಹಿನ್ನೆಲೆಯಲ್ಲಿ ಆಂಧ್ರಪ್ರದೇಶ ಹಾಗೂ ತೆಲಂಗಾಣ ಸಚಿವರು ಹಾಗೂ ಅಧಿಕಾರಿಗಳ ಜತೆ ಪ್ರತ್ಯೇಕ ಸಭೆ ಮಾಡಲಾಯಿತು. ಅದನ್ನು ಕೇಂದ್ರ ಸಚಿವರ ಗಮನಕ್ಕೂ ತರಲಾಯಿತು. ಈ ಬಗ್ಗೆ ನೀವೆ ಕೂತು ಚರ್ಚೆ ಮಾಡಿ. ನೀವು ಒಮ್ಮತಕ್ಕೆ ಬಂದರೆ ನಮಗೂ ಒಪ್ಪಿಗೆ ಇದೆ ಎಂದು ಕೇಂದ್ರ ಸಚಿವರು ತಿಳಿಸಿದರು. ಈ ವಿಚಾರವಾಗಿ ಆಂಧ್ರ ಪ್ರದೇಶ ಸಿಎಂ ಚಂದ್ರಬಾಬು ನಾಯ್ಡು ಅವರಿಗೆ ಪ್ರತ್ಯೇಕವಾಗಿ ಕರೆ ಮಾಡಿ ಮಾರ್ಚ್ ಮೊದಲ ವಾರದಲ್ಲಿ ಚರ್ಚೆ ಮಾಡಲು ಸಮಯಾವಕಾಶ ನೀಡಿ ಎಂದು ಕೇಳಿದ್ದೇವೆ. ಈ ಯೋಜನೆಗೆ ನಮ್ಮ ತಾಂತ್ರಿಕ ಸಲಹಾ ಸಮಿತಿಯು ಪರ್ಯಾಯ ಮಾರ್ಗವನ್ನು ಸೂಚಿಸಿದ್ದು, ಇದನ್ನು ಉಭಯ ರಾಜ್ಯಗಳ ಜತೆ ಚರ್ಚೆ ಮಾಡದೇ ಮಾಧ್ಯಮಗಳ ಮುಂದೆ ಹೇಳಲು ಸಾಧ್ಯವಿಲ್ಲ” ಎಂದು ತಿಳಿಸಿದರು.

“ಈ ಹಿಂದೆ ಹೂಳೆತ್ತಲು ಅನೇಕ ಪ್ರಸ್ತಾವನೆಗಳು ಬಂದಿದ್ದವು. 24–30 ಟಿಎಂಸಿ ನೀರು ಸಂಗ್ರಹವಾಗುವಷ್ಟು ಹೂಳನ್ನು ಎತ್ತಿ ಎಲ್ಲಿ ಹಾಕಬೇಕು? ಇದಕ್ಕೆ ತಗಲುವ ವೆಚ್ಚ ಗಮನಿಸಿ ತಾಂತ್ರಿಕ ಸಮಿತಿ ಈ ಪ್ರಸ್ತಾವನೆ ನೀಡಿದೆ. ಆಂಧ್ರ ಪ್ರದೇಶ ಸಿಎಂ ಮಾರ್ಚ್ ಮೊದಲ ವಾರದಲ್ಲಿ ಸಭೆಗೆ ಕಾಲಾವಕಾಶ ನೀಡಲಿದ್ದು, ಅವರು ಸಮಯ ನಿಗದಿ ಮಾಡಿದ ಬಳಿಕ ನಾನು ಹಾಗೂ ಇಡೀ ತಂಡ ಆಂಧ್ರಪ್ರದೇಶಕ್ಕೆ ಭೇಟಿ ನೀಡಲಿದ್ದೇವೆ” ಎಂದರು.

ಮಾ.18ಕ್ಕೆ ಮತ್ತೊಮ್ಮೆ ಜಲಶಕ್ತಿ ಸಚಿವರೊಂದಿಗೆ ಸಭೆ

“ಉಳಿದಂತೆ ನದಿ ಜೋಡಣೆ ವಿಚಾರವಾಗಿ ಕೇಂದ್ರ ಸರ್ಕಾರದ ಮುಂದೆ ಅನೇಕ ಪ್ರಸ್ತಾಪಗಳಿದ್ದು, ನಾವು ನಮ್ಮ ಪಾಲಿನ ನೀರಿನ ಬಗ್ಗೆ ಪ್ರಸ್ತಾವನೆ ಮಾಡಿದ್ದೇವೆ. ಇದರ ಜತೆಗೆ ರಾಜ್ಯದ ಅಣೆಕಟ್ಟುಗಳ ಗೇಟ್ ಬದಲಾವಣೆ ಹಾಗೂ ಸುರಕ್ಷತಾ ಕ್ರಮಗಳ ಬಗ್ಗೆ ತಾಂತ್ರಿಕ ಸಮಿತಿ ನೇಮಿಸಲಾಗಿದೆ. ಇನ್ನು ಕಾಲುವೆಗಳ ನೀರು ಕೊನೆ ಭಾಗದವರೆಗೂ ತಲುಪಲು ಅಗತ್ಯ ಕ್ರಮ ಕೈಗೊಳ್ಳಲು ಅತ್ಯಾಧುನಿಕ ತಂತ್ರಜ್ಞಾನ ಒಳಗೊಂಡ ಯೋಜನೆ ರೂಪಿಸಲಾಗಿದೆ.

ಮಾರ್ಚ್ 18ರ ಒಳಗಾಗಿ ಮತ್ತೆ ಭೇಟಿ ಮಾಡಿ ಸಭೆ ನಡೆಸಲು ಕೇಂದ್ರ ಸಚಿವರ ಬಳಿ ಕಾಲಾವಕಾಶ ಪಡೆಯಲಾಗಿದೆ. ಜಲಶಕ್ತಿ ಇಲಾಖೆ ರಾಜ್ಯ ಸಚಿವರಾದ ಸೋಮಣ್ಣ ಅವರ ಅಭಿಪ್ರಾಯವನ್ನು ಪಡೆದು ನಾವು ಸಭೆ ಮಾಡಿದ್ದೇವೆ. ನಮ್ಮ ರಾಜ್ಯದ ಹಿತಕ್ಕೆ ಪರವಾಗಿ ಅವರು ಚರ್ಚೆ ಮಾಡಿದ್ದಾರೆ” ಎಂದರು. ಕೃಷ್ಣಾ ಮೇಲ್ದಂಡೆ ಯೋಜನೆ, ಆಲಮಟ್ಟಿ ಅಣೆಕಟ್ಟಿನ ವಿಚಾರವಾಗಿ ಕೇಂದ್ರ ಸರ್ಕಾರ ಗೆಜೆಟ್ ನೋಟಿಫಿಕೇಶನ್ ಹೊರಡಿಸುವುದು ಬಾಕಿ ಇದ್ದು, ಆದಷ್ಟು ಬೇಗ ಅಧಿಸೂಚನೆ ಹೊರಡಿಸಬೇಕು. ನಮ್ಮ ಪಾಲಿನ ನೀರನ್ನು ನಾವು ಬಳಸಿಕೊಳ್ಳಬೇಕು. ಇದಕ್ಕಾಗಿ ಅಗತ್ಯ ಅನುಮತಿ ನೀಡಬೇಕು. ನಮ್ಮ ಪಾಲಿನ ನೀರನ್ನು ಬಳಸಿಕೊಳ್ಳಲು ನಾವು ಕಾಲುವೆ ನಿರ್ಮಾಣ ಸೇರಿದಂತೆ ಅನೇಕ ಕಾಮಗಾರಿ ಆರಂಭಿಸಿದ್ದೇವೆ. ಭೂಸ್ವಾಧೀನ ಪ್ರಕ್ರಿಯೆಗೆ ಮುಖ್ಯಮಂತ್ರಿಗಳು ತೀರ್ಮಾನ ಮಾಡಿದ್ದಾರೆ. ಯೋಜನೆ ವೆಚ್ಚ ದಿನೇ ದಿನೆ ಏರಿಕೆಯಾಗುತ್ತದೆ ಎಂಬ ಕಾರಣಕ್ಕೆ ಭೂಸ್ವಾಧೀನ ಪ್ರಕ್ರಿಯೆಯನ್ನು ಒಂದೇ ಹಂತದಲ್ಲಿ ಮುಗಿಸಲು ತೀರ್ಮಾನಿಸಿದ್ದೇವೆ” ಎಂದರು.

“ಕಳಸಾ ಬಂಡೂರಿ ಯೋಜನೆಗೆ ಅಗತ್ಯವಿರುವ ಅರಣ್ಯ ಇಲಾಖೆ ಅನುಮತಿ ಬಾಕಿ ಇದೆ. ಈ ಹಿಂದೆ ನಾನು ಹಾಗೂ ಮುಖ್ಯಮಂತ್ರಿಗಳು ಈ ಮಂಡಳಿಯ ನೇತೃತ್ವ ವಹಿಸಿರುವ ಪ್ರಧಾನಮಂತ್ರಿಗಳನ್ನು ಭೇಟಿ ಮಾಡಿ ಪ್ರಸ್ತಾವನೆ ಸಲ್ಲಿಸಿದ್ದೆವು. ಆಗ ಪ್ರಧಾನ ಮಂತ್ರಿಗಳು ಈ ವಿಚಾರವಾಗಿ ತೀರ್ಮಾನ ಮಾಡಲು ಜಲಶಕ್ತಿ ಸಚಿವರಿಗೆ ತಿಳಿಸಿರುವುದಾಗಿ ಹೇಳಿದ್ದರು. ಈ ಹಿನ್ನೆಲೆಯಲ್ಲಿ ನಾವು ಕೇಂದ್ರ ಸಚಿವರ ಮೇಲೆ ಒತ್ತಡ ಹಾಕುತ್ತಿದ್ದೇವೆ. ಈ ಮಧ್ಯೆ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಅವರ ಜತೆಗೂ ಚರ್ಚೆ ಮಾಡಿದ್ದು, ಅವರು ಕೂಡ ಅರಣ್ಯ ಇಲಾಖೆ ಸಚಿವಾಲಯದ ಜತೆ ಚರ್ಚೆ ಮಾಡುವುದಾಗಿ ಹೇಳಿದ್ದಾರೆ” ಎಂದು ಮಾಹಿತಿ ನೀಡಿದರು.

“ಇನ್ನು ಸಣ್ಣ ನೀರಾವರಿ ಇಲಾಖೆಯ ಯೋಜನೆಗೆ ಸಂಬಂಧಿಸಿದಂತೆ ನಮ್ಮ ಸಚಿವರಾದ ಬೋಸರಾಜು ಅವರು ಚರ್ಚೆ ಮಾಡಿದ್ದು, 3 ಸಾವಿರ ಕೋಟಿಯಷ್ಟು ಅನುದಾನ ಕೋರಿದ್ದಾರೆ. ನೀರಾವರಿಗೆ ಹೆಚ್ಚು ಅವಕಾಶವಿರುವ ರಾಜ್ಯಗಳ ಪೈಕಿ ರಾಜಸ್ಥಾನದ ನಂತರ ಕರ್ನಾಟಕವಿದೆ. ನಮ್ಮಲ್ಲಿ ಒಣಭೂಮಿ ಹೆಚ್ಚಾಗಿದ್ದು, ನೀರಾವರಿ ಯೋಜನೆಗಳಿಗೆ ಹೆಚ್ಚಿನ ಅವಕಾಶವಿದೆ. ಕೇಂದ್ರ ಜಲಶಕ್ತಿ ಸಚಿವರು ನಮ್ಮ ಬೇಡಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ನಮ್ಮ ಯೋಜನೆಗಳಿಗೆ ಸಹಕಾರ ನೀಡುವುದಾಗಿ ಭರವಸೆ ನೀಡಿದ್ದಾರೆ” ಎಂದರು.

## ಸಂಸದರಿಗೆ ಪತ್ರ

**“ಇನ್ನು ಇಲಾಖೆವತಿಯಿಂದ ಎಲ್ಲಾ ಸಂಸದರಿಗೆ ಪತ್ರ ಬರೆದು ಅವರ ಕ್ಷೇತ್ರಗಳಿಗೆ ಸಂಬಂಧಿಸಿದ ಹಾಗೂ ರಾಜ್ಯಕ್ಕೆ ಸಂಬಂಧಿಸಿದ ಯೋಜನೆಗಳ ಬಗ್ಗೆ ಮಾಹಿತಿ ನೀಡಲಾಗುವುದು. ಅವರು ಕೂಡ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹಾಕಿ ಈ ಯೋಜನೆಗಳಿಗೆ ಅನುಮತಿ ಪಡೆಯಬಹುದು. ಕೆಲವು ಸಂಸದರು ನಮಗೆ ಈ ವಿಚಾರ ಗೊತ್ತಿಲ್ಲ, ಮಾಹಿತಿ ನೀಡಿಲ್ಲ ಎಂದು ಹೇಳುತ್ತಿರುವ ಹಿನ್ನೆಲೆಯಲ್ಲಿ ಪತ್ರ ಬರೆದು ಮಾಹಿತಿ ನೀಡಲು ಮುಂದಾಗಿದ್ದೇನೆ. ಇನ್ನು ಭದ್ರಾ ಮೇಲ್ದಂಡೆ ಯೋಜನೆಗೆ ಸಂಬಂಧಿಸಿದಂತೆ 5,300 ಕೋಟಿ ಅನುದಾನ ವಿಚಾರವಾಗಿ ಕೇಂದ್ರ ಸಚಿವರು ತಾಂತ್ರಿಕ ಕಾರಣ ನೀಡುತ್ತಿದ್ದರು.**

**ನಾವು ಕೇಂದ್ರ ಸರ್ಕಾರಕ್ಕೆ ಒದಗಿಸಬೇಕಾದ ಎಲ್ಲಾ ದಾಖಲೆ ಒದಗಿಸಿದ್ದು, ಅವರು ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಮಾಡಬೇಕಿದೆ” ಎಂದು ತಿಳಿಸಿದರು.**

# ಚಿನ್ನಹಳ್ಳಿ ಗ್ರಾ.ಪಂ. ವ್ಯಾಪ್ತಿ ಸಡಗರ ಸಂಭ್ರಮದ ಶಿವರಾತ್ರಿ ಹಬ್ಬ

**ಕೊರಟಗೆರೆ:** ತಾಲ್ಲೂಕಿನ ಚಿನ್ನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಗೆದ್ಮೇನಹಳ್ಳಿ ಸುಕದಹಳ್ಳಿ ಗ್ರಾಮಗಳ ನಡುವೆ ಇರುವ ಇತಿಹಾಸ ಪ್ರಸಿದ್ಧ ಈ ಹೊಳೆ ನಂಜುಂಡೇಶ್ವರ ಸ್ವಾಮಿಯ ಸನ್ನಿಧಾನದಲ್ಲಿ ಅದ್ದೂರಿಯಾಗಿ ನಡೆದ ಜಾತ್ರಾ ಮಹೋತ್ಸವ ಪ್ರತಿ ವರ್ಷವೂ ಶಿವರಾತ್ರಿ ಹಬ್ಬದಂದು ನಡೆಯುತ್ತದೆ.

ಈ ಜಾತ್ರೆಯಲ್ಲಿ ಸಾವಿರಾರು ಭಕ್ತಾದಿಗಳು ಶ್ರೀ ಹೊಳೆ ನಂಜುಂಡೇಶ್ವರ ಸ್ವಾಮಿಯ ವಿಶೇಷ ಹೂಗಳಿಂದ ಅಲಂಕಾರ ಗೊಂಡಿರುವ ಶ್ರೀ ನಂಜುಂಡೇಶ್ವರ ಸ್ವಾಮಿಯನ್ನ ಕಣ್ತುಂಬಿ ಕೊಳ್ಳುತ್ತಾ ದರ್ಶನ ಪಡೆದು ಪುನೀತರಾಗುತ್ತಾರೆ.

ಇನ್ನು ಚಿನ್ನಹಳ್ಳಿ ಗ್ರಾಮದ ಜಗದೀಶ್ ಕುಟುಂಬದ ವತಿಯಿಂದ ಪ್ರತಿ ವರ್ಷವೂ ಬರುವ ಭಕ್ತಾದಿಗಳಿಗೆ ಪ್ರಸಾದದ ವ್ಯವಸ್ಥೆಯನ್ನು ಬೆಳಗ್ಗಿನಿಂದ ಸಂಜೆವರೆಗೂ ನೆರವೇರಿಸುತ್ತಾ ಬಂದಿದ್ದಾರೆ.

ಕೇಂದ್ರ ಸಚಿವ ವಿ. ಸೋಮಣ್ಣನವರು ಈ ಹೊಳೆ ನಂಜುಂಡೇಶ್ವರ ಸ್ವಾಮಿಯ ಪರಮ ಭಕ್ತರು ಪ್ರತಿ ವರ್ಷವೂ ಕುಟುಂಬ ಸಮೇತರಾಗಿ ಬಂದು ದೇವರ ದರ್ಶನ ಪಡೆಯುತ್ತಾರೆ ಇಂದು ಕೂಡ ಕೇಂದ್ರ ಸಚಿವ ವಿ. ಸೋಮಣ್ಣನವರ ಧರ್ಮಪತ್ನಿ ಶೈಲಜಾಸೋಮಣ್ಣ ಸನ್ನಿಧಾನಕ್ಕೆ ಭೇಟಿ ನೀಡಿ ಶ್ರೀ ನಂಜುಂಡೇಶ್ವರನ ದರ್ಶನ ಪಡೆದು ಭಕ್ತಾದಿಗಳಿಗೆ ಶಿವರಾತ್ರಿ ಹಬ್ಬದ ಶುಭಾಶಯಗಳನ್ನ ಕೋರಿದರು ಹಾಗೆಯೇ ಅನೇಕ ರಾಜಕೀಯ ವ್ಯಕ್ತಿಗಳು ಗಣ್ಯರು ಮುಖಂಡರು ಸೇರಿದಂತೆ ಕಡುಬಡವನಿಂದ ಸಿರಿವಂತನವರೆಗೆ ಈ ಸ್ವಾಮಿಗೆ ಭಕ್ತಾದಿಗಳಿದ್ದಾರೆ ಎಂದು ದೇವಸ್ಥಾನದ ಪ್ರಧಾನ ಅರ್ಚಕರು ತಿಳಿಸಿದರು

ನಂತರ ಅವರು ಮಾತನಾಡಿ, ಶ್ರೀ ಹೊಳೆ ನಂಜುಂಡೇಶ್ವರ ಸ್ವಾಮಿಯು ಇತಿಹಾಸ ಪ್ರಸಿದ್ಧಿಯನ್ನು ಹೊಂದಿದ್ದು ಇಲ್ಲಿ ಬರುವ ಭಕ್ತಾದಿಗಳು ತಮ್ಮ ಇಷ್ಟಾರ್ಥಗಳನ್ನು ನೆರವೇರಿಸುವಂತೆ ಸ್ವಾಮಿಯಲ್ಲಿ ಕೇಳಿಕೊಳ್ಳುತ್ತಾರೆ ಅವರ ಇಷ್ಟಾರ್ಥಗಳು ನೆರವೇರಿದಂತೆ ಸ್ವಾಮಿಯ ಸನ್ನಿಧಾನಕ್ಕೆ ಬಂದು ಅರಕೆಗಳನ್ನ ತೀರಿಸುತ್ತಾರೆ ಶ್ರೀ ಸ್ವಾಮಿಯ ಸನ್ನಿಧಾನದಲ್ಲಿ ಪ್ರತಿ ಸೋಮವಾರ ನಿರಂತರ ಪ್ರಸಾದ ವ್ಯವಸ್ಥೆಯನ್ನು ಮಾಡುವ ಸಂಕಲ್ಪವನ್ನು ಹೊಂದಿದ್ದೇವೆ ಹಾಗೆಯೇ ಭಕ್ತಾದಿಗಳ ಸಹಕಾರದಿಂದ ದೇವಸ್ಥಾನದ ಆಡಳಿತ ಮಂಡಳಿಯಿಂದ ದೇವಸ್ಥಾನವು ಬಹಳ ಸಮೃದ್ಧಿಯಿಂದ ನಿರ್ಮಾಣವಾಗಿದೆ ಇನ್ನು ಅನೇಕ ಕೆಲಸಗಳು ಆಗಬೇಕು ಇವೆಲ್ಲವೂ ಭಕ್ತಾದಿಗಳ ಸಹಕಾರದಿಂದ ಮುಂದೆ ನಡೆಯುತ್ತದೆ ಎಂದು ಭಾವಿಸುತ್ತಾ ಎಲ್ಲಾ ಭಕ್ತಾದಿಗಳಿಗೂ ಮಹಾಶಿವರಾತ್ರಿ ಹಬ್ಬದ ಶುಭಾಶಯಗಳು ಎಂದು ತಿಳಿಸಿದರು..

ಹೊಳೆ ನಂಜುಂಡೇಶ್ವರ ಸ್ವಾಮಿಯ ಭಕ್ತ ತುಮುಲ್ ನಿರ್ದೇಶಕ ಸಿದ್ದಗಂಗಯ್ಯ ಮಾತನಾಡಿ, ನಾನು ಇದೆ ಕೊರಟಗೆರೆ ತಾಲೂಕಿನ ಚಿನ್ನಹಳ್ಳಿ ಗ್ರಾಮ ಪಂಚಾಯಿತಿ



ವ್ಯಾಪ್ತಿಯ ಸುಂಕದಹಳ್ಳಿ ಗ್ರಾಮದಲ್ಲೇ ಹುಟ್ಟಿ ಬೆಳೆದಿದ್ದು ನಾವು ಚಿಕ್ಕವಯಸ್ಸಿನಿಂದಲೂ ಈ ಹೊಳೆ ನಂಜುಂಡೇಶ್ವರ ಸ್ವಾಮಿಯ ಸನ್ನಿಧಾನದಲ್ಲಿ ಆಡಿ ಬೆಳೆದವರು ನಾವು ಕೂಡ ಇಲ್ಲಿನ ರೈತರು ಕೃಷಿ ಹಾಗೂ ಗೋವುಗಳ ಮೇಲೆ ಅಪಾರ ಪ್ರೀತಿ ನನಗೆ ನಾವು ನೋಡುತ್ತಿದ್ದ ಆಗಿನ ಹಳ್ಳಿಗೂ ಈಗಿನ ಹಳ್ಳಿಗಳಿಗೂ ತುಂಬಾ ಬದಲಾವಣೆ ಆಗಬೇಕಿದೆ ಆದರೆ ದೇವಸ್ಥಾನ ಮಾತ್ರ ಮೊದಲಿಗೂ ಈಗಿರುವ ದೇವಸ್ಥಾನಕ್ಕೂ ತುಂಬಾ ವ್ಯತ್ಯಾಸವಿದೆ ದೇವಸ್ಥಾನದ ಅಭಿವೃದ್ಧಿಯನ್ನು ತುಂಬಾ ಚೆನ್ನಾಗಿ ನಿರ್ವಹಿಸಿದ್ದಾರೆ ಇಲ್ಲಿನ ಆಡಳಿತ ಮಂಡಳಿ ಅಧಿಕಾರಿಗಳು ಗ್ರಾಮಗಳಿಗೆ ಬರುವ ರಸ್ತೆಗಳು ಹಾಗೂ ದೇವಸ್ಥಾನಕ್ಕೆ ಹೋಗುವ ರಸ್ತೆಯು ತುಂಬಾ ಕಿರಿದಾಗಿದೆ ಕ್ಷೇತ್ರದ ಶಾಸಕರು ಹಾಗೂ ಸಚಿವರು ತುಂಬಾ ಒಳ್ಳೆಯ ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿದ್ದಾರೆ ಹಾಗೆಯೇ ಈ ಭಾಗದ ರಸ್ತೆಗಳಿಗೆ ಡಾಬರೀಕರಣ ಆದಷ್ಟು ಬೇಗ ಮಾಡಿ ಜನರಿಗೆ ಓಡಾಡಲು ಅನುಕೂಲ ಮಾಡಿಕೊಡಬೇಕು ಎಂದು ಕೇಳಿಕೊಳ್ಳುತ್ತೇನೆ ಹಾಗೆಯೇ ನಾಡಿನ ಪ್ರತಿಯೊಬ್ಬರಿಗೂ ಮಹಾಶಿವರಾತ್ರಿ ಹಬ್ಬದ ಶುಭಾಶಯಗಳು ತಿಳಿಸುತ್ತೇನೆ ಎಂದರು...

ಇನ್ನು ದೇವಸ್ಥಾನಕ್ಕೆ ಬರುವ ಭಕ್ತಾದಿಗಳಿಗೆ ಯಾವುದೇ ಸಮಸ್ಯೆ ಆಗದಂತೆ ಕೋಳಾಲ ಪೊಲೀಸ್ ಠಾಣೆಯ ಸಬ್ ಇನ್ಸ್ಪೆಕ್ಟರ್ ಯೋಗೇಶ್ ನೇತೃತ್ವದಲ್ಲಿ ಪೊಲೀಸ್ ಸಿಬ್ಬಂದಿಗಳ ನಿಯೋಜನೆ ಮಾಡಲಾಗಿತ್ತು.

ಇದೇ ಸಂದರ್ಭದಲ್ಲಿ ಶ್ರೀ ಹೊಳೆ ನಂಜುಂಡೇಶ್ವರ ಸ್ವಾಮಿ ದೇವಸ್ಥಾನದ ಆಡಳಿತ ಮಂಡಳಿಯ ಅಧ್ಯಕ್ಷರು ಉಪಾಧ್ಯಕ್ಷರು ಸದಸ್ಯರು, ಪ್ರದನಚಕರು ಸೇರಿದಂತೆ ಸಹಸ್ರಾರು ಭಕ್ತಾದಿಗಳು ಹಾಜರಿದ್ದರು...

**ದೇವಸ್ಥಾನದ ಆಡಳಿತ ಮಂಡಳಿಯ ಅಧ್ಯಕ್ಷರು ಮಾತನಾಡಿ, ಶ್ರೀ ಹೊಳೆ ನಂಜುಂಡೇಶ್ವರ ಸ್ವಾಮಿಯ ಸನ್ನಿಧಾನವು ಬಹಳ ಹಳೆಯ ಹಾಗೂ ಮಣ್ಣಿನಿಂದ ಕೂಡಿತ್ತು ಅದನ್ನು ತೆರವುಗೊಳಿಸಿ ಭಕ್ತಾದಿಗಳ ಸಹಕಾರದಿಂದ ಇಂದು ದೊಡ್ಡದಾದ ಬಹಳ ಸುಂದರವಾದ ಕಲ್ಲಿನ ಮಂಟಪದ ದೇವಸ್ಥಾನ ನಿರ್ಮಾಣವಾಗಿದೆ ಈ ಪುಣ್ಯ ಕ್ಷೇತ್ರಕ್ಕೆ ಬರುವ ಭಕ್ತಾದಿಗಳಿಗೆ ಯಾವುದೇ ಸಮಸ್ಯೆ ಆಗದಂತೆ ಶೌಚಾಲಯ ಕುಡಿಯುವ ನೀರು ಪ್ರಸಾದ ವ್ಯವಸ್ಥೆ ಎಲ್ಲವನ್ನು ಕಲ್ಪಿಸಿದ್ದೇವೆ ಇನ್ನು ಈ ದೇವಸ್ಥಾನದ ನಿರಂತರ ಭಕ್ತಾದಿಗಳು ಅವರೇ ಸ್ವಯಂ ಪ್ರೇರಿತರಾಗಿ ಮಜ್ಜಿಗೆ ಪಾನಕ ಹೆಸರುಬೇಳೆ ಸೇರಿದಂತೆ ವಿಶೇಷ ಪ್ರಸಾದವನ್ನು ಕೂಡ ಶಿವರಾತ್ರಿ ಹಬ್ಬದಂದು ಇಲ್ಲಿಗೆ ಬರುವ ಭಕ್ತಾದಿಗಳಿಗೆ ಸ್ವಯಂ ಪ್ರೇರಿತರಾಗಿ ಅವರೇ ಪ್ರಸಾದವನ್ನು ನೀಡುತ್ತಾರೆ ಶ್ರೀ ಹೊಳೆ ನಂಜುಂಡೇಶ್ವರ ಸ್ವಾಮಿಯ ದೇವಸ್ಥಾನದ ಅನೇಕ ಕೆಲಸಗಳು ಆಗಬೇಕಿದೆ ಎಲವೂ ಭಕ್ತಾದಿಗಳ ಸಹಕಾರದಿಂದ ನಡೆಯುತ್ತದೆ ಎಂದು ತಿಳಿಸಿದರು.**

ಹಿರಿಯ ಗುತ್ತಿಗೆದಾರ ಜೆಸಿಪಿ ರಾಜಣ್ಣ ಮಾತನಾಡುತ್ತಾ ಇದು ಸರ್ಕಾರದ ಪ್ರಶ್ನೆ ಅಲ್ಲ ಗುತ್ತಿಗೆದಾರರ ಅಳಿವು ಉಳಿವಿನ ಪ್ರಶ್ನೆ . ಗುತ್ತಿಗೆದಾರರು ಕಾಮಗಾರಿಗಳನ್ನು ಮುಗಿಸಿದ್ದರು ಸಹ ಹಣ ಬಿಡುಗಡೆ ಆಗದಿರುವುದು ವಿಪರ್ಯಾಸ. ಸಾಲ ಶೂಲ ಮಾಡಿಕೊಂಡು ಎಷ್ಟು ಅಂತ ಕಾಮಗಾರಿಗಳನ್ನು ಮಾಡಲಾಗುತ್ತದೆ, ಕೂಡಲೇ ಇಲ್ಲಿನ ಶಾಸಕರಾದ ರಂಗನಾಥ್ ಅವರು ಉಪಮುಖ್ಯಮಂತ್ರಿ ಹಾಗೂ ಮುಖ್ಯಮಂತ್ರಿ ಮಂತ್ರಿಗಳು ಗುತ್ತಿಗೆದಾರರ ಸಂಕಷ್ಟವನ್ನು ಅರಿತು ಕೂಡಲೇ ಬಾಕಿ ಮೊತ್ತವನ್ನು ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು.

ಗುತ್ತಿಗೆದಾರರ ಹಾಗೂ ತಾ.ಪಂ. ಮಾಜಿ ಸದಸ್ಯ ಎಸ್.ಆರ್. ಚಿಕ್ಕಣ್ಣ ಮಾತನಾಡಿ ಇವತ್ತಿನ ಸ್ಥಿತಿಯಲ್ಲಿ ಸರ್ಕಾರ ಕೂಡಲೇ ಹಣ ಬಿಡುಗಡೆ ಮಾಡಬೇಕು ಇಲ್ಲದಿದ್ದರೆ ನಮಗೆಲ್ಲರಿಗೂ ದಯಾಮರಣವನ್ನು ನೀಡಲಿ ನಾವೆಲ್ಲರೂ ಪರಿವಾರ ಸಮೇತ ಆತ್ಮಹತ್ಯೆಯನ್ನು ಮಾಡಿಕೊಳ್ಳುತ್ತೇವೆ ಎಂದು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಗುತ್ತಿಗೆದಾರರಾದ ಎಸ್.ಆರ್. ಚಿಕ್ಕಣ್ಣ, ಕೃಷ್ಣೆಗೌಡ, ರುಕುಮಾಂದ, ನಾಗರಾಜು, ಮಂಜಯ್ಯ, ಶಿವಣ್ಣ ,ಲಕ್ಷ್ಮಿಕಾಂತ , ಪುಟ್ಟಣ್ಣ ,ಶ್ರೀಕಂಠಯ್ಯ ಮುಂತಾದ ಗುತ್ತಿಗೆದಾರರು ಉಪಸ್ಥಿತರಿದ್ದರು.

## ನಿರ್ವಾಹಕನ ಮೇಲೆ ಹಲ್ಲೆ, ಕರವೇ ಪ್ರತಿಭಟನೆ



**ಯಳಂದೂರು:** ಬೆಳಗಾವಿಯಲ್ಲಿ ಈಚೆಗೆ ಕೆಎಸ್ಸಾರ್ಟಿಸಿ ಬಸ್ ನಿರ್ವಾಹಕನಿಗೆ ಮರಾಠಿ ಭಾಷೆ ಬರುತ್ತಿಲ್ಲ ಎಂಬ ನೆಪವೊಡ್ಡಿ ಆತನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಲಾಗಿದೆ ಜೊತೆಗೆ ಈತನ ಮೇಲೆ ಪೋಕ್ಸೋ ಕಾಯ್ದೆಯಡಿಯಲ್ಲಿ ಸುಳ್ಳು ಪ್ರಕರಣವನ್ನು ದಾಖಲಿಸಿರುವುದನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್‌ಕುಮಾರ್ ಶೆಟ್ಟಿ ಬಣ) ಕಾರ್ಯಕರ್ತರು ಪಟ್ಟಣದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಕರವೇ ಜಿಲ್ಲಾ ಉಪಾಧ್ಯಕ್ಷ ವೈ.ಕೆ. ಮೋಳೆ ನಾಗರಾಜು ಮಾತನಾಡಿ, ಮರಾಠಿಗರು ಕನ್ನಡಿಗರ ಮೇಲೆ ನಿರಂತರವಾಗಿ ದೌರ್ಜನ್ಯ ನಡೆಸುತ್ತಿದ್ದಾರೆ. ಭಾಷೆಯ ವಿಚಾರದಲ್ಲಿ ನಮ್ಮ ಮೇಲೆ ಆಗಾಗ ಇವರು ಕಿಡಿ ಕಾರುತ್ತೇಲೇ ಇರುತ್ತಾರೆ. ನಾವು ಸ್ವಾಭಿಮಾನಿಗಳು ಆದರೆ ನಮ್ಮ ನಾಡು, ಭಾಷೆ, ಸಂಸ್ಕೃತಿಯ ಬಗ್ಗೆ ಅವಹೇಳನ ಮಾಡಿದರೆ ಕೈ ಕಟ್ಟಿ ಕೂರುವುದಿಲ್ಲ. ಈಚೆಗೆ ಮರಾಠಿ ಭಾಷೆ ಬರಲ್ಲ ಎಂಬ ಕಾರಣಕ್ಕಾಗಿ ಕೆಎಸ್ಸಾರ್ಟಿಸಿ ಬಸ್ ನಿರ್ವಾಹಕನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಲಾಗಿದೆ. ಇದು ಅಕ್ಷಮ್ಯ ಅಪರಾಧವಾಗಿದೆ. ಇದರೊಂದಿಗೆ ಈತನ ವಿರುದ್ಧ ಪೊಲೀಸರು ಪೋಕ್ಸೋ ಕಾಯ್ದೆಯಡಿಯಲ್ಲಿ ಸುಳ್ಳು ಪ್ರಕರಣವನ್ನು ದಾಖಲಿಸಿದ್ದಾರೆ. ನಿರ್ವಾಹಕನ ಮೇಲೆ ಹಲ್ಲೆ ಮಾಡಿದವರನ್ನು ಬಂಧಿಸಿ ಕೂಡಲೇ ಕಾನೂನು ಕ್ರಮ ವಹಿಸಬೇಕು. ಈತನ ವಿರುದ್ಧ ದಾಖಲಾಗಿರುವ ಸುಳ್ಳು ದೂರನ್ನು ವಾಪಸ್ಸು ಪಡೆಯಬೇಕು. ಇಂತಹ ಘಟನೆಗಳು ಮತ್ತೆ ಮರುಕಳಿಸಬಾರದು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ನಮ್ಮ ಪ್ರತಿಭಟನೆಯನ್ನು ಮತ್ತಷ್ಟು ತೀವ್ರಗೊಳಿಸುವುದಾಗಿ ಎಚ್ಚರಿಕೆ ನೀಡಿದರು.

ನಂತರ ಮನವಿ ಪತ್ರವನ್ನು ತಹಶೀಲ್ದಾರ್ ಜಯಪ್ರಕಾಶ್ ರವರಿಗೆ ನೀಡಲಾಯಿತು. ಈ ಸಂದರ್ಭದಲ್ಲಿ ದಸಂಸ ಜಿಲ್ಲಾ ಸಂಚಾಲಕ ಸಿ. ರಾಜಣ್ಣ, ಪಪಂ ಸದಸ್ಯ ಬಿ. ರವಿ, ನಾಮ ನಿರ್ದೇಶಿತ ಸದಸ್ಯ ಲಿಂಗರಾಜಮೂರ್ತಿ, ಮಾಜಿ ಉಪಾಧ್ಯಕ್ಷ ಭೀಮಪ್ಪ, ಕೃಷಿಕ ಸಮಾಜದ ಅಧ್ಯಕ್ಷ ಗೌಡಹಳ್ಳಿ ರವಿ, ಕುಮಾರ, ವೆಂಕಟೇಶ್, ಶಿವನಂಜಶೆಟ್ಟಿ, ಮಲ್ಲು, ಕೊಮಾರನಪುರ ಪುಟ್ಟರಾಜು, ಅರುಣ, ಸೋಮಣ್ಣ, ಮಧು ಸೇರಿದಂತೆ ಅನೇಕರು ಇದ್ದರು.

## 6.70 ಲಕ್ಷ ರೂ. ಉಂಡೆನಾಮ ಕ್ಯಾಷಿಯರ್ ವಿರುದ್ಧ ಕೇಸ್ ದಾಖಲು

**ಮೈಸೂರು:** ಬ್ಯಾಂಕ್ ಗೆ ಕಟ್ಟಬೇಕಿದ್ದ ಬಾರ್ ಅಂಡ್ ರೆಸ್ಟೋರೆಂಟ್ ಗೆ ಸೇರಿದ್ದ 6.70 ಲಕ್ಷ ರೂ ಹಣವನ್ನ ಹೊತ್ತೋಯ್ದ ಕ್ಯಾಷಿಯರ್ ವಿರುದ್ದ ಮೈಊರು ಜಿಲ್ಲೆಯ ನಂಜನಗೂಡು ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಚಾಮರಾಜನಗರ ಜಿಲ್ಲೆಯ ಗಡಿಭಾಗದಲ್ಲಿರುವ ಗಾಜನೂರು ಗ್ರಾಮದ ಮಹದೇವ್ ಎಂಬಾತನ ವಿರುದ್ದ ಪ್ರಕರಣ ದಾಖಲಾಗಿದೆ. ಹಲವು ತಿಂಗಳಿಂದ ಮಹದೇವ್ ನಂಜನಗೂಡು ಗುಂಡ್ಲುಪೇಟೆ ಮುಖ್ಯ ರಸ್ತೆಯಲ್ಲಿರುವ ಎಸ್.ಎಲ್.ವಿ ಬಾರ್ ಅಂಡ್ ರೆಸ್ಟೋರೆಂಟ್‌ನಲ್ಲಿ ಕ್ಯಾಷಿಯರ್ ಆಗಿ ಕೆಲಸ ಮಾಡುತ್ತಿದ್ದ.ಅಲ್ಲಿ ವ್ಯವಸ್ಥಾಪಕರಾಗಿದ್ದ ಆನಂದ್ ಎಂಬುವರು ಕಳೆದ ವರ್ಷ ಜುಲೈನಲ್ಲಿ ಕಾರ್ಯನಿಮಿತ್ತ ರಜೆ ಪಡೆದು ತೆರಳಿದ್ದಾಗ ವ್ಯಾಪಾರ ವಹಿವಾಟಿನಲ್ಲಿ ಬಂದ ಹಣವನ್ನ ಬ್ಯಾಂಕ್‌ಗೆ ಕಟ್ಟುವಂತೆ ಮಹದೇವ್ ಗೆ ತಿಳಿಸಿ ತೆರಳಿದ್ದರು. ರಜೆ ಮುಗಿಸಿ ವಾಪಸ್ ಬಂದಾಗ ವ್ಯಾಪಾರವಾಗಿ ಸಂಗ್ರಹವಾಗಿದ್ದ 6.70 ಲಕ್ಷ ಹಣ ಕ್ಯಾಶಿಯರ್ ಮಹದೇವ್ ಕಟ್ಟದೆ ಕೆಲಸಕ್ಕೂ ಬಾರದೆ ನಾಪತ್ತೆಯಾಗಿದ್ದನು. ಮಹದೇವ್ ನನ್ನ ಪತ್ತೆ ಹಚ್ಚಿ ಹಣ ಹಿಂದಿರುಗಿಸುವಂತೆ ಕೇಳಿದಾಗ ಸಮಯಾವಕಾಶ ಪಡೆದಿದ್ದರು. ಹಣ ಹಿಂದಿರುಗಿಸದ ಹಿನ್ನಲೆ ಆನಂದ್ ಅವರು ಮಹದೇವ್ ವಿರುದ್ದ ನಂಜನಗೂಡು ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

## ಪತ್ನಿ ಕೊಲೆಗೈದು ನೇಣಿಗೆ ಶರಣಾದ ಪತಿ

**ಬೆಂಗಳೂರು:** 6 ವರ್ಷದ ಮಗನ ಎದುರೇ ಪತಿಯೊಬ್ಬ ಪತ್ನಿಯನ್ನ ಕೊಲೆಗೈದು ಬಳಿಕ ತಾನೂ ನೇಣಿಗೆ ಶರಣಾಗಿರುವ ಘಟನೆ ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ನಡೆದಿದೆ.

ನಗರದ ಬ್ಯಾಡರಹಳ್ಳಿ ಕಾಳಿನಗರದಲ್ಲಿ ಈ ಘಟನೆ ನಡೆದಿದೆ. 33 ವರ್ಷದ ಮಮತಾ ಕೊಲೆಯಾದ ಪತ್ನಿ. ಪತಿ ಸುರೇಶ್ ಎಂಬಾತನೇ ಈ ಕೃತ್ಯವೆಸಗಿರುವುದು. 6 ವರ್ಷದ ಮಗನ ಎದುರೇ ಪತ್ನಿ ಮಮತಾ ಕತ್ತು ಹಿಸುಕಿ ಕೊಲೆಗೈದು ಬಳಿಕ ಸುರೇಶ್ ತಾನೂ ನೇಣಿಗೆ ಶರಣಾಗಿದ್ದಾನೆ ಎನ್ನಲಾಗಿದೆ.

ಸ್ಥಳಕ್ಕೆ ಬ್ಯಾಡರಹಳ್ಳಿ ಠಾಣಾ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ. ಪತ್ನಿಗೆ ವಿಡಿಯೋ ತೋರಿಸಿ ವಿಡಿಯೋದಲ್ಲಿರುವಂತೆ ಲೈಂಗಿಕ ಕ್ರಿಯೆಗೆ ಸಹಕರಿಸುವಂತೆ ಪತಿ ಸುರೇಶ್ ಕಿರುಕುಳ ನೀಡುತ್ತಿದ್ದ ಎಂಬ ಆರೋಪ ಕೇಳಿ ಬಂದಿದೆ.

## ದೇಶದ ಅತ್ಯಂತ ಸ್ಲಿಮ್ ಮೊಬೈಲ್ ವಿವೋ ವಿ 50 ಬಿಡುಗಡೆ




**ಬೆಂಗಳೂರು:** ದೇಶದಲ್ಲೇ ಅತ್ಯಂತ ಸ್ಲಿಮ್ ಆಗಿರುವ ಹಾಗೂ ಅತ್ಯಾಧುನಿಕ ಫೀಚರ್ ಗಳೊಂದಿಗೆ ಅತಿ ಕ್ಷಮತೆಯ ಬ್ಯಾಟರಿ ಹೊಂದಿರುವ ಮೊಬೈಲ್‌ನ್ನು ಖ್ಯಾತ ಚಿತ್ರನಟಿ ಹರಿಪ್ರಿಯಾ ಬಿಡುಗಡೆಗೊಳಿಸಿದರು.

ಬೆಂಗಳೂರಿನ ಬ್ಯಾಂಕ್ ಕಾಲೋನಿಯ ಸಂಗೀತಾ ಗ್ಯಾಜೆಟ್ಸ್ ಮಳಿಗೆಯಲ್ಲಿ ವಿವೊ ವಿ50 ಬಿಡುಗಡೆಗೊಂಡಿದ್ದು ಅತ್ಯಾಕರ್ಷಕ ಮೂರು ಬಣ್ಣಗಳಲ್ಲಿ ಲಭ್ಯವಿವೆ. ಹೊಸ ಅವತರಣಿಕೆಯ ವಿವೊ ವಿ50 ಬಿಡುಗಡೆಗೊಳಿಸಿ ಮಾತನಾಡಿದ ಅವರು ಎಲ್ಲರೂ ಸ್ಲಿಮ್ ಆಗಿರಲು ಬಯಸುವಂತೆ ಮೊಬೈಲ್ ಕೂಡಾ ಸ್ಲಿಮ್ ಆಗಿದ್ದು ನೋಡಲೂ ಸುಂದರವಾಗಿದೆ. ಈ ಮೊಬೈಲ್ ಗ್ರಾಹಕರ ನೆಚ್ಚಿನ ಮೊಬೈಲ್ ಆಗಿ ಹೊರಹೊಮ್ಮಲಿದೆ ಎಂದರು.

ವಿವೊ ಸಂಸ್ಥೆಯ ಮಾರುಕಟ್ಟೆ ಮುಖ್ಯಸ್ಥ ಚಂದ್ರು ಮಾತನಾಡಿ ಮೊಬೈಲ್ ಬಿಟ್ಟಿರಲಾರದ ಈ ದಿನಗಳಲ್ಲಿ ವಿವೊ ವಿ50 ಗ್ರಾಹಕರ ಸೆಳೆಯುವ ಎಲ್ಲಾ ಲಕ್ಷಣಗಳನ್ನು ಹೊಂದಿದ್ದು ದಿನದ 24 ಗಂಟೆಗಳ ಸಂಗಾತಿಯಾಗಲಿದೆ ಎಂದರು.

ಸಂಗೀತಾ ಗ್ಯಾಜೆಟ್ಸ್ ನ ಮಾರಾಟ ವಿಭಾಗದ ಮುಖ್ಯಸ್ಥ ಭರತ್ ಪ್ರಭಾತ್ ಮಾತನಾಡಿ ಸಂಗೀತಾ ಗ್ರಾಹಕರಿಗೆ ನೀಡುತ್ತಿರುವ ವಿಶೇಷ ಸೌಲಭ್ಯಗಳ ಕುರಿತು ವಿವರಿಸಿದರು. ಮೊಬೈಲ್ ಕೆಳಗೆ ಬಿದ್ದು ಒಡೆದು ಹೋದರೆ ,ಕಳ್ಳತನವಾದರೆ ಏನನ್ನೂ ಪ್ರಶ್ನಿಸದೇ ಹೊಸ ಮೊಬೈಲ್ ನೀಡಲಾಗುವುದು. ಬೆಲೆ ಕುಸಿತವಾದರೆ ಪರಿಹಾರ ಮೊತ್ತವನ್ನೂ ನೀಡಲಾಗುವುದು ಎಂದರು. ವಿವೊ ಮಾರಾಟ ವಿಭಾಗದ ಕರ್ನಾಟಕ ಮತ್ತು ಗೋವಾ ಮುಖ್ಯಸ್ಥ ಸಾಗರ್ ಹಾಜರಿದ್ದರು.

## ಕಸಾಪ ಅಧ್ಯಕ್ಷ ಮಹೇಶ್ ಜೋಶಿಗೆ 1.20 ಲಕ್ಷ ರೂ. ದಂಡ: ಹೈಕೋರ್ಟ್ ತಡೆ

**ಬೆಂಗಳೂರು:** ಬೆಂಗಳೂರು ದೂರದರ್ಶನ ಕೇಂದ್ರದ ನಿರ್ದೇಶಕರಾಗಿದ್ದ ಹಾಗೂ ಪ್ರಸ್ತುತ ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷರಾಗಿರುವ ಮಹೇಶ್ ಜೋಶಿ ಅವರಿಗೆ ಬೆಂಗಳೂರಿನ ನಗರ ಸಿವಿಲ್ ನ್ಯಾಯಾಲಯವು 12 ವರ್ಷ ಹಳೆಯ ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ 1.20 ಲಕ್ಷ ದಂಡ ವಿಧಿಸಿದೆ. ಹಾಗೆಯೇ ದಂಡದ ಮೊತ್ತವನ್ನು ವಾರ್ಷಿಕ ಶೇ.24ರಷ್ಟು ಬಡ್ಡಿ ಸಮೇತ ದೂರುದಾರರಿಗೆ ಪರಿಹಾರವಾಗಿ ನೀಡಬೇಕು ಎಂದು ನ್ಯಾಯಾಲಯ ಆದೇಶಿಸಿದೆ.

ಮಹೇಶ್ ಜೋಶಿ ಅವರು 1984ರಲ್ಲಿ ದೂರದರ್ಶನ ನಿರ್ದೇಶಕರಾಗಿದ್ದಾಗ ಮೋಹನ್ ರಾಂ ಸೇರಿ ಏಳು ಸಹೋದ್ಯೋಗಿಗಳ ವಿರುದ್ಧ ವಂಚನೆ ಪ್ರಕರಣ ದಾಖಲಿಸಿದ್ದರು. ಆದರೆ ಆ ಪ್ರಕರಣ ಸುಳ್ಳು ಎಂದು 2013ರಲ್ಲಿ ಹೈಕೋರ್ಟ್ ತೀರ್ಪು ನೀಡಿ, ಪ್ರಕರಣವನ್ನು ವಜಾಗೊಳಿಸಿತ್ತು.

ಹೈಕೋರ್ಟ್ ತೀರ್ಪಿನ ಬಳಿಕ ಮೋಹನ್ ರಾಂ ಅವರು, ತಮಗಾಗಿದ್ದ ಮಾನಸಿಕ ಹಿಂಸೆ ಮತ್ತು ಆರ್ಥಿಕ ನಷ್ಟ ಸೇರಿ 1.20 ಪರಿಹಾರ ಕೋರಿ ನಗರ ಸಿವಿಲ್ ನ್ಯಾಯಾಲಯದಲ್ಲಿ ದಾವೆ ಹೂಡಿದ್ದರು. ಪ್ರಕರಣದ ವಿಚಾರಣೆ ನಡೆಸಿದ 14ನೇ ಸಿವಿಲ್ ನ್ಯಾಯಾಲಯವು ಕಸಾಪ ಅಧ್ಯಕ್ಷ ಮಹೇಶ್ ಜೋಶಿ ಅವರಿಗೆ 1.20 ಲಕ್ಷ ರೂ. ದಂಡ ವಿಧಿಸಿ ಫೆ.19ರ ಬುಧವಾರ ತೀರ್ಪು ನೀಡಿದೆ.


'ದಂಡವನ್ನು ಪರಿಹಾರವಾಗಿ ಪಾವತಿ ಮಾಡುವುದರ ಜತೆಗೆ ಸುಳ್ಳು ಪ್ರಕರಣದ ಸಂಬಂಧ ದೂರದರ್ಶನದಲ್ಲಿ ಹಾಗೂ ರಾಜ್ಯದ ಪ್ರಮುಖ ಇಂಗ್ಲಿಷ್ ಹಾಗೂ ಕನ್ನಡ ದಿನಪತ್ರಿಕೆಯಲ್ಲಿ ಕ್ಷಮೆ ಕೋರಬೇಕು. ತೀರ್ಪು ಬಂದ ಏಳು ದಿನಗಳಲ್ಲಿ ಇವನ್ನು ಮಾಡಬೇಕು' ಎಂದು ನ್ಯಾಯಾಧೀಶರಾದ ಎ.ಎಂ.ನಳಿನಿ ಕುಮಾರಿ ಅವರು ಆದೇಶಿಸಿದ್ದಾರೆ.

'ಸೂಚಿತ ಅವಧಿಯಲ್ಲಿ ಪರಿಹಾರದ ಹಣ ಪಾವತಿಸದೇ ಇದ್ದಲ್ಲಿ ನ್ಯಾಯಾಂಗ ನಿಂದನೆ ಪ್ರಕರಣ ದಾಖಲಿಸಲಾಗುವುದು ಮತ್ತು ಏಳು ದಿನ ಜೈಲು ಶಿಕ್ಷೆ ವಿಧಿಸಲಾಗುವುದು' ಎಂದು ಆದೇಶಿಸಿದ್ದಾರೆ.

ಇನ್ನು ದಂಡ ವಿಧಿಸಿ ವಿಚಾರಣಾ ನ್ಯಾಯಾಲಯವು ನೀಡಿರುವ ತೀರ್ಪನ್ನು ಪ್ರಶ್ನಿಸಿ ಮಹೇಶ್ ಜೋಶಿ ಅವರು ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಈ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ಏಕಸದಸ್ಯ ಪೀಠವು ಮುಂದಿನ ವಿಚಾರಣೆವರೆಗೆ (ಮಾ.6) ವಿಚಾರಣಾ ನ್ಯಾಯಾಲಯದ ಆದೇಶಕ್ಕೆ ತಡೆ ನೀಡಿದೆ. ಈ ಮಧ್ಯೆ ಅದಕ್ಕೂ ಮುನ್ನ 1.50 ಲಕ್ಷವನ್ನು ಠೇವಣಿಯಾಗಿ ನ್ಯಾಯಾಲಯದಲ್ಲಿ ಇರಿಸುವಂತೆ ಮಹೇಶ್ ಜೋಶಿ ಅವರಿಗೆ ಆದೇಶಿಸಿದೆ.

## ಬಿಬಿಎಂಪಿ ಚುನಾವಣೆ ಮುಂದೂಡುವುದೇ ಬಿಜೆಪಿ, ಕಾಂಗ್ರೆಸ್‌ನ ಮೂಲ ಗುರಿ


**ಬೆಂಗಳೂರು:** ' ಬೆಂಗಳೂರಿನ ಬಿಜೆಪಿ ಹಾಗೂ ಕಾಂಗ್ರೆಸ್ ಪಕ್ಷಗಳ ಶಾಸಕರುಗಳು ಯಾವುದೇ ಕಾರಣಕ್ಕೂ ಬಿಬಿಎಂಪಿ ಚುನಾವಣೆಯನ್ನು ನಡೆಸಲು ಬಿಡುವುದಿಲ್ಲ. ಗ್ರೇಟರ್ ಬೆಂಗಳೂರು ಮಸೂದೆ ಎಂಬ ನೆಪದಲ್ಲಿ ಕಾಂಗ್ರೆಸ್ ಪಕ್ಷದ ಶಾಸಕರುಗಳು ಒಂದು ಕಡೆಯಾದರೆ ಮತ್ತೊಂದು ಕಡೆ ಈ ಮಸೂದೆಯನ್ನು ವಿರೋಧಿಸಿ ಸರ್ವೋಚ್ಚ ನ್ಯಾಯಾಲಯದ ಸಮಯವನ್ನು ವ್ಯರ್ಥ ಮಾಡಲು ಹೊರಟಿರುವ ಬಿಜೆಪಿ ಶಾಸಕರುಗಳು ಯಾವುದೇ ಕಾರಣಕ್ಕೂ ಬಿಬಿಎಂಪಿ ಚುನಾವಣೆಯನ್ನು ಸದ್ಯದಲ್ಲಿ ನಡೆಸಲು ಬಿಡುವುದಿಲ್ಲ, ಇವರ್ಯಾರಿಗೂ ಬೆಂಗಳೂರಿನ ಅಭಿವೃದ್ಧಿ ಬೇಕಾಗಿಲ್ಲ ಬೆಂಗಳೂರಿನಿಂದ ಬರುವ ಕಟ್ಟಡ ನಿರ್ಮಾಣ ತೆರಿಗೆ, ಅಕ್ರಮ ಟೆಂಡರ್ ಗಳು, ಬೃಹತ್ ಕಾಮಗಾರಿಗಳ ಮೇಲಿನ ಸಾವಿರಾರು ಕೋಟಿ ರೂಪಾಯಿಗಳ ಭ್ರಷ್ಟಾಚಾರದ ಆಮದನಿಗಳ ಮೇಲೆ ಇವರ ಕಣ್ಣು ನೆಟ್ಟಿದೆ ಎಂದು ಆಮ್ ಆದ್ಮಿ ಪಕ್ಷದ ಬೆಂಗಳೂರು ನಗರ ಅಧ್ಯಕ್ಷ ಡಾ. ಸತೀಶ್ ಕುಮಾರ್ ನಡೆದ ಪತ್ರಿಕಾಗೋಷ್ಠಿಯಲ್ಲಿ



ನೇರವಾಗಿ ಆರೋಪಿಸಿದರು.

ಬಿಜೆಪಿ ಸರ್ಕಾರದಲ್ಲಿ ಕೂಡಲೇ ಚುನಾವಣೆಯನ್ನು ನಡೆಸಿ ಎಂದು ಕಾಂಗ್ರೆಸ್ ಪಕ್ಷದ ಪಾಲಿಕೆ ಸದಸ್ಯರಾದ ಶಿವರಾಜ್ ಹಾಗೂ ಅಬ್ದುಲ್ ವಾಹಿಬ್ ಕೋರ್ಟ್‌ನ ಮೆಟ್ಟಿಲೇರಿದ್ದರು. ಈಗ ಅಂತಿಮವಾಗಿ ಸರ್ವೋಚ್ಚ ನ್ಯಾಯಾಲಯವು ತೀರ್ಪನ್ನು ನೀಡುತ್ತಿರುವ ಸಂದರ್ಭದಲ್ಲಿ ಬಿಜೆಪಿಯವರು ಮೂರು ದಿವಸಗಳ ಹಿಂದೆ ಪಕ್ಷದ ವಕೀಲರ ಸಮಿತಿಯನ್ನು ನೇಮಿಸಿ ಸರ್ವೋಚ್ಚ ನ್ಯಾಯಾಲಯದಲ್ಲಿ ವಾದ ಮಾಡುತ್ತಿರುವುದನ್ನು ನೋಡಿದರೆ ಅನವಶ್ಯಕವಾಗಿ ಗೊಂದಲಗಳನ್ನು ಉಂಟು ಮಾಡಿ ಚುನಾವಣೆಯನ್ನು ಮುಂದೂಡುವುದೇ ಇವರ ಮುಖ್ಯ ಉದ್ದೇಶವಾದಂತಿದೆ. ಬೆಂಗಳೂರು ಅನೇಕ ಸಮಸ್ಯೆಗಳ ಆಗರವಾಗಿದ್ದು ನಾಗರೀಕರು ವಾಸ ಮಾಡಲು ಯೋಗ್ಯವಾದಂತಹ ನಗರವಾಗಿ ಉಳಿದಿಲ್ಲ. ಕಳೆದ ಐದು ವರ್ಷಗಳಿಂದ ಬಿಬಿಎಂಪಿಗೆ ಚುನಾವಣೆಯನ್ನು ನಡೆಸದೆ ಎರಡು ಪಕ್ಷಗಳು ಸಂವಿಧಾನದ ಆಶಯವನ್ನು ಗಾಳಿಗೆ ತೂರಿ, ವಿಧಾನಸಭೆಯಲ್ಲಿ ನೂತನ ಮಸೂದೆಗಳನ್ನು ಮಂಡನೆ ಮಾಡುವ ಮೂಲಕ, ನ್ಯಾಯಾಲಯಗಳ ಸಮಯವನ್ನು ವ್ಯರ್ಥ ಮಾಡಿ ಎರಡು ಪಕ್ಷಗಳ ಶಾಸಕರು ಕಾಲಹರಣ ಮಾಡುತ್ತಿದ್ದಾರೆ" ಎಂದು ಆರೋಪಿಸಿದರು.

ಮೂರು ಪಕ್ಷಗಳ ಶಾಸಕರುಗಳ ಪ್ರಮುಖ ನಾಯಕರುಗಳ ಕಪ್ಪು ಹಣದ ಸಾವಿರಾರು ಕೋಟಿ ಬೇನಾಮಿ ಆಸ್ತಿಗಳು ಬೆಂಗಳೂರಿನ ಸುತ್ತಮುತ್ತ ಇರುವ ಕಾರಣದಿಂದ ಗ್ರೇಟರ್ ಬೆಂಗಳೂರು ಕಾಯ್ದೆಯ ಮೂಲಕ ಏಳು ಪಾಲಿಕೆಗಳಾಗಿ ವಿಭಜನೆ ಮಾಡುತ್ತಿದ್ದಾರೆ. ಪಕ್ಷವು ಮುಂದಿನ ದಿವಸಗಳಲ್ಲಿ ಈ ಬಗ್ಗೆ ಹೋರಾಟವನ್ನು ನಡೆಸುತ್ತದೆ " ಎಂದು ಡಾ. ಸತೀಶ್ ಎಚ್ಚರಿಸಿದರು.



**ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಸಾಧು ಕೋಕಿಲಾ ಮತ್ತು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರು 16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಉದ್ಘಾಟನೆಗೆ ಮುಖ್ಯಮಂತ್ರಿಗಳನ್ನು ಆಹ್ವಾನಿಸಿ, ಆಹ್ವಾನ ಪತ್ರಿಕೆ ನೀಡಿದರು. ಸರ್ಕಾರದ ಕಾರ್ಯದರ್ಶಿ ಬಿ.ಬಿ.ಕಾವೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕಿ ಡಾ.ಕೆ.ಧರಣಿದೇವಿ ಅವರು ಉಪಸ್ಥಿತರಿದ್ದರು.**

## ನಂದಿಯ ಶ್ರೀಭೋಗನಂದೀಶ್ವರ ದರ್ಶನ ಪಡೆದ ತಂಡೇಲ್ ಸಿನಿಮಾ ನಿರ್ದೇಶಕ ಚಂದು ಮೊಂಡೇಟಿ

**ಚಿಕ್ಕಬಳ್ಳಾಪುರ:** ನಾಗಚೈತನ್ಯ ಸಾಯಿಪಲ್ಲವಿ ಜೋಡಿಯ ತಂಡೇಲ್ ತೆಲುಗು ಸಿನಿಮಾದ ನಿರ್ದೇಶಕ ಚಂದು ಮೊಂಡೇಟಿ ಅವರು ಇತಿಹಾಸ ಪ್ರಸಿದ್ಧ ಚಿಕ್ಕಬಳ್ಳಾಪುರ ತಾಲ್ಲೂಕಿನ ನಂದಿಯ ಶ್ರೀಭೋಗನಂದೀಶ್ವರ ದೇವಾಲಯಕ್ಕೆ ಮಹಾಶಿವರಾತ್ರಿ ಯಂದು ಅಗಮಿಸಿ ದೇವರ ದರ್ಶನ ಪಡೆದರು.

ಶ್ರೀಭೋಗನಂದೀಶ್ವರ ಪ್ರಾಚೀನ ದೇವಾಲಯದ ಶಿಲ್ಪಕಲೆಯನ್ನು ಕಂಡು ಸಂತಸ ವ್ಯಕ್ತಪಡಿಸಿದರು. ಮಹಾಶಿವರಾತ್ರಿಯಂದು ಯಾವುದಾದರೂ ಪುರಾತನ ದೇವಾಲಯಕ್ಕೆ ಹೋಗಬೇಕೆಂದು ಕೊಂಡಾಗ ಈ ಭಾಗದ ನಮ್ಮ ಸ್ನೇಹಿತರೊಬ್ಬರು ಪುರಾತನ ಶಿಲ್ಪಕಲೆಯ ಈ ದೇವಾಲಯದ ದರ್ಶನ ಮಾಡಿ ಎಂದರು. ಇಂತಹ ಸುಂದರ ಶಿಲ್ಪಕಲೆಯ ಪುರಾತನ ದೇವಾಲಯದ ದರ್ಶನ ಮಾಡಿರುವುದು ನನ್ನ ಭಾಗ್ಯ ಎಂದು ಬಣ್ಣಿಸಿದರು. ಮುಂಬರುವ ದಿನಗಳಲ್ಲಿ ಅವಕಾಶ ಸಿಕ್ಕರೆ ಇಲ್ಲಿ ನಮ್ಮ ಸಿನಿಮಾಗಳ ಚಿತ್ರಿಕರಣ ಮಾಡಲಾಗುವುದು ಎಂದರು.







**ಶಿವರಾತ್ರಿ ಪ್ರಯುಕ್ತ ಚಾಮರಾಜನಗರ ಭದ್ರಕಾಳಮ್ಮ ಸಮೇತ ವೀರಭದ್ರ ಸ್ವಾಮಿ ದೇವಾಲಯಲ್ಲಿ ಅಲಂಕೃತಗೊಂಡ ಮೂರ್ತಿಗಳಿಗೆ ಭಕ್ತರು ಪೂಜೆ ಸಲ್ಲಿಸಿದರು.**

# ಅವರ ಟಚ್ ನನಗೆ..!





**ಮುಂಬೈ:** ಶೋಲೆ, ನಸೀಬ್, ಅಂಧಾ ಕಾನೂನ್, ಘೋಟಿ ಸೀ ಬಾತ್, ಸತ್ತೆ ಪರ್ ಸತ್ತಾ, ವೀರ್ ಜಾರಾ ನಿಂದಿ ಬಾಗ್ಬಾನ್ ಸಿನಿಮಾವರೆಗೆ ಅಮಿತಾಬ್ ಬಚ್ಚನ್ ಮತ್ತು ಹೇಮಾ ಮಾಲಿನಿ ಜೊತೆಯಾಗಿ ನಟಿಸಿದ್ದಾರೆ.

ಇಬ್ಬರ ಜೋಡಿ ಜನರಿಗೆ ತುಂಬಾ ಇಷ್ಟವಾಗಿತ್ತು. 2003ರಲ್ಲಿ ಕೊನೆಯ ಬಾರಿಗೆ ಅಮಿತಾಬ್ ಬಚ್ಚನ್ ಮತ್ತು ಹೇಮಾ ಮಾಲಿನಿ ಬಾಗ್ಬಾನ್ ಸಿನಿಮಾದಲ್ಲಿ ನಟಿಸಿದ್ದರು. ಕೌಟುಂಬಿಕ ಕಥಾ ಹಂದರವುಳ್ಳ ಈ ಸಿನಿಮಾ ನೋಡುಗರ ಕಣ್ಣಂಚಲ್ಲಿ ನೀರು ತರಿಸುತ್ತದೆ. ಬಾಗ್ಬಾನ್ ಸಿನಿಮಾ ಸಹ ಬಾಕ್ಸ್ ಆಫಿಸ್‌ನಲ್ಲಿ ಒಳ್ಳೆಯ ಕಲೆಕ್ಷನ್ ಮಾಡಿತ್ತು. ಸಿನಿಮಾದಲ್ಲಿ ಅಮಿತಾಬ್ ಬಚ್ಚನ್ ಜೊತೆಗಿನ ರೊಮ್ಯಾಂಟಿಕ್ ಚಿತ್ರೀಕರಣದ ವೇಳೆ ಹೇಮಾ ಮಾಲಿನಿ ಕೆಲವೊಂದು ವಿಶೇಷ ಮನವಿ ಮಾಡಿಕೊಂಡಿದ್ದರು. ರೊಮ್ಯಾಂಟಿಕ್ ಸೀನ್ ವೇಳೆ ತಮ್ಮ ಬ್ಲೌಸ್ ಸ್ವಲ್ಪ ಟೈಟ್ ಮಾಡಿಸಿಕೊಂಡಿದ್ದರು ಎಂಬ ವಿಷಯ ಈಗ ರಿವೀಲ್ ಆಗಿದೆ.

ರವಿ ಚೋಪ್ರಾ ಅವರ ಬಗ್ಬಾನ್ ಚಿತ್ರದಲ್ಲಿ ರಾಜ್ ಮತ್ತು ಪೂಜಾ ಪಾತ್ರದಲ್ಲಿ ಅಮಿತಾಬ್ ಬಚ್ಚನ್-ಹೇಮಾ ಮಾಲಿನಿ ನಟಿಸಿದ್ದರು. ವಿಶೇಷ ಪಾತ್ರವೊಂದರಲ್ಲಿ ಸಲ್ಮಾನ್ ಖಾನ್ ಸಹ ನಟಿಸಿದ್ದರು. ಈ ಸಿನಿಮಾದಲ್ಲಿ ಹೇಮಾ ಮಾಲಿನಿ ಕನ್ನಡಿ ಮುಂದೆ ನಿಂತು ರೆಡಿಯಾಗುತ್ತಿರುತ್ತಾರೆ. ಹಿಂದಿನಿಂದ ಬರುವ ಅಮಿತಾಬ್ ಬಚ್ಚನ್ ವಾವ್ ಎಂದು ಮಡದಿಯ ಸೌಂದರ್ಯದ ಗುಣಗಾನ ಮಾಡುತ್ತಾರೆ. ನಂತರ ಹಿಂದಿನಿಂದ ಬ್ಲೌಸ್ ದಾರವನ್ನು ಕಟ್ಟುತ್ತಾರೆ.

ಬಾಗ್ಬಾನ್ ಸಿನಿಮಾದ ನಿರ್ಮಾಪಕ ರವಿ ಚೋಪ್ರಾ ಪತ್ನಿ ರೇಣು ಚೋಪ್ರಾ ಪಾಡ್‌ಕಾಸ್ಟ್ ಸಿನಿಮಾದ ಕುರಿತ ಹಲವು ವಿಷಯಗಳನ್ನು ಹಂಚಿಕೊಂಡಿದ್ದಾರೆ. ಚಿತ್ರದ ಪ್ರತಿಯೊಂದು ದೃಶ್ಯಗಳನ್ನು ಬೆಸ್ಟ್ ಮಾಡಲು ಹೇಮಾ ಮಾಲಿನಿ ಸಹ ಪ್ರಯತ್ನಿಸುತ್ತಿದ್ದರು. ಕನ್ನಡಿ ಮುಂದೆ ನಿಂತು ಅಮಿತಾಬ್ ಜೊತೆಗೆ ರೊಮ್ಯಾಂಟಿಕ್ ಸೀನ್ ಮಾಡುವ ಮುನ್ನ ಹೇಮಾ ಮಾಲಿನಿ ತಮ್ಮ ಡಿಸೈನರ್ಸ್‌ಗಳಿಂದ ಬ್ಲೌಸ್ ಸ್ವಲ್ಪ ಟೈಟ್ ಮಾಡಿಸಿಕೊಂಡಿದ್ದರು. ಹಿಂದಿನಿಂದ ಅಮಿತಾಬ್ ದಾರ ಬಿಗಿ ಮಾಡುವ ದೃಶ್ಯ ಪರ್ಫೆಕ್ಟ್ ಆಗಿ ಕಾಣಿಸಬೇಕು ಎಂಬುವುದು ಅವರ ಉದ್ದೇಶವಾಗಿತ್ತು ಎಂದು ರೇಣು ಚೋಪ್ರಾ ಹೇಳಿದ್ದಾರೆ.

ಇಳಿ ವಯಸ್ಸಿನಲ್ಲಿಯೂ ದಂಪತಿ ನಡುವೆ ಪ್ರೀತಿ ಇರುತ್ತೆ ಎಂಬುದನ್ನು ತೋರಿಸುವ ದೃಶ್ಯ ಅದಾಗಿತ್ತು. ಅಮಿತಾಬ್ ಬಚ್ಚನ್ ಅವರ ಆ ಸ್ಪರ್ಶ ಆ ಸಮಯದಲ್ಲಿ ನನಗೆ ಬೇಕಾದ ಲುಕ್ ನೀಡುತ್ತದೆ ಎಂದು ಹೇಮಾ ಮಾಲಿನಿ ಹೇಳಿದ್ದರು. ಮದುವೆಯಾಗಿ ಬಹಳ ವರ್ಷಗಳ ಬಳಿಕ ಕಾಣಿಸಿಕೊಳ್ಳುವ ಪ್ರೀತಿಯನ್ನು ತೆರೆ ಮೇಲೆ ತೆಗೆದುಕೊಂಡು ಬರಲಾಗಿತ್ತು. ಇದೇ ರೀತಿ ಬಾಗ್ಬಾನ್ ಚಿತ್ರದಲ್ಲಿ ಸಲ್ಮಾನ್ ಖಾನ್ ಪಾತ್ರದ ಬಗ್ಗೆಯ ರೇಣು ಚೋಪ್ರಾ ಮಾತನಾಡಿದ್ದಾರೆ.

ಲೀಡ್ ರೋಲ್‌ನಲ್ಲಿ ಅಮಿತಾಬ್ ಬಚ್ಚನ್ ಮತ್ತು ಹೇಮಾ ಮಾಲಿನಿ ಇರೋದರಿಂದ ಇದೊಂದು ಸಪ್ಪೆ ಸಿನಿಮಾ ಅಂತ ವಿತರಕರು ಚಿತ್ರ ತೆಗೆದುಕೊಳ್ಳಲು ಮುಂದೆ ಬರಲಿಲ್ಲ. ಆ ಸಮಯದಲ್ಲಿ ಸಲ್ಮಾನ್ ಖಾನ್ ಅವರನ್ನು ಅಪ್ರೋಚ್ ಮಾಡಲಾಯ್ತು. ಬಾಂದ್ರಾದಲ್ಲಿರುವ ಸಲ್ಮಾನ್ ಮನೆಗೆ ತೆರಳಿ ಕಥೆ ಹೇಳಾಯ್ತು. ಕಥೆ ಇಷ್ಟವಾಗಿದ್ದರಿಂದ ಸಲ್ಮಾನ್ ಒಪ್ಪಿಕೊಂಡರು. ಆದ್ರೆ ಇಷ್ಟೇ ಸಂಭಾವನೆ ಬೇಕೆಂದು ಕೇಳಲಿಲ್ಲ. ಚಿತ್ರದಲ್ಲಿ ರಾಜ್ ಮತ್ತು ಪೂಜಾ ದಂಪತಿಯ ದತ್ತು ಪುತ್ರನಾಗಿ ಸಲ್ಮಾನ್ ಖಾನ್ ನಟಿಸಿದ್ದಾರೆ.

# ಕನ್ನಡ ಸಿನಿಮಾ ಮಾಡಬೇಕಾದ್ರೆ ನೀವು ಪಂಚ ಭಾಷೆಗಳೊಂದಿಗೆ ಸ್ಪರ್ಧಿಸಲೇಬೇಕು



ಸಿನಿಮಾ ಎಂಬ ಗ್ಲಾಮರ್ ಲೋಕ ಕಣ್ಣಿಗೆ ಕಂಡಷ್ಟು ಸುಲಭವಲ್ಲ. ತೆರೆ ಮೇಲೆ ಆಕರ್ಷಕ ದೃಶ್ಯಗಳ ಮೂಲಕ ಮನರಂಜನೆ ನೀಡುವ ಸಿನಿಮಾವೊಂದರ ಹಿಂದಿರುವ ಸಂಪೂರ್ಣ ತಂಡದ ಪರಿಶ್ರಮ ನಮ್ಮ ಯೋಚನೆಗೂ ಮೀರಿದ್ದು. ತೆರೆಗೆ ಬರುವ ಅಷ್ಟೂ ಸಿನಿಮಾಗಳೂ ಯಶಸ್ಸು ಕಾಣೋದಿಲ್ಲ.

ಹಲವು ಏಳು-ಬೀಳುಗಳ ನಂತರವೇ ಗೆಲುವಿನ ರುಚಿ ಸಿಗೋದು. ಇದು ಚಿತ್ರೋದ್ಯಮದಲ್ಲಿ ಅಕ್ಷರಶಃ ಸತ್ಯ. ಹೀಗೆ, ಚಿತ್ರರಂಗದ ಏಳುಬೀಳುಗಳ ಬಗ್ಗೆ ಸ್ಯಾಂಡಲ್‌ವುಡ್ ಕ್ರೇಜಿಸ್ಟಾರ್ ರವಿಚಂದ್ರನ್ ಮಾತನಾಡಿದರು.

ಇತ್ತೀಚೆಗೆ ಸಿನಿಮಾ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, "ನಾವು ಸಿನಿಮಾ ಹಿಸ್ಟರಿ ಗಮನಿಸೋದಾದ್ರೆ 100 ಚಿತ್ರಗಳಲ್ಲಿ 5 ಗೆಲ್ಲುತ್ತವೆ. ಆ ಐದು ಚಿತ್ರಗಳಿಗೆ ಅವರು ಹಾಕಿರೋ ಹಣ ಬರುತ್ತದೆ. 90 ಸಿನಿಮಾಗಳೂ ಫೇಲೇ ಆಗಿರೋದು. ಚಿತ್ರರಂಗ ಹುಟ್ಟಿದಾಗಿನಿಂದಲೂ ಬಂದಿರೋ ಕ್ಯಾಲ್ಕುಲೇಷನ್. ಅದು ಹಾಗೇ ನಡೆಯೋದು" ಎಂದು ತಿಳಿಸಿದರು.

"ಬಹುಭಾಷೆಗಳಿಂದ ಕನ್ನಡಕ್ಕೆ ಕಾಂಪಿಟೇಷನ್ ಹೆಚ್ಚು ಸಿಗುತ್ತಿದೆ. ಈ ಸ್ಪರ್ಧೆಯನ್ನು ಎದುರಿಸಲೇಬೇಕು. ಕರ್ನಾಟಕದಲ್ಲಿ ಕನ್ನಡ ಸಿನಿಮಾ ಮಾಡಬೇಕಾದ್ರೆ ನೀವು ಹೋರಾಟ ಮಾಡಲೇಬೇಕು. ನೀವು ಪಂಚ ಭಾಷೆಗಳೊಂದಿಗೆ ಸ್ಪರ್ಧಿಸಬೇಕು. ಇದು ಖಚಿತ" ಎಂದರು.

"ಇದಕ್ಕಾಗಿ ಚಿಂತೆ ಮಾಡೋದು ಬೇಡ. ಸೋಲು, ಗೆಲುವು ಇರೋದೇ ಅಲ್ವಾ?. ನೀವು ಬೇರೆ ಭಾಷೆಯ ಸಿನಿಮಾಗಳನ್ನು ನೋಡುವವರಾದರೂ, ಗೆಲ್ಲೋದನ್ನಷ್ಟೇ ನೋಡುತ್ತೀರಾ. ಸೋತಿರುವ ಸಿನಿಮಾಗಳು ಇಲ್ಲಿಗೆ ಬರೋದೇ ಇಲ್ಲ. ಇದು ಎಷ್ಟು ಜನರಿಗೆ ಗೊತ್ತು. ಬೇರೆ ಭಾಷೆಯವರು ನಮ್ಮಂತೆಯೇ 200 ಸಿನಿಮಾಗಳನ್ನು ಮಾಡ್ತಾರೆ. ಗೆದ್ದಿರೋದಷ್ಟೇ ಇಲ್ಲಿಗೆ ಬಂದಾಗ ಬೇರೆ ಭಾಷೆಯ ಸಿನಿಮಾಗಳು ಚೆನ್ನಾಗಿವೆ, ನಮ್ಮ ಚಿತ್ರಗಳು ಚೆನ್ನಾಗಿಲ್ಲ ಅಂತಾ ಅನಿಸುತ್ತದೆ" ಎಂದು ತಿಳಿಸಿದರು.

"ನಾನು ಪ್ಯಾನ್ ಇಂಡಿಯಾಗೆ ಹೋಗಲ್ಲ, ಸಿನಿಮಾ ಮಾಡಿದ್ಮೇಲೆ ಅದು ಪ್ಯಾನ್ ಇಂಡಿಯಾಗೆ ಹೋಗುತ್ತೆ" ಎಂದು ಕೂಡಾ ಇದೇ ಸಂದರ್ಭದಲ್ಲಿ ತಿಳಿಸಿದರು.

ಹಿಂದೆ ಸಿನಿಮಾ ರಂಗದಲ್ಲಿನ ಬದಲಾವಣೆಗಳು, ಸ್ಟಾರ್ಸ್ ಸಿನಿಮಾಗಳ ಸಂಖ್ಯೆ ಇಳಿಕೆ ಬಗ್ಗೆ ಮಾತನಾಡಿದ ರವಿಚಂದ್ರನ್, "ಸೆಲೆಬ್ರಿಟಿಗಳಿಗೆ ಅವರದ್ದೇ ಆದ ಬ್ರ್ಯಾಂಡ್ ಇರುತ್ತದೆ. ಪ್ರೇಕ್ಷರನ್ನು ರಂಜಿಸೋ ಕೆಲಸ ಮುಂದುವರಿಸಿದ್ದಾರೆ. ಆದ್ರೆ ಕೊಂಚ ತಡವಾಗಬಹುದು. ಯಾರನ್ನೂ ದೂಷಿಸಬೇಡಿ" ಎಂದರು.

# ಎಂಟೇ ನಿಮಿಷದ ಅಭಿನಯ, ಆಸ್ಕರ್‌ಗೆ ಎಂಟ್ರಿ!



ಇಸಾಬೆಲ್ಲೆ ರೊಸೆಲ್ಲಿನಿ 97ನೇ ಅಕಾಡೆಮಿ ಪ್ರಶಸ್ತಿಗಳಲ್ಲಿ ಅತ್ಯುತ್ತಮ ಪೋಷಕ ನಟಿಯಾಗಿ ತಮ್ಮ ಮೊದಲ ಆಸ್ಕರ್ ನಾಮನಿರ್ದೇಶನವನ್ನು ಪಡೆದುಕೊಂಡಿದ್ದಾರೆ. ಆದಾಗ್ಯೂ, ಕಾನ್ಕ್ಲೇವ್ ಚಿತ್ರದಲ್ಲಿನ ಅವರ ಸ್ಕ್ರೀನ್ ಟೈಮ್ ಗಮನ ಸೆಳೆಯುವಂತಿದೆ.

ಈ ಚಿತ್ರ ಅವರಿಗೆ ಪ್ರತಿಷ್ಠಿತ ಆಸ್ಕರ್ ನಾಮನಿರ್ದೇಶನವನ್ನು ತಂದುಕೊಟ್ಟಿತು. ಒಟ್ಟು 8 ನಿಮಿಷಗಳ ಸ್ಕ್ರೀನ್ ಟೈಮ್ ಹೊಂದಿರುವ ಈ ನಟಿ ಈಗ ವಿಶ್ವದ ಸಿನಿಪ್ರಿಯರ ಗಮನ ಸೆಳೆಯುವಲ್ಲಿ ಯಶಸ್ವಿಯಾಗಿದ್ದಾರೆ. ಪೋಷಕ ಪಾತ್ರಗಳ ಆಸ್ಕರ್ ನಾಮನಿರ್ದೇಶನಗಳಲ್ಲಿ ಸ್ಥಾನ ಪಡೆದ ಕಲಾವಿದರ ಪಟ್ಟಿ ಸೇರಿದ್ದಾರೆ.

ಇಸಾಬೆಲ್ಲೆ ರೊಸೆಲ್ಲಿನಿ 40 ವರ್ಷಗಳ ನಟನಾ ವೃತ್ತಿಜೀವನ ಹೊಂದಿದ್ದಾರೆ. ಬ್ಲೂ ವೆಲ್ವೆಟ್ ಮೂಲಕ ವಿಮರ್ಶಾತ್ಮಕ ಮೆಚ್ಚುಗೆ ಗಳಿಸಿದರು. ಆದಾಗ್ಯೂ, ಆಸ್ಕರ್ ಮನ್ನಣೆ ಅವರ ಎಪ್ಪತ್ತರ ವಯಸ್ಸಿನಲ್ಲಿ ಬಂದಿದೆ. ಎಡ್ವರ್ಡ್ ಬರ್ಗರ್ ನಿರ್ದೇಶನದ ಕಾನ್ಕ್ಲೇವ್‌ನಲ್ಲಿ 10 ನಿಮಿಷಕ್ಕೂ ಕಡಿಮೆ ಅವಧಿಯಲ್ಲಿ ಕಾಣಿಸಿಕೊಂಡಿರುವ 72ರ ಹರೆಯದ ರೊಸೆಲ್ಲಿನಿ ಆಸ್ಕರ್ ಪ್ರಶಸ್ತಿಗೆ ನಾಮನಿರ್ದೇಶನಗೊಂಡಿದ್ದಾರೆ. ಈ ಚಿತ್ರದಲ್ಲಿ ಸಿಸ್ಟರ್ ಆಗ್ನೆಸ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.

ಅವರ ಈ ನಾಮನಿರ್ದೇಶನವು ಪಾತ್ರ ಕಡಿಮೆ ಅವಧಿ ಹೊಂದಿದ್ದರೂ, ಪ್ರಭಾವಶಾಲಿಯಾಗಿರೋದು ಪ್ರಮುಖ ಅನ್ನೋದನ್ನು ಸಾಬೀತುಪಡಿಸಿದೆ. ಕಾನ್ಕ್ಲೇವ್‌ನಲ್ಲಿ ಅವರ ಒಟ್ಟು ಸ್ಕ್ರೀನ್ ಟೈಮ್ 10 ನಿಮಿಷಕ್ಕೂ ಕಡಿಮೆಯಿರಬಹುದು. ಆದರೆ ಅವರ ಅಭಿನಯವು ಚಿತ್ರದ ನಿರೂಪಣೆಯಲ್ಲಿ ಬಹು ಮುಖ್ಯವಾಗಿ ಕಾರ್ಯನಿರ್ವಹಿಸಿದೆ. ರೊಸೆಲ್ಲಿನಿ ಆಸ್ಕರ್ ನಾಮಿನೇಷನ್‌ನಲ್ಲಿ 'ವಿಕೆಡ್'ನ ಅರಿಯಾನಾ ಗ್ರಾಂಡೆ, 'ಎ ಕಂಪ್ಲೀಟ್ ಅನ್‌ನೋನ್'ನ ಮೋನಿಕಾ ಬಾರ್ಬರೋ ಮತ್ತು 'ಎಮಿಲಿಯಾ ಪೆರೆಜ್'ನ ಜೋಯಿ ಸಲ್ಡಾನಾ ಸೇರಿದಂತೆ ಇತರೆ ಸ್ಪರ್ಧಿಗಳಿಂದ ತೀವ್ರ ಸ್ಪರ್ಧೆ ಎದುರಿಸಲಿದ್ದಾರೆ.

ಅತ್ಯಂತ ಕಡಿಮೆ ಸ್ಕ್ರೀನ್‌ಟೈಮ್‌ನಲ್ಲಿ ನಟಿಸಿ ಆಸ್ಕರ್ ಪ್ರವೇಶಿಸಿದ್ದು ಇಸಾಬೆಲ್ಲೆ ರೊಸೆಲ್ಲಿನಿ ಮಾತ್ರವಲ್ಲ. ಈ ಗೌರವವು ಬೀಟ್ರಿಸ್ ಸ್ಟ್ರೈಟ್ ಅವರಿಗೂ ಸಲ್ಲುತ್ತದೆ. ಅವರು ಸಿಡ್ನಿ ಲ್ಯೂಮೆಟ್‌ರ ನೆಟ್‌ವರ್ಕ್ (1976)ನಲ್ಲಿ ಲೂಯಿಸ್ ಸ್ಕುಮಾಚರ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದರು. ಕೇವಲ 5 ನಿಮಿಷ, 2 ಸೆಕೆಂಡುಗಳ ಕಾಲ ನಟಿಸಿದ್ದರು. ಕಡಿಮೆ ಸ್ಕ್ರೀನ್‌ಟೈಮ್ ಹೊರತಾಗಿಯೂ ಪ್ರತಿಷ್ಠಿತ ಆಸ್ಕರ್ ಗಳಿಸಬಹುದಾದ ಪ್ರದರ್ಶನಗಳ ಬಗ್ಗೆ ಇದು ಒಂದು ರೀತಿಯ ಮಾನದಂಡವನ್ನು ನಿಗದಿಪಡಿಸಿದೆ.

ಶೇಕ್ಸ್‌ಪಿಯರ್ ಇನ್ ಲವ್ (1998) ಚಿತ್ರದಲ್ಲಿ ರಾಣಿ ಎಲಿಜಬೆತ್ I ಪಾತ್ರದಲ್ಲಿ ನಟಿಸಿದ ಡೇಮ್ ಜೂಡಿ ಡೆಂಚ್ ಪೋಷಕ ನಟಿ ಪ್ರಶಸ್ತಿಯಲ್ಲಿ ನಾಮನಿರ್ದೇಶನಗೊಂಡಿದ್ದರು. 5 ನಿಮಿಷ 52 ಸೆಕೆಂಡುಗಳ ಕಾಲ ಮಾತ್ರ ನಟಿಸಿದರಾದರೂ, ಅತ್ಯುತ್ತಮ ಪೋಷಕ ನಟಿ ಆಸ್ಕರ್ ಪ್ರಶಸ್ತಿಯನ್ನು ಗಿಟ್ಟಿಸಿಕೊಂಡರು. ಅಷ್ಟರ ಮಟ್ಟಿಗೆ ಅವರ ಪಾತ್ರ ಮತ್ತು ಅಭಿನಯ ಪವರ್‌ಫುಲ್ ಆಗಿತ್ತು. ಹರ್ಮಿಯೋನ್ ಬ್ಯಾಡ್ಲಿ ಅತ್ಯಂತ ಕಡಿಮೆ ಸ್ಕ್ರೀನ್‌ಟೈಮ್ ಹೊಂದಿ ದಾಖಲೆ ಬರೆದಿದ್ದಾರೆ. ಕೇವಲ 2 ನಿಮಿಷ 19 ಸೆಕೆಂಡುಗಳಲ್ಲಿ ಕಾಣಿಸಿಕೊಂಡಿದ್ದರು. ಅವರು 1959ರಲ್ಲಿ ಇಂಗ್ಲೆಂಡ್‌ನಲ್ಲಿ ನಿರ್ಮಿಸಲಾದ ರೂಮ್ ಅಟ್ ದಿ ಟಾಪ್ ಡ್ರಾಮಾದಲ್ಲಿ ನಟಿಸಿ ಅತ್ಯುತ್ತಮ ಪೋಷಕ ನಟಿ ವಿಭಾಗದಲ್ಲಿ ನಾಮನಿರ್ದೇಶನಗೊಂಡರು.

# ಅವೆರಡು ಪಾರ್ಟ್ ಚೆನ್ನಾಗಿದ್ರೆ ಮಾತ್ರ ಬಾಲಿವುಡ್‌ನಲ್ಲಿ ಪಟ್ಟ, ಇಲ್ಲದಿದ್ರೆ ಚಟ್ಟ



ನಟಿ ಪ್ರಿಯಾಂಕಾ ಚೋಪ್ರಾ ಸದ್ಯ ಅಮೆರಿಕದ ಸೊಸೆ. ಪ್ರಿಯಾಂಕಾ ಚೋಪ್ರಾ ಮತ್ತು ನಿಕ್ ಜೋನಸ್ ಅವರು ತಮ್ಮ ಪುತ್ರಿ ಮಾಲ್ತಿ ಮೇರಿಯ ಜೊತೆ ಲೈಫ್ ಎಂಜಾಯ್ ಮಾಡುತ್ತಿದ್ದಾರೆ.

ಅಮೆರಿಕದ ಪಾಪ್ ಸಿಂಗರ್ ನಿಕ್ ಜೋನಸ್ ಅವರನ್ನು 2018ರಲ್ಲಿ ಮದುವೆಯಾದ ಬಳಿಕ ನಟಿ, ಬಾಲಿವುಡ್ ಜಗತ್ತಿನಿಂದ ದೂರವೇ ಉಳಿದಿದ್ದಾರೆ. ಹಾಲಿವುಡ್ ವೆಬ್ ಸಿರೀಸ್ ಮಾಡುತ್ತಾ, ಅಲ್ಲಿ ಹಲವಾರು ಟಿವಿ ಶೋ, ಸಂದರ್ಶನಗಳು ಹಾಗೂ ಸುತ್ತಾಟಗಳಲ್ಲಿ ನಟಿ ಪ್ರಿಯಾಂಕಾ ಚೋಪ್ರಾ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ.

2017ರಲ್ಲಿ, ಹಾಲಿವುಡ್‌ನಲ್ಲಿ ವಿಶ್ವದ ಎರಡನೇ ಅತ್ಯಂತ ಸುಂದರ ಮಹಿಳೆಯಾಗಿ ಪ್ರಿಯಾಂಕಾ ಚೋಪ್ರಾ ಆಯ್ಕೆಯಾಗಿದ್ದರು. ಹಾಲಿವುಡ್ ನಟಿಯರಾದ ಏಂಜಲಿನಾ ಜೋಲಿ, ಎಮ್ಮಾ ವಾಟ್ಸನ್, ಬ್ಲೇಕ್ ಲೈವ್ಲಿ ಹಾಗೂ ಮಿಶೆಲ್ ಒಬಾಮ ಅವರನ್ನು ಹಿಂದಿಕ್ಕಿ ಈ ಸಾಧನೆಗೆ ಪಾತ್ರರಾಗಿದ್ದರು.

2022ರಲ್ಲಿ ಬಾಡಿಗೆ ತಾಯ್ತನದ ಮೂಲಕ ಪ್ರಿಯಾಂಕಾ ಚೋಪ್ರಾ ಹೆಣ್ಣು ಮಗುವಿನ ತಾಯಿಯಾಗಿದ್ದಾರೆ. ಸದ್ಯ ಬಾಲಿವುಡ್‌ಗೆ ಬೈ ಬೈ ಹೇಳಿದ್ದಾರೆ. ಸದ್ಯ ನಟಿ ಪ್ರಿಯಾಂಕಾ ಚೋಪ್ರಾ ಯಾವುದೇ ಹಿಂದಿ ಚಿತ್ರದಲ್ಲಿ ನಟಿಸುತ್ತಿಲ್ಲ, ಯಾವುದೇ ಬಾಲಿವುಡ್ ಚಿತ್ರದ ಆಫರ್‌ಅನ್ನು ಅವರು ಒಪ್ಪಿಕೊಂಡಿಲ್ಲ. ಹಾಲಿವುಡ್ ಸಿನಿಮಾ, ಸೀರಿಯಲ್ ಹಾಗೂ ವೆಬ್ ಸಿರೀಸ್‌ನಲ್ಲಿ ಮಾತ್ರ ನಟಿಸುತ್ತಿದ್ದಾರೆ.

ತಮಿಳು ಸಿನಿಮಾ ತಮಿಳನ್ (2002)ರ ಮೂಲಕ ಬಣ್ಣದ ಜಗತ್ತಿಗೆ ಕಾಲಿಟ್ಟ ನಟಿ, 2000ರಲ್ಲಿ ವಿಶ್ವಸುಂದರಿ ಕಿರೀಟ ಮುಡಿಗೇರಿಸಿಕೊಂಡ ಬಳಿಕ ಸಿನಿಮಾ ಅವಕಾಶವನ್ನು ಪಡೆದರು. ಬಾಲಿವುಡ್‌ನಲ್ಲಿ ಹೀರೋ: ಲವ್ ಸ್ಟೋರಿ ಆಫ್ ಎ ಸ್ಪೈ ಎಂಬ ಸಿನಿಮಾದ (2003) ಮೂಲಕ ಸಿನಿಮಾ ಜರ್ನಿಯನ್ನು ಶುರು ಮಾಡಿದರು. ಸದ್ಯ ಹಾಲಿವುಡ್‌ನಲ್ಲಿ ಬಿಜಿಯಾಗಿದ್ದು, ಮಗಳ ಜೊತೆ ಎಂಜಾಯ್ ಮಾಡುತ್ತಿದ್ದಾರೆ. ಪತಿಯ ಜೊತೆ ಅಮೆರಿಕದಲ್ಲಿ ಸೆಟ್ಲ್ ಆಗಿದ್ದಾರೆ. ಅವರು ಅಲ್ಲಿ ಹೋಟೆಲ್ ಉದ್ಯಮವನ್ನೂ ಆರಂಭಿಸಿದ್ದರು. ಪಾರ್ಟನರ್ ಜೊತೆ ಹೊಂದಾಣಿಕೆ ಆಗದ ಕಾರಣ ಅವರು ಉದ್ಯಮದಿಂದ ಹೊರ ಬಂದರು.

ಆಗಾಗ ಹಾಲಿವುಡ್ ಪಾಡ್‌ಕಾಸ್ಟ್ ಮತ್ತು ಸಂದರ್ಶನಗಳಲ್ಲಿ ಭಾಗಿಯಾಗುವ ಪ್ರಿಯಾಂಕಾ ತಮ್ಮ ಲೈಫ್ ಜರ್ನಿ ಬಗ್ಗೆ ಹೇಳಿಕೊಳ್ಳುತ್ತಾರೆ. ಈ ಹಿಂದೆ ಬಾಲಿವುಡ್ ಬಗ್ಗೆ ನಟಿ ಹೇಳಿರುವ ವಿಡಿಯೋ ಒಂದು ಇದೀಗ ಸೋಷಿಯಲ್ ಮೀಡಿಯಾದಲ್ಲಿ ಪುನಃ ಹಲ್‌ಚಲ್ ಸೃಷ್ಟಿಸುತ್ತಿದೆ. ಪ್ರಿಯಾಂಕ ಚೋಪ್ರಾ 'ಎಮಿ ಅವಾರ್ಡ್ 2016'ರ ಕಾರ್ಯಕ್ರಮದಲ್ಲಿ ವರದಿಗಾರರ ಜತೆ ಮಾತನಾಡುತ್ತ ಹೇಳಿರುವ ಮಾತೊಂದು ಪುನಃ ವೈರಲ್ ಆಗಿದೆ. ಭಾರತೀಯ ಸಿನಿಮಾಗಳ ಬಗ್ಗೆ ಈಕೆ ಹೇಳಿರುವ ಮಾತುಗಳ ಬಗ್ಗೆ ಟೀಕೆ ಹಾಗೂ ಆಕ್ರೋಶ ವ್ಯಕ್ತವಾಗುತ್ತಿದೆ.

ಅಷ್ಟಕ್ಕೂ ನಟಿ ಹೇಳಿದ್ದೇನೆಂದರೆ, ಬಾಲಿವುಡ್‌ನ ಎಲ್ಲಾ ಡ್ಯಾನ್ಸ್‌ಗಳಲ್ಲಿ ಎಲ್ಲ ಮೂವ್‌ಮೆಂಟ್‌ಗಳು ಸೇರಿದಂತೆ ಇಂಡಸ್ಟ್ರಿ ಹಿಪ್ಸ್ ಮತ್ತು ಬೂಬ್ಸ್ (ಸೊಂಟ ಮತ್ತು ಸ್ತನಗಳು) ಮೇಲೆ ನಿಂತಿವೆ ಎಂದಿದ್ದರು. ಇವೆರಡು ಪಾರ್ಟ್ ಚೆನ್ನಾಗಿದ್ದರೆ ಪಟ್ಟ ಕಟ್ಟುತ್ತಾರೆ, ಇಲ್ಲದಿದ್ದರೆ ಅವರಿಗೆ ಚಟ್ಟನೇ ಗತಿ ಎನ್ನುವ ಅರ್ಥದಲ್ಲಿ ನಟಿ ಹೇಳಿದ್ದರು. ಹೀಗೆ ಹೇಳುತ್ತಲೇ ಅದರ ಕುರಿತು ಒಂದೆರಡು ಹೆಜ್ಜೆ ಹಾಕಿ ತೋರಿಸಿದ್ದರು. ಈಕೆ ನೀಡಿರುವ ಈ ಹೇಳಿಕೆ ಇದೀಗ ಪುನಃ ಸಾಮಾಜಿಕ ತಾಣಗಳಲ್ಲಿ ಟ್ರೋಲ್ ಆಗುತ್ತಿದೆ. ಬಾಲಿವುಡ್‌ನಲ್ಲಿ ಎಲ್ಲವೂ ಸರಿಯಿಲ್ಲ ಎನ್ನುವುದು ನಿಜವೇ. ಆದರೆ ಬಾಲಿವುಡ್ ನಟಿಯೊಬ್ಬಳು ಇಷ್ಟು ವರ್ಷ ಬಾಲಿವುಡ್‌ನಲ್ಲಿ ಕೆಲಸ ಮಾಡಿದ ಬಳಿಕ ಈ ರೀತಿ ಇಂಡಸ್ಟ್ರಿಯ ಹೆಸರನ್ನು ಕೆಡಿಸುತ್ತಿರುವುದು ಸರಿಯಲ್ಲ ಎಂದು ಹಲವಾರು ಮಂದಿ ಹೇಳುತ್ತಿದ್ದಾರೆ.

ಆದರೆ ಕೆಲವರು ನಟಿಯ ಪರವಾಗಿದ್ದು, ಪ್ರಿಯಾಂಕಾ ಏನೂ ತಪ್ಪು ಹೇಳಿಲ್ಲ, ಇರುವ ವಿಷಯವನ್ನೇ ಹೇಳಿದ್ದಾರೆ. ಈಕೆ ಹೇಳಿದ್ದರಲ್ಲಿ ತಪ್ಪೇನಿದೆ ಎನ್ನುತ್ತಿದ್ದಾರೆ. ಇವತ್ತಿನ ನಟಿಯರು ವೇಷ ಭೂಷಣ ನೋಡಿದರೆ ಪ್ರಿಯಾಂಕಾ ಹೇಳಿರುವುದರಲ್ಲಿ ಏನಾದರೂ ತಪ್ಪು ಕಾಣಿಸ್ತಿದೆಯಾ ಎಂದು ಪ್ರಶ್ನಿಸುತ್ತಿದ್ದಾರೆ. ಇನ್ನು ಕೆಲವರು ಇಷ್ಟು ವರ್ಷ ನೀವೇನು ಮಾಡಿದ್ದು ಇದೇ ಅಲ್ವಾ ಎಂದು ಪ್ರಶ್ನಿಸುತ್ತಿದ್ದಾರೆ.

# ಡೆವಿಲ್ ಬ್ಯೂಟಿ ರಚನಾ ರೈ ಸಖತ್ ಸುಂದರಿ



ಸ್ಯಾಂಡಲ್ ವುಡ್ ನಟ ದರ್ಶನ್ ತೂಗುದೀಪ ಅಭಿನಯಿಸಲಿರುವ ಬಹು ನಿರೀಕ್ಷಿತ ಸಿನಿಮಾ ಡೆವಿಲ್ ದಿ ಹೀರೋ ಶುರುವಾಗಿ ವರ್ಷಗಳು ಕಳೆದಿದ್ದರೂ, ಅದರ ಮಧ್ಯೆ ಹಲವು ಸಮಸ್ಯೆಗಳು ಕಾಣಿಸಿಕೊಂಡಿದ್ದು, ಸಿನಿಮಾ ಶೂಟಿಂಗ್ ಶುರುವಾಗೋದೇ ತಡವಾಗಿತ್ತು.

ಡೆವಿಲ್ ಸಿನಿಮಾಗೆ ನಾಯಕಿಯಾಗಿ ಮಂಗಳೂರು ಬ್ಯೂಟಿ ರಚನಾ ರೈ (ಖಚಿಛಿಚಿಟಿಚಿ ಖಚಿ) ಆಯ್ಕೆಯಾಗಿದ್ದರು. ಇನ್ನೇನು ಸ್ಟಾರ್ ನಟನ ಸಿನಿಮಾದಲ್ಲಿ ನಾಯಕಿಯಾಗಿ ರಚನಾ ಮಿಂಚಲಿದ್ದಾರೆ ಎನ್ನುವಷ್ಟರಲ್ಲಿ ಆರಂಭದಲ್ಲಿ ದರ್ಶನ್ ಕೈಗೆ ಪೆಟ್ಟು ಮಾಡಿಕೊಂಡಿದ್ದರಿಂದ ಸಿನಿಮಾ ಮುಂದೆ ಹೋಗಿತ್ತು., ಬಳಿಕ ದರ್ಶನ್ ಕೊಲೆ ವಿಚಾರದಲ್ಲಿ ಜೈಲು ಸೇರಿ ಸಿನಿಮಾ ಮತ್ತಷ್ಟು ತಡವಾಯಿತು.

ಹಾಗಾಗಿ ರಚನಾ ರೈ ಸಿನಿಮಾ ಕರಿಯರ್ ಸ್ವಲ್ಪ ಡೇಂಜರ್ ಝೋನ್ ನಲ್ಲೇ ಇತ್ತು ಎನ್ನುವಂತಿತ್ತು. ಒಂದು ಕಡೆ ಸಿನಿಮಾ ಆರಂಭವಾಗಿ ವರ್ಷಗಳು ಕಳೆದರೂ ಶೂಟಿಂಗ್ ನಡೆದಿಲ್ಲ, ಮತ್ತೊಂದು ಕಡೆ ಒಂದೊಂದು ತಡೆಯಿಂದಾಗಿ ರಚನಾ ನಟಿಸಲಿರುವ ಡೆವಿಲ್ ಸಿನಿಮಾ ಬಿಡುಗಡೆಯಾಗುವುದೇ ಎನ್ನುವ ಮಾತು ಕೂಡ ಕೇಳಿ ಬಂದಿತ್ತು.

ಇದೀಗ ಎಲ್ಲವೂ ಸರಿಯಾಗಿದ್ದು, ಶೀಘ್ರದಲ್ಲೇ ಸಿನಿಮಾ ಶೂಟಿಂಗ್ ಕೂಡ ಆರಂಭವಾಗಲಿದೆ. ಈ ನಡುವೆ ರಚನಾ ರೈ ತಮ್ಮ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿರುವ ಫೋಟೋಗಳು ಸಖತ್ ಸೌಂಡ್ ಮಾಡುತ್ತಿವೆ. ಕೇಸರಿ ಬಣ್ಣದ ಸೀರೆಯಲ್ಲಿ ರಚನಾ ತುಂಬಾನೆ ಮುದ್ದಾಗಿ ಕಾಣಿಸುತ್ತಿದ್ದಾರೆ.

ಕೇಸರಿ ಬಣ್ಣದ ಮೈಸೂರು ಸಿಲ್ಕ್ ಸೀರೆ, ಕೆಂಪು ಬಣ್ಣದ ಬ್ಲೌಸ್, ಕುತ್ತಿಗೆಯಲ್ಲಿ ಆಂಟಿಕ್ ಹೆವಿ ಜ್ಯುವೆಲರಿ, ಕಿವಿಯಲ್ಲಿ ಜುಮುಕಿ, ಮುಂದಾಲೆ, ಕೈಬಳೆ ಧರಿಸಿ ಅಪ್ಪಟ ದೇವತೆಯಂತೆ ಕಾಣಿಸುತ್ತಿದ್ದಾರೆ ರಚನಾ. ರಚನಾ ನೋಡಿ, ನಿಮಗೆ ಚಂದನವನದಲ್ಲಿ ಉಜ್ವಲ ಭವಿಷ್ಯ ಇದೆ ಎಂದಿದ್ದಾರೆ ಫ್ಯಾನ್ಸ್, ಜೊತೆಗೆ ಡೆವಿಲ್ ಬ್ಯೂಟಿ ಅಂತಾನೂ ಕಾಮೆಂಟ್ ಮಾಡಿದ್ದಾರೆ.

ಇನ್ನು ಡೆವಿಲ್ ರಚನಾ ರೈ ಮೊದಲ ಸಿನಿಮಾದ ಅಂದ್ರೆ ಖಂಡಿತಾ ಅಲ್ಲ, ಈಗಾಗಲೇ ವಾಮನ ಎನ್ನುವ ಕನ್ನಡ ಸಿನಿಮಾದಲ್ಲಿ ನಟಿಸಿದ್ದಾರೆ. ಅದುವೇ ನಟಿಯ ಮೊದಲ ಕನ್ನಡ ಸಿನಿಮಾ. ಅಷ್ಟೇ ಅಲ್ಲ ಶ್ರೀರಂಗ ಹಾಗೂ ಭುವನಂ ಗಗನಂ ಸಿನಿಮಾದಲ್ಲೂ ರಚನಾ ನಟಿಸಿದ್ದಾರೆ.

ಇವರು ಈಗಾಗಲೇ ತುಳು ಸಿನಿಮಾಗಳಲ್ಲೂ ನಟಿಸಿ, ಸೈ ಎನಿಸಿಕೊಂಡಿದ್ದಾರೆ. ರೂಪೇಶ್ ಶೆಟ್ಟಿ, ನಟಿಸಿ, ನಿರ್ದೇಶಿಸಿರುವ ಸರ್ಕಸ್ ಸಿನಿಮಾದ ನಾಯಕಿ ಇವರೇ. ಅಷ್ಟೇ ಅಲ್ಲ ಬ್ಯಾಡ್ಮಿಂಟನ್ ಪ್ಲೇಯರ್ ಆಗಿರುವ ಕುಡ್ಲದ ಬೆಡಗಿ ರಚನಾ, ಮಾಡೆಲ್ ಕೂಡ ಹೌದು, ಡ್ಯಾನ್ಸರ್ ಕೂಡ ಹೌದು ಹಾಗೇ ಬರಹಗಾರ್ತನೂ ಹೌದು. ಓ ಮೈ ಡಾಗ್ ಎಂಬ ಪುಸ್ತಕ ಬರೆದಿರುವ ರಚನಾ ಬಹುಮುಖಪ್ರತಿಭೆ ಅಂದ್ರೆ ಸುಳ್ಳಲ್ಲ.

ಪ್ರಕಾಶಕ- ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು-560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು-562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**

Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123

Email-mussanje2010@gmail.com, Phone: **944807487**